ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೧೧೦

**ಪಟ್ಟಿ – ೦೬**

# ಕರ್ನಾಟಕ ವಿಧಾನ ಪರಿಷತ್ತು

ನೂರ ಮೂವತ್ತ ನಾಲ್ಕನೇ ಅಧಿವೇಶನ

ಮಂಗಳವಾರ, ದಿನಾಂಕ : ೨೦ನೇ ಫೆಬ್ರವರಿ, ೨೦೧೮

---

## ಸಮೂಹ – II

೧. ಇಂಧನ ಸಚಿವರು.

೨. ಕೃಷಿ ಸಚಿವರು.

೩. ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು.

೪. ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು.

೫. ಸಹಕಾರ ಸಚಿವರು.

೬. ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು.

೭. ಜವಳಿ ಹಾಗೂ ಮುಜರಾಯಿ ಸಚಿವರು.

---

## ಕಲಬುರ್ಗಿಯಲ್ಲಿ ವಿಮಾನ ನಿಲ್ದಾಣ ಕಾಮಗಾರಿಯ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ):–**

೫೦೫ (೮೦೫) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಲಬುರ್ಗಿಯಲ್ಲಿ ವಿಮಾನ ನಿಲ್ದಾಣ ನಿರ್ಮಾಣ ಮಾಡುತ್ತಿರುವ ವಿಷಯ ಸರ್ಕಾರದ ಗಮನಕ್ಕಿದೆಯೇ ; ಇದ್ದರೆ, ಯೋಜನೆಯ ಸಂಪೂರ್ಣ ವಿವರ ನೀಡುವುದು ;

(ಆ) ಸದರಿ ವಿಮಾನ ನಿಲ್ದಾಣದ ಕಾಮಗಾರಿಗಾಗಿ ಇಲ್ಲಿಯವರೆಗೆ ಮಾಡಿದ ವೆಚ್ಚ ಎಷ್ಟು ; ಒಟ್ಟು ಯೋಜನಾ ವೆಚ್ಚದೊಂದಿಗೆ ಸಂಪೂರ್ಣ ಮಾಹಿತಿ ನೀಡುವುದು ;

(ಇ) ಸದರಿ ವಿಮಾನ ನಿಲ್ದಾಣವು ಸಾರ್ವಜನಿಕರ ಸೇವೆಗೆ ಯಾವಾಗ ಸಮರ್ಪಣೆ ಹಾಗೂ ವಿಮಾನಗಳ ಹಾರಾಟವನ್ನು ಯಾವ ಕಾಲಮಿತಿಯೊಳಗೆ ಪ್ರಾರಂಭಿಸಲಾಗುವುದು ; ವಿಮಾನಗಳ ಸೇವೆಗಳೊಂದಿಗೆ ಸಂಪೂರ್ಣ ಮಾಹಿತಿ ನೀಡುವುದು ?

## ಹೈದರಾಬಾದ್–ಕರ್ನಾಟಕ ಪ್ರದೇಶದಲ್ಲಿರುವ ಮುಜರಾಯಿ ದೇವಸ್ಥಾನಗಳ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ):–**

೫೦೬ (೭೭೧) ಮಾನ್ಯ ಜವಳಿ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹೈದರಾಬಾದ್–ಕರ್ನಾಟಕ ಪ್ರದೇಶದಲ್ಲಿರುವ ಮುಜರಾಯಿ ಇಲಾಖೆಗೆ ಒಳಪಟ್ಟಿರುವ ದೇವಸ್ಥಾನಗಳೆಷ್ಟು ; (ದೇವಸ್ಥಾನಗಳವಾರು ಮಾಹಿತಿ ನೀಡುವುದು)

(ಆ) ಸದರಿ ದೇವಸ್ಥಾನಗಳಿಗೆ ಭಕ್ತಾದಿಗಳಿಂದ ಬರುತ್ತಿರುವ ದೇಣಿಗೆಗಳು ಯಾವ ಯಾವ ರೂಪದಲ್ಲಿ ಸಂದಾಯವಾಗಿವೇ; (ದೇವಸ್ಥಾನಗಳವಾರು ಹಾಗೂ ಸಂದಾಯವಾದ ದೇಣಿಗೆವಾರು ಪ್ರತ್ಯೇಕ ಮಾಹಿತಿ ನೀಡುವುದು)

(ಇ) ಸದರಿ ದೇವಸ್ಥಾನಗಳ ಅಭಿವೃದ್ಧಿಗಾಗಿ ಸಂದಾಯವಾದಂತಹ ದೇಣಿಗೆಗಳು ಯಾವ ರೀತಿ ಸದ್ಬಳಕೆಯಾಗುತ್ತಿದೆ ? (ದೇವಸ್ಥಾನಗಳವಾರು, ಯೋಜನೆವಾರು ಹಾಗೂ ಮೊತ್ತವಾರು ವಿವರ ನೀಡುವುದು)

## ಕಲಬುರ್ಗಿ ಹಾಗೂ ಬೀದರ್ ಜಿಲ್ಲೆಗಳಲ್ಲಿ ತೊಗರಿ ಖರೀದಿ ಕೇಂದ್ರಗಳ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ):–**

೫೦೭ (೮೦೪) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಲಬುರ್ಗಿ ಹಾಗೂ ಬೀದರ್ ಜಿಲ್ಲೆಗಳಲ್ಲಿ ರೈತರಿಂದ ತೊಗರಿ ಖರೀದಿ ಮಾಡಲಾಗುತ್ತಿದೆಯೇ ; ಇದ್ದರೆ, ಸಂಪೂರ್ಣ ಮಾಹಿತಿ ನೀಡುವುದು;

(ಆ) ಪ್ರಸ್ತುತ ಹಂಗಾಮಿನ ಸಾಲಿನಲ್ಲಿ ರೈತರು ಬೆಳೆದಂತಹ ತೊಗರಿ ಎಷ್ಟು ; ತೊಗರಿ ಖರೀದಿ ಕೇಂದ್ರಗಳಲ್ಲಿ ನೋಂದಾಯಿತ ರೈತರ ಸಂಖ್ಯೆ ಎಷ್ಟು ಹಾಗೂ ಎಷ್ಟು ರೈತರಿಂದ ತೊಗರಿ ಖರೀದಿ ಮಾಡಲಾಗಿದೆ ; ಇದ್ದರೆ ಸಂಪೂರ್ಣ ಮಾಹಿತಿ ನೀಡುವುದು ;

(ಇ) ತೊಗರಿ ಕೇಂದ್ರಗಳಲ್ಲಿ ಚೀಲಗಳ ಕೊರತೆ ಹಾಗೂ ಇತರೆ ಸಮಸ್ಯೆಗಳಿಂದ ತೊಗರಿ ಖರೀದಿ ಸ್ಥಗಿತಗೊಂಡಿರುವ ವಿಷಯ ಸರ್ಕಾರದ ಗಮನಕ್ಕಿದೆಯೇ ; ಇದ್ದರೆ, ಕಾರಣಗಳೇನು ; (ಮಾಹಿತಿ ನೀಡುವುದು)

(ಈ) ತೊಗರಿ ಖರೀದಿಯಲ್ಲಿ ಆಗುತ್ತಿರುವ ಸಮಸ್ಯೆ/ವಿಳಂಬ ಸರಿಪಡಿಸಲು ಸರ್ಕಾರ ಮುಂದಾಗುವುದೇ ; ಇದ್ದರೆ, ಸರ್ಕಾರದ ಮುಂದಿರುವ ಕ್ರಮಗಳೇನು ?

## ಹೈದರಾಬಾದ್-ಕರ್ನಾಟಕ ಭಾಗದ ಜಿಲ್ಲೆಗಳಲ್ಲಿರುವ ರೈತರಿಗೆ ಬೆಳೆ ವಿಮೆಯ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ):-**

೫೦೮ (೭೭೨) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಹೈದರಾಬಾದ್-ಕರ್ನಾಟಕದ ೬ ಜಿಲ್ಲೆಗಳು ಹಾಗೂ ಹರಪ್ಪನಹಳ್ಳಿಯಲ್ಲಿ ಯಾವ ಯಾವ ಬೆಳೆಗಳಿಗೆ ವಿಮೆ ಅವಕಾಶವಿದೆ; ಯಾವ ಬೆಳೆಗಳಿಗೆ ಅವಕಾಶವಿರುವುದಿಲ್ಲ ; ಈ ಬೆಳೆ ವಿಮೆಯನ್ನು ಯಾವ ಅವಧಿಯಿಂದ ರೈತರಿಗೆ ನೀಡಲು ಅನುಕೂಲ ಕಲ್ಪಿಸಲಾಗಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಸದರಿ ಭಾಗದ ರೈತರ ಪೈಕಿ ಎಷ್ಟು ರೈತರು ಬೆಳೆ ವಿಮೆ ಸೌಲಭ್ಯಗಳನ್ನು ಪಡೆದಿದ್ದಾರೆ ; ಎಷ್ಟು ರೈತರು ಬೆಳೆ ವಿಮೆ ಸೌಲಭ್ಯ ಪಡೆದಿರುವುದಿಲ್ಲ ; (ಮಾಹಿತಿ ನೀಡುವುದು)

(ಇ) ಸದರಿ ಭಾಗದಲ್ಲಿ ರೈತರ ಬೆಳೆಗೆ ಯೋಗ್ಯ ಬೆಲೆ ಸಿಗದಿದ್ದಾಗ ಮತ್ತು ಪ್ರಕೃತಿ ವಿಕೋಪಗಳಿಂದ ನಷ್ಟ ಉಂಟಾದಾಗ, ಬೆಳೆಗಾಗಿ ಮಾಡಿದ ಸಾಲಭಾದೆ ಜಾಸ್ತಿಯಾದಾಗ, ಈ ಬೆಳೆ ವಿಮೆ ವ್ಯಾಪ್ತಿಗೆ ಒಳಪಡಿಸಲು ಯಾವ ಕ್ರಮ ಕೈಗೊಳ್ಳಲಾಗಿದೆ ; (ವಿವರ ನೀಡುವುದು)

(ಈ) ಈ ಭಾಗದ ಎಲ್ಲಾ ರೈತರಿಗೂ ಬೆಳೆ ವಿಮೆ ಸೌಲಭ್ಯಗಳನ್ನು ನಿರಂತರವಾಗಿ ನೀಡಲು ಸರ್ಕಾರ ಯಾವ ಯಾವ ಕ್ರಮಗಳನ್ನು ಕೈಗೊಂಡಿರುತ್ತದೆ ? (ಜಿಲ್ಲಾವಾರು ಮಾಹಿತಿ ನೀಡುವುದು)

# ಬೆಂಗಳೂರಿನಲ್ಲಿರುವ ಸಹಕಾರ ಸಂಘಗಳ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೫೧೯ (೭೭೮) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರಿನಲ್ಲಿ ಇರುವ ಒಟ್ಟು ಗೃಹ ನಿರ್ಮಾಣ ಸಹಕಾರ ಸಂಘಗಳೆಷ್ಟು ; (ಹೆಸರು, ವಿಳಾಸದೊಂದಿಗೆ ವಿವರ ನೀಡುವುದು)

(ಆ) ಈ ಸಹಕಾರ ಸಂಘಗಳು ಎಷ್ಟು ವರ್ಷಗಳಿಂದ ಕಾರ್ಯನಿರ್ವಹಿಸುತ್ತಿವೆ ; (ವಿವರ ನೀಡುವುದು)

(ಇ) ಈ ಸಹಕಾರ ಸಂಘಗಳು ನಿವೇಶನ ಹಂಚಿಕೆ ಸಲುವಾಗಿ ಖರೀದಿಸಿದ ಭೂ ವಿಸ್ತೀರ್ಣವೇನು ; ಇದಕ್ಕೆ ಹಾಕಿದ ಬಂಡವಾಳವೇನು ; (ಸಂಪೂರ್ಣ ವಿವರ ನೀಡುವುದು)

(ಈ) ಈ ಸಹಕಾರ ಸಂಘಗಳು ಎಷ್ಟು ನಿವೇಶನದಾರರುಗಳಿಗೆ ನಿವೇಶನ ಹಂಚಿಕೆ ಮಾಡಿವೆ ; (ಹೆಸರು, ವಿಳಾಸ, ನಿವೇಶನದ ಅಳತೆಯೊಂದಿಗೆ ವಿವರ ನೀಡುವುದು)

(ಉ) ಇವರುಗಳು ನಿವೇಶನದಾರರಿಗೆ ನಿವೇಶನ ನೀಡದೇ ವರ್ಷಗಟ್ಟಲೆಯಿಂದ ವಂಚಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮವೇನು ; (ವಿವರ ನೀಡುವುದು)

(ಊ) ಈ ಸಹಕಾರ ಸಂಘಗಳು ತನ್ನ ಸದಸ್ಯರಿಗೆ ನಿವೇಶನ ಹಂಚಿಕೆ ಮಾಡದೇ ಕೋಟ್ಯಾಂತರ ರೂಪಾಯಿಗಳ ಅವ್ಯವಹಾರ ಮಾಡಿರುವ ಬಗ್ಗೆ ರೇರಾ ಕಾಯ್ದೆಯ ಪ್ರಕಾರ ಕ್ರಮ ಕೈಗೊಳ್ಳಲಾಗಿದೆಯೇ ? (ವಿವರ ನೀಡುವುದು)

## ತೋಟಗಾರಿಕೆ ಇಲಾಖೆಯಲ್ಲಿ ಕೈಗೊಂಡ ಸಮೀಕ್ಷೆಗಳ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೫೧೦ (೭೭೭) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ತೋಟಗಾರಿಕೆ ಇಲಾಖೆಯಲ್ಲಿ ಕೈಗೊಂಡಿರುವ ಸಮೀಕ್ಷೆ ಯಾವುದು; ಯಾವ ವರ್ಷದಿಂದ ಕೈಗೊಳ್ಳಲಾಗಿದೆ ; ಆಯ್ಕೆಯಾಗಿರುವ ಜಿಲ್ಲೆಗಳ ವಿವರ, ೧ನೇ ಹಂತದಲ್ಲಿ ಪೂರ್ಣಗೊಳಿಸಿರುವ ಜಿಲ್ಲೆಗಳ ಆರ್ಥಿಕ/ಭೌತಿಕ ವಿವರ ಒದಗಿಸುವುದು ;

(ಆ) ತೋಟಗಾರಿಕೆ ಬೆಳೆಗಳ ಮೂಲಾಧಾರ ಸಮೀಕ್ಷೆಯನ್ನು ಈವರೆವಿಗೂ ಕೈಗೊಳ್ಳದೇ ಇರುವುದಕ್ಕೆ ಕಾರಣವೇನು ; (ವಿವರ ನೀಡುವುದು)

(ಇ) ೨೦೧೬–೧೭ನೇ ಸಾಲಿನಿಂದ ಇಲಾಖೆಯ ಯೋಜನೆಗಳ ಮಾಹೆವಾರು ಆರ್ಥಿಕ/ಭೌತಿಕ ವಿವರ, ವಿವಿಧ ಸೌಲಭ್ಯಗಳು, ರಿಯಾಯಿತಿಗಳ ವಿವರಗಳನ್ನು ನೀಡುವುದು ;

(ಈ) ತೋಟಗಾರಿಕೆ ಇಲಾಖೆಯು ಯಾವ ಯೋಜನೆಗಳನ್ನು ಮಹಿಳೆಯರಿಗಾಗಿ ಮೀಸಲಿರಿಸಿದೆ ; ಇವುಗಳ ಅನುಷ್ಠಾನದ ಮಾಹೆವಾರು ಪ್ರಗತಿ ವಿವರಗಳನ್ನು ಜಿಲ್ಲಾವಾರು, ಫಲಾನುಭವಿವಾರು ೨೦೧೬–೧೭ನೇ ಸಾಲಿನಿಂದ ಈವರೆಗಿನ ವಿವರ ನೀಡುವುದು ;

(ಉ) ಪ್ರಸ್ತುತ ವರ್ಷದಲ್ಲಿ ಅಲ್ಪಸಂಖ್ಯಾತರು ಹಿಂದುಳಿದ ವರ್ಗಗಳಿಗಾಗಿ ಯಾವ ರೀತಿಯ ಯೋಜನೆಗಳನ್ನು ಹಮ್ಮಿಕೊಳ್ಳಲಾಗಿದೆ ; ಈವರೆವಿಗೂ ಎಷ್ಟು ಫಲಾನುಭವಿಗಳಿಗೆ ಉಪಯೋಗವಾಗಿದೆ ; (ಜಿಲ್ಲಾವಾರು, ಫಲಾನುಭವಿವಾರು ವಿವರ ನೀಡುವುದು)

(ಊ) ತೋಟಗಾರಿಕೆ ಇಲಾಖೆಯಲ್ಲಿ ಮೌಲ್ಯಮಾಪನ ಕೈಗೊಂಡಿರುವ ಯೋಜನೆಗಳು ಯಾವುವು ; ₹. ೫.೦೦ ಕೋಟಿಗಿಂತ ಹೆಚ್ಚಿನ ಅನುದಾನವುಳ್ಳ ಯೋಜನೆಗಳು ಯಾವುವು ; ಇವುಗಳಿಗೆ ಮೌಲ್ಯಮಾಪನ ಕೈಗೊಳ್ಳಲಾಗಿದೆಯೇ ; ಇಲ್ಲದಿದ್ದಲ್ಲಿ, ಇದಕ್ಕೆ ಕಾರಣಗಳೇನು ?

## ಚೆಸ್ಕಾಂ ವತಿಯಿಂದ ಮಂಡ್ಯದಲ್ಲಿನ ಕಾಮಗಾರಿ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೫೧೧ (೭೮೧) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಂಡ್ಯ ಜಿಲ್ಲೆಯಲ್ಲಿ ಚೆಸ್ಕಾಂ ವತಿಯಿಂದ ಕಳೆದ ನಾಲ್ಕು ವರ್ಷಗಳಲ್ಲಿ ಕೈಗೊಂಡ ಕಾಮಗಾರಿಗಳಾವುವು ;

(ಆ) ಕಳೆದ ನಾಲ್ಕು ವರ್ಷಗಳಲ್ಲಿ ಹೊಸದಾಗಿ ಎಷ್ಟು ಪವರ್ ಸ್ಟೇಷನ್‌ಗಳನ್ನು ನಿರ್ಮಿಸಲಾಗಿದೆ ; ತಗುಲಿದ ವೆಚ್ಚವೆಷ್ಟು ; (ವಿವರ ನೀಡುವುದು)

(ಇ) ಕಳೆದ ನಾಲ್ಕು ವರ್ಷಗಳಲ್ಲಿ ಹೊಸದಾಗಿ ಹಾಕಲಾಗಿರುವ ಲೈನ್‌ಗಳೆಷ್ಟು ; ತಗುಲಿದ ವೆಚ್ಚವೆಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಈ) ಮಂಡ್ಯ ಜಿಲ್ಲೆಯಲ್ಲಿ ರೈತರ ವಿದ್ಯುತ್ ಸಮಸ್ಯೆ ನೀಗಿಸಲು ಕೈಗೊಂಡ ಕ್ರಮಗಳೇನು ; (ತಾಲ್ಲೂಕುವಾರು ವಿವರ ನೀಡುವುದು)

(ಉ) ಮಂಡ್ಯ ಜಿಲ್ಲೆಯಲ್ಲಿ ಹೊಸದಾಗಿ ವಿದ್ಯುತ್ ಬೇಡಿಕೆ ಬಗ್ಗೆ ಬಂದಿರುವ ಮನವಿಗಳೆಷ್ಟು ; (ವಿವರ ನೀಡುವುದು)

(ಊ) ಮಂಡ್ಯ ಜಿಲ್ಲೆಯಲ್ಲಿ ಚೆಸ್ಕಾಂ ವತಿಯಿಂದ ಕೋಟ್ಯಾಂತರ ರೂಪಾಯಿಗಳನ್ನು ಕಾಮಗಾರಿಗಳಿಗೆ ವಿನಿಯೋಗಿಸಿರುವುದು ನಿಜವೇ ; ವರ್ಷಾವಾರು ತಾಲ್ಲೂಕುವಾರು ಖರ್ಚು ಮಾಡಿರುವ ವೆಚ್ಚದ ವಿವರ ನೀಡುವುದು ?

## ಮಂಡ್ಯ ಜಿಲ್ಲೆಯ ಮುಜರಾಯಿ ದೇವಸ್ಥಾನಗಳ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೫೧೨ (೭೭೯) ಮಾನ್ಯ ಜವಳಿ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಂಡ್ಯ ಜಿಲ್ಲೆಯಲ್ಲಿ ಮುಜರಾಯಿ ವ್ಯಾಪ್ತಿಗೆ ಬರುವ ದೇವಸ್ಥಾನಗಳಾವುವು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಈ ದೇವಾಲಯಗಳಲ್ಲಿ ಎಷ್ಟು ದೇವಾಲಯಗಳು ಉತ್ತಮ ಸ್ಥಿತಿಯಲ್ಲಿವೆ ; ಎಷ್ಟು ಶಿಥಿಲಗೊಂಡಿವೆ ; (ವಿವರ ನೀಡುವುದು)

(ಇ) ಕಳೆದ ಮೂರು ವರ್ಷಗಳಲ್ಲಿ ಶಿಥಿಲಗೊಂಡ ದೇವಸ್ಥಾನಗಳ ಜೀರ್ಣೋದ್ಧಾರಕ್ಕಾಗಿ ಸಲ್ಲಿಸಲಾದ ಮನವಿಗಳೆಷ್ಟು ; (ವಿವರ ನೀಡುವುದು)

(ಈ) ಯಾವ ಯಾವ ಮನವಿಗಳಿಗೆ ಎಷ್ಟು ಹಣ ಮಂಜೂರಾಗಿದೆ ; (ತಾಲ್ಲೂಕುವಾರು ವಿವರ ನೀಡುವುದು)

(ಉ) ಶಿಥಿಲಗೊಂಡ ದೇವಸ್ಥಾನಗಳ ಜೀರ್ಣೋದ್ದಾರ ಕಾರ್ಯವನ್ನು ಎಷ್ಟು ಕಾಲಮಿತಿಯೊಳಗೆ ಪೂರ್ಣಗೊಳಿಸಲಾಗುವುದು ? (ಮಾಹಿತಿ ನೀಡುವುದು)

## ಬೆಳೆ ವಿಮೆ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೫೧೩ (೭೮೦) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಂಡ್ಯ ಜಿಲ್ಲೆಯಲ್ಲಿ ಪ್ರಧಾನಮಂತ್ರಿ ಫಸಲ್ ವಿಮಾ ಯೋಜನೆಡಿಯಲ್ಲಿ ಇದುವರೆಗೆ ವಿಮಾ ಕಂತು ಪಾವತಿಸಿ ನೋಂದಾಯಿಸಿರುವ ರೈತರ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಬೆಳೆ ವಿಮೆ ಮಾಡಿರುವ ರೈತರ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಯಾವ ಯಾವ ಬೆಳೆಗಳಿಗೆ ಎಷ್ಟು ವಿಮಾ ಪಾವತಿಸಲಾಗಿದೆ ; ಹಾಗೂ ಯಾವ ಮಾನದಂಡದ ಮೇಲೆ ಬೆಳೆನಷ್ಟ ಅಂದಾಜು ಮಾಡಲಾಗುತ್ತಿದೆ ? (ಪೂರ್ಣ ವಿವರ ನೀಡುವುದು)

## ರಾಜ್ಯದಲ್ಲಿ ರಾಷ್ಟ್ರೀಯ ಹೆದ್ದಾರಿಗಳಿಗೆ ಬಿಡುಗಡೆಯಾದ ಅನುದಾನದ ಬಗ್ಗೆ

**ಶ್ರೀ ಭಾನುಪ್ರಕಾಶ (ವಿಧಾನಸಭೆಯಿಂದ ಚುನಾಯಿತರಾದವರು):–**

೫೧೪ (೮೯) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ನಾಲ್ಕು ವರ್ಷಗಳಿಂದ ರಾಷ್ಟ್ರೀಯ ಹೆದ್ದಾರಿ ಅಭಿವೃದ್ಧಿಗೆ ಕೇಂದ್ರ ಸರ್ಕಾರ ಮತ್ತು ರಾಜ್ಯ ಸರ್ಕಾರಗಳು ಬಿಡುಗಡೆ ಮಾಡಿದ ಅನುದಾನವೆಷ್ಟು; (ವರ್ಷವಾರು ವಿವರ ನೀಡುವುದು)

(ಆ) ಬಿಡುಗಡೆಯಾದ ಅನುದಾನದಲ್ಲಿ ಕೈಗೊಂಡಿರುವ ಕಾಮಗಾರಿಗಳು ಯಾವುವು ; (ವರ್ಷವಾರು ವಿವರ ನೀಡುವುದು)

(ಇ) ಸದರಿ ಕಾಮಗಾರಿಗಳು ಯಾವ ಹಂತದಲ್ಲಿವೆ ; ಮುಕ್ತಾಯವಾಗಿರುವ ಕಾಮಗಾರಿಗಳು ಎಷ್ಟು ;

(ಈ) ಬಿಡುಗಡೆಯಾದ ಅನುದಾನದಲ್ಲಿ ಖರ್ಚಾಗದೆ ಉಳಿದ ಅನುದಾನವೆಷ್ಟು ?

## ತಿಪಟೂರು ನಗರದಲ್ಲಿ ಹಾದು ಹೋಗುವ ರಾಷ್ಟ್ರೀಯ ಹೆದ್ದಾರಿ ಅನುದಾನದ ಬಗ್ಗೆ

**ಶ್ರೀ ಭಾನುಪ್ರಕಾಶ (ವಿಧಾನಸಭೆಯಿಂದ ಚುನಾಯಿತರಾದವರು):–**

೫೧೫ (೮೧೦) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೦೮ನೇ ಸಾಲಿನಿಂದ ಇದುವರೆವಿಗೂ ತಿಪಟೂರು ನಗರದಲ್ಲಿ ಹಾದು ಹೋಗುವ ರಾಷ್ಟ್ರೀಯ ಹೆದ್ದಾರಿ ಅಭಿವೃದ್ಧಿಗೆ ಬಿಡುಗಡೆಯಾದ ಅನುದಾನವೆಷ್ಟು; (ವರ್ಷವಾರು ಮಾಹಿತಿ ನೀಡುವುದು)

(ಆ) ಬಿಡುಗಡೆಯಾದ ಅನುದಾನದಲ್ಲಿ ಕೇಂದ್ರ ಮತ್ತು ರಾಜ್ಯ ಸರ್ಕಾರದ ಪಾಲು ಎಷ್ಟು; (ವರ್ಷವಾರು ಮಾಹಿತಿ ನೀಡುವುದು)

(ಇ) ಬಿಡುಗಡೆಯಾದ ಅನುದಾನಕ್ಕೆ ಅನುಗುಣವಾಗಿ ಅಂದಾಜು ಪಟ್ಟಿಗಳನ್ನು ತಯಾರಿಸಿ, ಅನುಮೋದಿಸಿರುವ ಅಂದಾಜು ಪಟ್ಟಿಗಳು ಮತ್ತು ಸಂಬಂಧಿಸಿದ ಅಳತೆ ಪುಸ್ತಕದ ಪ್ರತಿಗಳನ್ನು ನೀಡುವುದು ;

(ಈ) ಕಾಮಗಾರಿವಾರು ಕಾಮಗಾರಿಗಳನ್ನು ನಿರ್ವಹಿಸಿದ ಗುತ್ತಿಗೆದಾರರ ವಿವರ ನೀಡುವುದು ?

## ರಾಯಚೂರು ಜಿಲ್ಲೆ, ದೇವದುರ್ಗ ತಾಲ್ಲೂಕಿನ ರಸ್ತೆಗಳ ಬಗ್ಗೆ

**ಶ್ರೀ ಬಸವರಾಜ ಪಾಟೀಲ್ ಇಟಗಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೫೧೬ (೭೮೭) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಯಚೂರು ಜಿಲ್ಲೆ, ದೇವದುರ್ಗ ತಾಲ್ಲೂಕಿನ Appendix-E ನಲ್ಲಿ ಗೂಗಲ್–ದೇವದುರ್ಗ ರಸ್ತೆ ಮತ್ತು ಗೂಗಲ್–ಜಾಲಹಳ್ಳಿ ವಾಯಾಅರಕೇರ ರಸ್ತೆಯ ಕಾಮಗಾರಿ ಸ್ಥಗಿತಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ಕಾಮಗಾರಿಯ ಗುತ್ತಿಗೆಯನ್ನು ಯಾರಿಗೆ, ಯಾವಾಗ ನೀಡಲಾಗಿದೆ ;

(ಇ) ಈ ಕಾಮಗಾರಿಯ ಸ್ಥಗಿತಕ್ಕೆ ಕಾರಣವೇನು ; ಯಾವಾಗ ಪ್ರಾರಂಭಿಸಲಾಗುವುದು ?

## ವಿಜಯಪುರ ಮತ್ತು ಬಾಗಲಕೋಟೆ ಜಿಲ್ಲೆಗಳಿಗೆ ಲೋಕೋಪಯೋಗಿ ಇಲಾಖೆ ವತಿಯಿಂದ ಬಿಡುಗಡೆಯಾದ ಅನುದಾನದ ಕುರಿತು

**ಶ್ರೀ ಬಸನಗೌಡ ಆರ್. ಪಾಟೀಲ್ (ಯತ್ನಾಳ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೫೧೭ (೭೫೬) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ವಿಜಯಪುರ ಮತ್ತು ಬಾಗಲಕೋಟೆ ಜಿಲ್ಲೆಗಳಿಗೆ ಕಳೆದ ೩ ವರ್ಷಗಳಿಂದ ಇಲ್ಲಿಯವರೆಗೆ ಲೋಕೋಪಯೋಗಿ ಇಲಾಖೆ ವತಿಯಿಂದ ವಿವಿಧ ಶೀರ್ಷಿಕೆಗಳ ಅಡಿಯಲ್ಲಿ ರಾಜ್ಯ ಹಾಗೂ ಕೇಂದ್ರ ಸರ್ಕಾರದಿಂದ ಬಿಡುಗಡೆಯಾದ ಹಣವೆಷ್ಟು ; (ವರ್ಷವಾರು ಮತ್ತು ಶೀರ್ಷಿಕೆವಾರು ವಿವರ ನೀಡುವುದು)

(ಆ) ಈ ಜಿಲ್ಲೆಗೆ ಬಿಡುಗಡೆಯಾದ ಅನುದಾನವನ್ನು ಯಾವ ಯಾವ ಕಾಮಗಾರಿಗೆ ವೆಚ್ಚ ಮಾಡಲಾಗಿದೆ ; (ಕಾಮಗಾರಿವಾರು ಮತ್ತು ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ಕಳೆದ ೨ ವರ್ಷಗಳ ಅವಧಿಯಲ್ಲಿ ಮುಕ್ತಾಯಗೊಂಡ ಕಾಮಗಾರಿಗಳಿಗೆ ಪಾವತಿಸಲಾದ ಬಿಲ್‌ಗಳ ಒಟ್ಟು ಮೊತ್ತವೆಷ್ಟು ; (ವಿವರ ನೀಡುವುದು)

(ಈ) ಪಾವತಿಸಬೇಕಾದ ಬಿಲ್‌ಗಳ ಸಂಖ್ಯೆ ಎಷ್ಟು ; ಬಿಲ್‌ಗಳ ಪಾವತಿ ವಿಳಂಬವಾಗಲು ಕಾರಣವೇನು ? (ವಿವರ ನೀಡುವುದು)

## ಹಾಲು ಉತ್ಪಾದಕರ ಸಂಘಗಳ ಬಗ್ಗೆ

**ಶ್ರೀ ಬಸನಗೌಡ ಆರ್. ಪಾಟೀಲ್ (ಯತ್ನಾಳ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೫೧೮ (೫೦೪) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ವಿಜಯಪುರ ಮತ್ತು ಬಾಗಲಕೋಟೆ ಜಿಲ್ಲೆಯಲ್ಲಿರುವ ಹಾಲು ಉತ್ಪಾದಕರ ಸಹಕಾರ ಸಂಘಗಳ ಸಂಖ್ಯೆ ಎಷ್ಟು ; ಈ ಸಂಘಗಳು ಹೊಂದಿರುವ ಸದಸ್ಯರ ಸಂಖ್ಯೆ ಎಷ್ಟು ; ಈ ಸಂಘಗಳು ಉತ್ಪಾದಿಸುವ ಹಾಲಿನ ಪ್ರಮಾಣವೆಷ್ಟು ; ಸಂಘದ ಹೆಸರು ಮತ್ತು ದೂರವಾಣಿ ಸಂಖ್ಯೆ ಸಮೇತ ವಿವರ ನೀಡುವುದು ;

(ಆ) ಈ ಸಂಘದಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು ; ಸ್ವಂತ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿರುವ ಹಾಗೂ ಬಾಡಿಗೆ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿರುವ ಸಂಘಗಳು ಎಷ್ಟು ; (ಸಂಪೂರ್ಣ ವಿವರ ನೀಡುವುದು)

(ಇ) ಹೊಸ ಹಾಲು ಉತ್ಪಾದಕರ ಸಹಕಾರ ಸಂಘ ಸ್ಥಾಪಿಸಲು ಇರುವ ಮಾನದಂಡವೇನು ; ಪ್ರಸಕ್ತ ಸಾಲಿನಲ್ಲಿ ಪ್ರಾರಂಭಿಸಲು ಉದ್ದೇಶಿತ ಹಾಲು ಉತ್ಪಾದಕರ ಸಂಘಗಳ ಸಂಖ್ಯೆ ಎಷ್ಟು ;

(ಈ) ಹೈನುಗಾರಿಕೆಯನ್ನು ಪ್ರೋತ್ಸಾಹಿಸಲು ಸಹಕಾರ ಸಂಘದಿಂದ ಯಾವ ಸವಲತ್ತುಗಳು ದೊರೆಯುತ್ತದೆ ? (ಸಂಪೂರ್ಣ ವಿವರ ನೀಡುವುದು)

## ವಿಜಯಪುರ, ಬಾಗಲಕೋಟೆ ಜಿಲ್ಲೆಗಳ ಕೃಷಿ ಹೊಂಡಗಳ ಬಗ್ಗೆ

**ಶ್ರೀ ಬಸನಗೌಡ ಆರ್. ಪಾಟೀಲ್ (ಯತ್ನಾಳ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೫೧೯ (೭೫೫) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ವಿಜಯಪುರ ಮತ್ತು ಬಾಗಲಕೋಟೆ ಜಿಲ್ಲೆಗಳಲ್ಲಿ ಕೃಷಿ ಹೊಂಡವನ್ನು ರೈತರ ಸಹಭಾಗಿತ್ವದಲ್ಲಿ ತೆಗೆಯಲು ಪ್ರಾರಂಭಿಸಲಾಗಿದ್ದು ಯಾವಾಗ ;

(ಆ) ಸದರಿ ಕಾಮಗಾರಿಗೆ ಬಿಡುಗಡೆ ಮಾಡಿದ ಮೊತ್ತ ಎಷ್ಟು ; ಪೂರ್ಣಗೊಂಡಿರುವ ಕಾಮಗಾರಿಗಳು ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಕೆಲವು ಅಸಮರ್ಪಕ ಕಾಮಗಾರಿಗಳ ಬಗ್ಗೆ ದೂರುಗಳು ಬಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ವಿಜಯಪುರ ಮತ್ತು ಬಾಗಲಕೋಟೆ ಜಿಲ್ಲೆಗಳಲ್ಲಿ ಇದುವರೆಗೆ ಎಷ್ಟು ಕೃಷಿ ಹೊಂಡಗಳನ್ನು ನಿರ್ಮಿಸಲಾಗಿದೆ ; ಕೃಷಿ ಹೊಂಡ ನಿರ್ಮಿಸಿದ ರೈತರ ಹೆಸರು, ದಿನಾಂಕ ಹಾಗೂ ಅದರ ವಿಸ್ತೀರ್ಣ, ಹಾಗೂ ತಗುಲಿದ ವೆಚ್ಚದ ಬಗ್ಗೆ ಮಾಹಿತಿ ನೀಡುವುದು ;

(ಉ) ಈ ಕಾಮಗಾರಿಗಳನ್ನು ಗುತ್ತಿಗೆ ನೀಡಲಾಗಿದೆಯೇ ? (ಗುತ್ತಿಗೆದಾರರ ಹೆಸರು ಸಂಪೂರ್ಣ ಅಂಕಿ-ಅಂಶಗಳೊಂದಿಗೆ ಮಾಹಿತಿ ನೀಡುವುದು)

## ರಾಯಚೂರಿನಲ್ಲಿ ಜಿಲ್ಲಾ ನ್ಯಾಯಾಲಯ ಸಂಕೀರ್ಣ ನಿರ್ಮಾಣ ಮಾಡುವ ಬಗ್ಗೆ

**ಶ್ರೀ ಎನ್.ಎಸ್.ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :-**

೫೨೦ (೯೨೦) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಮಾನ್ವಿ ಪಟ್ಟಣದಲ್ಲಿ ತಾಲ್ಲೂಕು ಮ್ಯಾಜಿಸ್ಟ್ರೇಟ್ ನ್ಯಾಯಾಲಯ ನಿರ್ಮಾಣ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಆ) ರಾಯಚೂರು ನಗರದಲ್ಲಿ ಜಿಲ್ಲಾ ನ್ಯಾಯಾಲಯ ಸಂಕೀರ್ಣ ನಿರ್ಮಾಣ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

## ರಾಯಚೂರು ಜಿಲ್ಲೆಯ ವಿವಿಧ ಕೃಷಿ ಉತ್ಪನ್ನ ಮಾರುಕಟ್ಟೆಗಳ ಬಗ್ಗೆ

**ಶ್ರೀ ಎನ್.ಎಸ್.ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :-**

೫೨೧ (೮೦೬) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ೨೦೧೭-೧೮ನೇ ಸಾಲಿನಲ್ಲಿ ರಾಯಚೂರು ಜಿಲ್ಲೆಯ ವಿವಿಧ ಕೃಷಿ ಉತ್ಪನ್ನ ಮಾರುಕಟ್ಟೆಗಳ ಅಭಿವೃದ್ಧಿಗೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಆ) ರಾಯಚೂರು ಹಾಗೂ ಮಾನ್ವಿ ಕೃಷಿ ಉತ್ಪನ್ನ ಮಾರುಕಟ್ಟೆಗಳಿಗೆ ನೀಡಿರುವ ಅನುದಾನ ಎಷ್ಟು ;

(ಇ) ದಾವಣಗೆರೆ ಜಿಲ್ಲೆಯ ವಿವಿಧ ಕೃಷಿ ಉತ್ಪನ್ನ ಮಾರುಕಟ್ಟೆಗಳಿಗೆ ನೀಡಿರುವ ಅನುದಾನ ಎಷ್ಟು ?

## ಪಶು ಭಾಗ್ಯ ಯೋಜನೆಯ ಬಗ್ಗೆ

**ಶ್ರೀ ಎನ್.ಎಸ್.ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೫೨೨ (೮೦೭) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಯಚೂರು ಜಿಲ್ಲೆಯಲ್ಲಿ ಪಶು ಆಸ್ಪತ್ರೆಗಳನ್ನು ಅಭಿವೃದ್ಧಿ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಆ) ಪಶು ಆಸ್ಪತ್ರೆಗಳಲ್ಲಿ ಖಾಲಿ ಇರುವ ಸಿಬ್ಬಂದಿಗಳನ್ನು ಭರ್ತಿ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಇ) ೨೦೧೭–೧೮ನೇ ಸಾಲಿನಲ್ಲಿ ಪಶು ಭಾಗ್ಯ ಯೋಜನೆ ಅಡಿಯಲ್ಲಿ ರಾಯಚೂರು ಜಿಲ್ಲೆಗೆ ನೀಡಿರುವ ಅನುದಾನ ಎಷ್ಟು ;

(ಈ) ಈ ಯೋಜನೆಯ ಉಪಯೋಗ ಪಡೆದ ಫಲಾನುಭವಿಗಳ ಸಂಖ್ಯೆ ಎಷ್ಟು ?

## ರಾಜ್ಯ ಹೆದ್ದಾರಿಗಳನ್ನು ರಾಷ್ಟ್ರೀಯ ಹೆದ್ದಾರಿಗಳನ್ನಾಗಿ ಪರಿವರ್ತಿಸುವ ಬಗ್ಗೆ

**ಶ್ರೀ ಎನ್.ಎಸ್.ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೫೨೩ (೮೦೮) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯ ಹೆದ್ದಾರಿ–೨೦ ರಾಯಚೂರಿನಿಂದ ರಾಮದುರ್ಗಕ್ಕೆ ಹೋಗುವ ರಾಜ್ಯ ಹೆದ್ದಾರಿಯನ್ನು ರಾಷ್ಟ್ರೀಯ ಹೆದ್ದಾರಿಯನ್ನಾಗಿ ಪರಿವರ್ತಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಆ) ರಾಜ್ಯ ಹೆದ್ದಾರಿ–೨೩ ಕಲ್ಮಲೋ ನಿಂದ ಬುದಿಗುಂಪಾಕ್ಕೆ ಹೋಗುವ ರಾಜ್ಯ ಹೆದ್ದಾರಿಯನ್ನು ರಾಷ್ಟ್ರೀಯ ಹೆದ್ದಾರಿಯನ್ನಾಗಿ ಪರಿವರ್ತಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಇ) NH–೧೬೭ ಮಂತ್ರಾಲಯ ಸೇತುವೆಯಿಂದ ಕೃಷ್ಣ ಸೇತುವೆ (೫೬ ಕಿ.ಮೀ) ರಸ್ತೆಯನ್ನು ಅಭಿವೃದ್ಧಿ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

## ಕೃಷಿ ಪತ್ತಿನ ಸಹಕಾರ ಸಂಘಗಳ ಬಗ್ಗೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ):–**

೫೨೪ (೭೪೬) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೃಷಿ ಪತ್ತಿನ ಸಹಕಾರಿ ಸಂಘ ಅಂದರೇನು ; ಇದರ ವ್ಯಾಪ್ತಿಯಲ್ಲಿ ಯಾವ ಯಾವ ಸಂಘಗಳು ಬರುತ್ತವೆ ;

(ಆ) ರಾಜ್ಯದಲ್ಲಿರುವ ಕೃಷಿ ಪತ್ತಿನ ಸಹಕಾರಿ ಸಂಘಗಳು ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ತುಮಕೂರು ಜಿಲ್ಲೆ, ಗುಬ್ಬಿ ತಾಲ್ಲೂಕು, ಕಸಬಾ ಹೋಬಳಿಯ ಎಸ್. ಕೊಡಗೀಹಳ್ಳಿ ಗ್ರಾಮದ ವ್ಯವಸಾಯ ಸೇವಾ ಸಹಕಾರ ಬ್ಯಾಂಕ್ ನಿಯಮಿತವು ಕೃಷಿ ಪತ್ತಿನ ಸಹಕಾರ ಸಂಘದ ವ್ಯಾಪ್ತಿಗೆ ಬರುತ್ತದೆಯೇ ;

(ಈ) ಎಸ್.ಕೊಡಗೀಹಳ್ಳಿ ಗ್ರಾಮದ ವಿ.ಎಸ್.ಎಸ್.ಎನ್. ಈಗ ಯಾವ ಸ್ಥಿತಿಯಲ್ಲಿದೆ ; ಈ ಸ್ಥಿತಿಯಲ್ಲಿರಲು ಕಾರಣಗಳೇನು ; ಈ ಸಂಬಂಧ ಸಹಕಾರ ಇಲಾಖೆಯ ಅಧಿಕಾರಿಗಳ ಮೇಲೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಉ) ಸಕಾರಣವಿಲ್ಲದೆ ಅಲ್ಲಿನ ಕಾರ್ಯದರ್ಶಿಯವರನ್ನು ಅಮಾನತ್ತುಗೊಳಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಊ) ಹಾಗಿದ್ದಲ್ಲಿ, ಕಾರ್ಯದರ್ಶಿಯವರು ಯಾವ ಕಾಲಮಿತಿಯೊಳಗೆ ಅಮಾನತ್ತು ತೆರವುಗೊಳಿಸಿ ಕರ್ತವ್ಯಕ್ಕೆ ಹಾಜರುಪಡಿಸಿಕೊಳ್ಳಲಾಗುವುದು ?

## ರೈತರಿಗೆ ಗುರುತಿನ ಪತ್ರ ನೀಡುವ ಬಗ್ಗೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ):–**

೫೨೫ (೮೦೩) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ರಾಜ್ಯದಲ್ಲಿ ಎಷ್ಟು ಕೃಷಿ ಮಾರುಕಟ್ಟೆಗಳಿವೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಕೃಷಿ ಮಾರುಕಟ್ಟೆ ಸಮಿತಿಗಳಿಂದ ಎನ್.ಜಿ.ಓ.ಗಳ ಸಹಯೋಗದೊಂದಿಗೆ ರೈತರಿಗೆ ನೋಂದಣಿ ಚೀಟಿ / ಪತ್ರ ನೀಡುತ್ತಿರುವುದು ನಿಜವೇ ;

(ಇ) ಹಾಗಾದರೆ, ಒಂದು ನೋಂದಣಿ ಚೀಟಿ / ಪತ್ರಕ್ಕೆ ಸಮಿತಿಯವರು ಎನ್.ಜಿ.ಓ ಗಳಿಗೆ ನೀಡುತ್ತಿರುವ ಹಣ ಎಷ್ಟು ;

(ಈ) ಎನ್.ಜಿ.ಓ. ದವರು ರೈತರಿಂದ ಒಂದು ನೋಂದಣಿ ಪತ್ರದ ರಶೀದಿಗೆ ಹತ್ತು ರೂಪಾಯಿ ತೆಗೆದುಕೊಳ್ಳುತ್ತಿರುವುದು ಸರಿಯೇ ;

(ಉ) ಒಡಂಬಡಿಕೆ ಮಾಡಿಕೊಂಡಿರುವ ಎನ್.ಜಿ.ಓ.ಗಳು ಯಾವುವು ; ಇವುಗಳಿಗೆ ಈಗಾಗಲೇ ಸಮಿತಿಯವರು ಪಾವತಿ ಮಾಡಿರುವ ಹಣ ಎಷ್ಟು ? (ಜಿಲ್ಲಾ ಮತ್ತು ತಾಲ್ಲೂಕುವಾರು ಮಾಹಿತಿ ನೀಡುವುದು)

## ಮಂಗಳೂರು, ಅತ್ರಾಡಿ ರಾಜ್ಯ ಹೆದ್ದಾರಿಯನ್ನು ಅಭಿವೃದ್ಧಿ ಪಡಿಸುವ ಯೋಜನೆ ಕುರಿತು

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ):–**

೫೨೬ (೪೯೪) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಂಗಳೂರು ಅಂತರ್‌ರಾಷ್ಟ್ರೀಯ ವಿಮಾನ ನಿಲ್ದಾಣವನ್ನು ಸಂಪರ್ಕಿಸುವ ಮಂಗಳೂರು–ಅತ್ರಾಡಿ ರಾಜ್ಯ ಹೆದ್ದಾರಿಯನ್ನು ಅಭಿವೃದ್ಧಿ ಪಡಿಸುವ ಯೋಜನೆ ಸರ್ಕಾರದ ಮುಂದಿದೆಯೇ ;

(ಆ) ಈ ಯೋಜನೆ ಅಡಿಯಲ್ಲಿ ಎಷ್ಟು ಕಿ.ಮೀ. ರಸ್ತೆ ಅಭಿವೃದ್ಧಿ ಪಡಿಸಲಾಗಿದೆ ;

(ಇ) ಈ ಯೋಜನೆಗೆ ಮೀಸಲಾಗಿಟ್ಟ ಹಣವೆಷ್ಟು ; ಜನವರಿ ೩೧ರ ವರೆಗೆ ವೆಚ್ಚ ಮಾಡಲಾದ ಮೊತ್ತ ಎಷ್ಟು ; (ವಿವರ ನೀಡುವುದು)

(ಈ) ಈ ಯೋಜನೆಯನ್ನು ಯಾವ ಕಾಲಮಿತಿಯಲ್ಲಿ ಪೂರ್ಣಗೊಳಿಸಲಾಗುವುದು ?

## ಹಳ್ಳಿಗಳಿಗೆ ವಿದ್ಯುತ್ ಸಂಪರ್ಕ ನೀಡುವ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ):–**

೫೨೭ (೪೯೫) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಎಷ್ಟು ಹಳ್ಳಿಗಳಿಗೆ ವಿದ್ಯುತ್ ಸಂಪರ್ಕ ಇಲ್ಲ ; (ಜಿಲ್ಲಾವಾರು ಮಾಹಿತಿ ನೀಡುವುದು) ವಿದ್ಯುತ್ ಸಂಪರ್ಕವಿಲ್ಲದ ಹಳ್ಳಿಗಳಿಗೆ ವಿದ್ಯುತ್ ಸಂಪರ್ಕ ನೀಡಲು ಸರ್ಕಾರದ ಯೋಜನೆಗಳಾವುವು;

(ಆ) ೨೦೧೪ ರಿಂದ ರಾಜ್ಯಕ್ಕೆ ಅಗತ್ಯವಿರುವ ವಿದ್ಯುತ್ ಬೇಡಿಕೆ ಎಷ್ಟು ಪ್ರಮಾಣದಲ್ಲಿ ಹೆಚ್ಚಾಗಿದೆ ;

(ಇ) ೨೦೧೪ ರಿಂದ ರಾಜ್ಯದಲ್ಲಿ ಎಷ್ಟು ಪ್ರಮಾಣದ ವಿದ್ಯುತ್ ಉತ್ಪಾದಿಸಲಾಗಿದೆ ; ಎಷ್ಟು ಪ್ರಮಾಣದ ವಿದ್ಯುತ್‌ನ್ನು ಹೊರ ರಾಜ್ಯಗಳಿಂದ ಖರೀದಿಸಲಾಗಿದೆ ;

(ಈ) ರಾಜ್ಯದಲ್ಲಿರುವ ವಿದ್ಯುತ್ ಕೊರತೆಯ ಪ್ರಮಾಣ ಎಷ್ಟು ?

## ರಾಷ್ಟ್ರೀಯ ಹೆದ್ದಾರಿ ೬೬ರಲ್ಲಿ ತಲಪಾಡಿಯಿಂದ ಹೆಜಮಾಡಿಯವರೆಗೆ ಚತುರ್ಷ್ಪತ ಹೆದ್ದಾರಿ ರಸ್ತೆ ನಿರ್ಮಾಣದ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ):–**

೫೨೮ (೪೯೧) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಂಗಳೂರಿನ ಮೂಲಕ ಹಾದುಹೋಗುವ ರಾಷ್ಟ್ರೀಯ ಹೆದ್ದಾರಿ ೬೬ರಲ್ಲಿ ತಲಪಾಡಿಯಿಂದ ಹೆಜಮಾಡಿಯವರೆಗೆ ಚತುಷ್ಪತ ಹೆದ್ದಾರಿ ರಸ್ತೆ ನಿರ್ಮಿಸಲು ಮಂಜೂರಾದ ಕೇಂದ್ರ ಸರ್ಕಾರದ ಅನುದಾನ ಎಷ್ಟು ;

(ಆ) ಇದುವರೆಗೂ ಬಿಡುಗಡೆಗೊಂಡ ಅನುದಾನ ಎಷ್ಟು ;

(ಇ) ರಸ್ತೆ ಅಗಲೀಕರಣಕ್ಕೆ ಬೇಕಾದ ಜಮೀನಿನ ಭೂಸ್ವಾಧೀನ ಪಡಿಸಿಕೊಂಡ ಹೆದ್ದಾರಿ ಪ್ರಾಧಿಕಾರಕ್ಕೆ ನೀಡುವ ಪ್ರಕ್ರಿಯೆಯಲ್ಲಿ ವಿಳಂಬಕ್ಕೆ ಕಾರಣವೇನು ; ಎಷ್ಟು ಪ್ರಕರಣಗಳು ನ್ಯಾಯಾಲಯದಲ್ಲಿ ಇತ್ಯರ್ಥಕ್ಕೆ ಬಾಕಿ ಇದೆ ; ಪೂರ್ಣ ಪ್ರಮಾಣದಲ್ಲಿ ಹೆದ್ದಾರಿ ನಿರ್ಮಾಣಗೊಳ್ಳಲು, ಭೂಸ್ವಾಧೀನ ಪಡಿಸಿಕೊಳ್ಳಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಈ) ಎಷ್ಟು ಕಡೆಗಳಲ್ಲಿ ಸರ್ವೀಸ್ ರಸ್ತೆ ನಿರ್ಮಾಣ ಕಾಮಗಾರಿ ಕೈಗೊಳ್ಳಲು ಬಾಕಿ ಇವೆ ? (ವಿವರ ನೀಡುವುದು)

## ಬಂಟ್ವಾಳದಿಂದ ಶಿರಾಡಿಯವರೆಗೆ ಚತುಷ್ಪಥ ಯೋಜನೆ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ):–**

೫೨೯ (೪೯೨) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಂಗಳೂರಿನಿಂದ ಬೆಂಗಳೂರಿಗೆ ಹೋಗುವ ರಾಷ್ಟ್ರೀಯ ಹೆದ್ದಾರಿ ೭೫ನ್ನು ಬಂಟ್ವಾಳದಿಂದ ಶಿರಾಡಿಯವರೆಗೆ ಚತುಷ್ಪಥ ಯೋಜನೆ ಮುಂದುವರೆಸುವ ಯೋಜನೆ ಸರ್ಕಾರದ ಮುಂದಿದೆಯೇ ;

(ಆ) ಈ ಯೋಜನೆಗೆ ತಗಲುವ ವೆಚ್ಚ ಎಷ್ಟು ;

(ಇ) ಈ ಯೋಜನೆಗೆ ಭೂಸ್ವಾಧೀನಗೊಳಿಸಲು ನಕ್ಷೆ ತಯಾರಿಸಲಾಗಿದೆಯೇ ?

## ಕರಾವಳಿ ತೀರ ಸಂರಕ್ಷಣೆ ಯೋಜನೆ ಅನುಷ್ಠಾನದ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ):–**

೫೩೦ (೪೯೩) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರಾವಳಿ ತೀರ ಸಂರಕ್ಷಣೆ ಯೋಜನೆಯನ್ನು ಸರ್ಕಾರ ಕೈಗೆತ್ತಿಕೊಂಡಿದೆಯೇ ;

(ಆ) ಈ ಯೋಜನೆಯ ರೂಪ–ರೇಷೆಗಳೇನು ; (ವಿವರವಾದ ಮಾಹಿತಿ ನೀಡುವುದು)

(ಇ) ಈ ಯೋಜನೆಗೆ ಏಷ್ಯಾ ಅಭಿವೃದ್ಧಿ ಬ್ಯಾಂಕ್ (ADB) ನಿಂದ ಎಷ್ಟು ನೆರವನ್ನು ಪಡೆಯಲಾಗಿದೆ ;

(ಈ) ಈ ಹಣದಲ್ಲಿ ಈವರೆವಿಗೆ ಖರ್ಚು ಮಾಡಲಾದ ಮೊತ್ತ ಎಷ್ಟು; ಅನುಷ್ಠಾನಗೊಳಿಸಿದ ಯೋಜನೆಯ ಪೂರ್ಣ ವಿವರದೊಂದಿಗೆ ವಿವರ ನೀಡುವುದು ?

## ರೈತರ ಕೃಷಿ ಸಾಲಗಳನ್ನು ಮನ್ನಾ ಮಾಡಿರುವ ಬಗ್ಗೆ

**ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೫೩೧ (೬೨೨) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೬–೧೭ ಮತ್ತು ೨೦೧೭–೧೮ನೇ ಸಾಲಿನಲ್ಲಿ ಹಾಸನ ಜಿಲ್ಲೆಯ ಕೃಷಿ ಪತ್ತಿನ ಸಹಕಾರ ಸಂಘಗಳು ಕೃಷಿ ಸಾಲ ಪಡೆದ ಎಲ್ಲಾ ರೈತರ ಸಾಲಗಳನ್ನು ರಾಜ್ಯ ಸರ್ಕಾರದ ಆದೇಶದಂತೆ

ಸಾಲ ಮನ್ನಾ ಮಾಡಿವೆಯೇ ; ಹಾಗಿದ್ದಲ್ಲಿ, ಸಾಲ ಮನ್ನಾ ಪಡೆದ ಮತ್ತು ಸಾಲ ಮನ್ನಾ ಪಡೆಯದ ಫಲಾನುಭವಿಗಳ ವರ್ಷಾವಾರು/ ತಾಲ್ಲೂಕುವಾರು/ಸಂಘವಾರು ವಿವರಗಳನ್ನು ನೀಡುವುದು ;

(ಆ) ಕೃಷಿ ಸಾಲ ಪಡೆದ ಎಲ್ಲಾ ರೈತರ ಸಾಲಗಳನ್ನು ರಾಜ್ಯ ಸರ್ಕಾರದ ಆದೇಶದಂತೆ ೨೦೧೬–೧೭ ಮತ್ತು ೨೦೧೭–೧೮ನೇ ಸಾಲಿನಲ್ಲಿ ಮನ್ನಾ ಮಾಡದಿದ್ದಲ್ಲಿ ಅಂತಹ ಕೃಷಿ ಪತ್ತಿನ ಸಹಕಾರ ಸಂಘಗಳು/ ಸಂಬಂಧಪಟ್ಟವರ ವಿರುದ್ಧ ಸರ್ಕಾರ ಕೈಗೊಂಡಿರುವ ಕ್ರಮಗಳೇನು; ತಾಲ್ಲೂಕುವಾರು/ಸಂಘವಾರು ಮಾಹಿತಿ ನೀಡುವುದು ;

(ಇ) ಹಾಸನ ಜಿಲ್ಲೆಯಲ್ಲಿ ೨೦೧೬–೧೭ ಮತ್ತು ೨೦೧೭–೧೮ನೇ ಸಾಲಿಗೆ ಎಷ್ಟು ಮೊತ್ತದ ಕೃಷಿ ಸಾಲವನ್ನು ಮನ್ನಾ ಮಾಡಲಾಗಿದೆ; ವರ್ಷಾವಾರು/ತಾಲ್ಲೂಕುವಾರು/ಸಂಘವಾರು/ಫಾಲಾನುಭವಿವಾರು ಮಾಹಿತಿ ನೀಡುವುದು ?

## ಬೆಸ್ಕಾಂ ಕೌಂಟರ್‌ಗಳನ್ನು ಮತ್ತೆ ತೆರೆಯುವ ಬಗ್ಗೆ

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೫೩೨ (೭೯೪) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ವಿದ್ಯುತ್ ಬಿಲ್ ಪಾವತಿಸಲು ಇದ್ದ ಬೆಸ್ಕಾಂ ಕೌಂಟರ್‌ಗಳನ್ನು ಅನೇಕ ಕಡೆಗಳಲ್ಲಿ ಮುಚ್ಚಿರುವುದರಿಂದ ಬೆಂಗಳೂರಿನ ಗ್ರಾಹಕರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬೆಸ್ಕಾಂ ಕಛೇರಿಗಳ ಮುಂದೆ ಸ್ವಯಂಚಾಲಿತ ಯಂತ್ರಗಳ ಮೂಲಕ ಮಾತ್ರ ಹಣ ಪಾವತಿಗೆ ಅವಕಾಶವಿದ್ದು, ಕ್ಯೂನಲ್ಲಿ ಬಹಳ ಸಮಯ ಜನ ನಿಂತುಕೊಳ್ಳಬೇಕಾಗಿರುವುದರಿಂದ ಹಿಂದೆ ಇದ್ದಂತೆ ಬೆಸ್ಕಾಂ ಕೌಂಟರ್‌ಗಳನ್ನು ತೆರೆಯಲು ಸರ್ಕಾರ ಕ್ರಮ ಕೈಗೊಳ್ಳುವುದೇ ?

## ಮುಜರಾಯಿ ಇಲಾಖೆಯಿಂದ ದೇವಾಲಯಗಳಿಗೆ ಅನುದಾನ ಮಂಜೂರಾಗಿರುವ ಬಗ್ಗೆ

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೫೩೩ (೭೫೫) ಮಾನ್ಯ ಜವಳಿ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮುಜರಾಯಿ ಇಲಾಖೆಯಿಂದ ಪ್ರಸಕ್ತ ಸಾಲಿನಲ್ಲಿ ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳ ಎಷ್ಟು ದೇವಾಲಯಗಳಿಗೆ ಸಹಾಯಧನ (ಅನುದಾನ) ಮಂಜೂರಾಗಿದೆ ; ಎಷ್ಟು ಹಣ ಮಂಜೂರಾಗಿದೆ ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಇನ್ನೂ ಎಷ್ಟು ದೇವಾಲಯಗಳಿಗೆ ಮಂಜೂರಾಗಬೇಕಾಗಿದೆ ; ಎಷ್ಟು ಹಣ ಬಾಕಿ ಇದೆ ? (ವಿವರ ನೀಡುವುದು)

## ಲೋಕೋಪಯೋಗಿ ರಸ್ತೆಯ ಕಟ್ಟಡ ರೇಖೆ ಮತ್ತು ಅನಧಿಕೃತ ನಿರ್ಮಾಣಗಳ ಕುರಿತು

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೩೪ (೬೦೭) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಗ್ರಾಮ ಪಂಚಾಯತ್, ಪುರಸಭೆ ಹಾಗೂ ನಗರ ವ್ಯಾಪ್ತಿಯಲ್ಲಿ ಹಾದು ಹೋಗುವ ಲೋಕೋಪಯೋಗಿ ಜಿಲ್ಲಾ, ರಾಜ್ಯ ಹೆದ್ದಾರಿಯ ರಸ್ತೆ ಮಾರ್ಜಿನ್ (ಕಟ್ಟಡ ರೇಖೆಯ) ಅಂತರವೆಷ್ಟು;

(ಆ) ಈ ಕುರಿತು ಆದೇಶ ಪ್ರತಿ ಹೊರಡಿಸಲಾಗಿದೆಯೇ; ಹೊರಡಿಸಿದ್ದಲ್ಲಿ, ಪ್ರತಿ ಒದಗಿಸುವುದು;

(ಇ) ವಾಸ್ತವ್ಯ ಮತ್ತು ಇತರೇ ಕಟ್ಟಡ ಪರವಾನಗಿಗಾಗಿ ಅಗತ್ಯವಿರುವ ಕಟ್ಟಡ ರೇಖೆಯ (ರಸ್ತೆ ಮಾರ್ಜಿನ್) ನಿರಾಕ್ಷೇಪಣಾ ಪತ್ರ ನೀಡಬೇಕಾದ ಲೋಕೋಪಯೋಗಿ ಇಲಾಖೆಯ ಅಧಿಕಾರಿ/ಪ್ರಾಧಿಕಾರ ಯಾರು;

(ಈ) ವಾಸ್ತವ್ಯ ಮತ್ತು ಇತರೇ ಕಟ್ಟಡ ಪರವಾನಿಗೆಗಾಗಿ ಅಗತ್ಯವಿರುವ ರಸ್ತೆ ಮಾರ್ಜಿನ್ ದೃಢೀಕರಣಕ್ಕಾಗಿ/ನಿರಾಕ್ಷೇಪಣಾ ಪತ್ರಕ್ಕಾಗಿ ಸಲ್ಲಿಸಬೇಕಾದ ದಾಖಲೆಗಳೇನು; ಎಷ್ಟು ದಿನಗಳಲ್ಲಿ ನಿರಾಕ್ಷೇಪಣಾ ಪತ್ರ ನೀಡಲಾಗುತ್ತಿದೆ; (ಸಂಪೂರ್ಣ ವಿವರ ನೀಡುವುದು)

(ಉ) ನಿರಾಕ್ಷೇಪಣಾ ಪತ್ರ ಪಡೆದು ಅಥವಾ ನಿರಾಕ್ಷೇಪಣಾ ಪತ್ರ ಇಲ್ಲದೇ ಲೋಕೋಪಯೋಗಿ ಜಿಲ್ಲಾ, ರಾಜ್ಯ ಹೆದ್ದಾರಿಯ ರಸ್ತೆ ಮಾರ್ಜಿನ್ (ಕಟ್ಟಡ ರೇಖೆಯ) ಅಂತರದೊಳಗೆ ಕಟ್ಟಡ ನಿರ್ಮಿಸಿದಲ್ಲಿ ತೆರವುಗೊಳಿಸುವ ಹಾಗೂ ಈ ಬಗ್ಗೆ ಕ್ರಮ ತೆಗೆದುಕೊಳ್ಳಬೇಕಾದ ಜವಾಬ್ದಾರಿ ಮತ್ತು ಪ್ರಾಧಿಕಾರ ಯಾವುದು; ಯಾವ ಕ್ರಮ ಕೈಗೊಳ್ಳಲಾಗುತ್ತದೆ; (ಈ ಕುರಿತು ಆದೇಶ ಪ್ರತಿ/ಮಾರ್ಗಸೂಚಿ ಹೊರಡಿಸಿದ್ದಲ್ಲಿ, ಪ್ರತಿ ನೀಡುವುದು?

## ಬಂದರು ಅಭಿವೃದ್ಧಿಗೆ ಕೇಂದ್ರದ ಅನುದಾನದ ಕುರಿತು ಮತ್ತು ವಿವಿಧ ಬಂದರು ಕಾಮಗಾರಿಯ ಪ್ರಗತಿಯ ವಿವರ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೩೫ (೭೦೮) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೇ:–

(ಅ) ಕಳೆದ ೪ ವರ್ಷಗಳಲ್ಲಿ ರಾಜ್ಯದ ವಿವಿಧ ಬಂದರು ಮತ್ತು ಜೆಟ್ಟಿ ನಿರ್ಮಾಣ ಹೂಳೆತ್ತುವುದು ಮತ್ತು ಬ್ರೇಕ್ ವಾಟರ್ ಕಾಮಗಾರಿಗಳಿಗಾಗಿ ಕೇಂದ್ರ ಸರ್ಕಾರ ಮಂಜೂರು ಮಾಡಿದ ಮತ್ತು ಬಿಡುಗಡೆ ಮಾಡಿದ ಅನುದಾನ ಎಷ್ಟು; ರಾಜ್ಯ ಸರ್ಕಾರ ಮಂಜೂರು ಮಾಡಿದ ಮತ್ತು ಬಿಡುಗಡೆ ಮಾಡಿದ ಅನುದಾನವೆಷ್ಟು;

(ಆ) ಕಳೆದ ೪ ವರ್ಷಗಳಲ್ಲಿ ಮಂಜೂರಾದ ವಿವಿಧ ಬಂದರು ಮತ್ತು ಜೆಟ್ಟಿ ನಿರ್ಮಾಣ, ಹೂಳೆತ್ತುವ ಮತ್ತು ಬ್ರೇಕ್ ವಾಟರ್ ಕಾಮಗಾರಿಗಳು ಯಾವುವು; (ವರ್ಷವಾರು–ಮಂಜೂರಾದ ಅನುದಾನದ ವಿವರ ನೀಡುವುದು)

(ಇ) ಮಂಜೂರಾದ ಕಾಮಗಾರಿಗಳಲ್ಲಿ ಪ್ರಾರಂಭಿಸಲಾದ, ಪ್ರಗತಿಯಲ್ಲಿರುವ ಮುಕ್ತಾಯಗೊಳಿಸಲಾದ ಕಾಮಗಾರಿಗಳಾವುವು; ಕಾಮಗಾರಿ ಪೂರ್ಣಗೊಳಿಸಲು ನಿಗಧಿಪಡಿಸಿದ ಕಾಲಮಿತಿ ಎಷ್ಟು; ಗುತ್ತಿಗೆ ಪಡೆದ ಸಂಸ್ಥೆಗಳಾವುವು; (ಕಾಮಗಾರಿವಾರು, ವರ್ಷಾವಾರು ಮುಕ್ತಾಯಗೊಳಿಸಿದ ಪ್ರಗತಿಯ ವಿವರ ನೀಡುವುದು)

(ಈ) ಟೆಂಡರ್ ನಿಯಮ ಉಲ್ಲಂಘಿಸಿ ಅನಗತ್ಯ ವಿಳಂಬ ಮಾಡುವ ಗುತ್ತಿಗೆದಾರರು/ಸಂಸ್ಥೆಯನ್ನು ಕಪ್ಪುಪಟ್ಟಿಗೆ ಸೇರಿಸಲು ಕ್ರಮ ಕೈಗೊಳ್ಳಲಾಗಿದೆಯೇ; (ಸಂಪೂರ್ಣ ವಿವರ ನೀಡುವುದು)

(ಉ) ಬಂದರು ಜೆಟ್ಟಿ ನಿರ್ಮಾಣ, ಹೂಳೆತ್ತುವುದು, ಬ್ರೇಕ್ ವಾಟರ್, ಕಾಮಗಾರಿಗಳನ್ನು ಕಾಲಮಿತಿಯಲ್ಲಿ ಪೂರ್ಣಗೊಳಿಸಿ, ಮೀನುಗಾರರ ಹಿತ ಕಾಪಾಡುವ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ?

## ರಾಜ್ಯದ ರಸ್ತೆಗಳ ಅಭಿವೃದ್ಧಿಗೆ ಕೇಂದ್ರ ಸರ್ಕಾರ ನೀಡಿದ ಅನುದಾನದ ವಿವರಗಳ ಕುರಿತು.

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೩೬ (೬೧೩) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೇಂದ್ರ ಸರ್ಕಾರವು ಕಳೆದ ೪ ವರ್ಷಗಳಲ್ಲಿ, ರಾಜ್ಯದ ವಿವಿಧ ರಸ್ತೆಗಳ ಮೇಲ್ದರ್ಜೆ ಮತ್ತು ಅಭಿವೃದ್ಧಿಗೆ ಮಂಜೂರು ಮಾಡಿದ, ಬಿಡುಗಡೆ ಮಾಡಿದ ಅನುದಾನವೆಷ್ಟು;

(ಆ) ರಾಜ್ಯದ ಯಾವ ಯಾವ ಜಿಲ್ಲಾ–ರಾಜ್ಯ–ರಾಷ್ಟ್ರೀಯ ಹೆದ್ದಾರಿಗಳನ್ನು ಮೇಲ್ದರ್ಜೆಗೇರಿಸಲಾಗಿದೆ. ಯಾವ ಯಾವ ಹೆದ್ದಾರಿಗಳನ್ನು ಮೇಲ್ದರ್ಜೆಗೇರಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

(ಇ) ರಾಜ್ಯದ ಯಾವ ಯಾವ ರಾಷ್ಟ್ರೀಯ ಮತ್ತು ರಾಜ್ಯ ಹೆದ್ದಾರಿಗಳ ಅಭಿವೃದ್ಧಿ ಕಾಮಗಾರಿಗಳು ಚಾಲ್ತಿಯಲ್ಲಿವೆ ; ಎಷ್ಟು ವರ್ಷಗಳಿಂದ ಚಾಲ್ತಿಯಲ್ಲಿವೆ ;

(ಈ) ರಾಷ್ಟ್ರೀಯ ಹೆದ್ದಾರಿ–ಚತುಷ್ಪಥ ಕಾಮಗಾರಿಗಳನ್ನು ಯಾವ ಕಾಲಮಿತಿಯಲ್ಲಿ ಪೂರ್ಣಗೊಳಿಸಲಾಗುವುದು ; ಈ ಸಂಬಂಧ ಅಗತ್ಯ ಭೂ ಸ್ವಾಧೀನ ಮತ್ತಿತರ ಪ್ರಕ್ರಿಯೆಗಳನ್ನು ಚುರುಕುಗೊಳಿಸಲು ಸರ್ಕಾರ ಯಾವ ಯಾವ ಕ್ರಮ ಕೈಗೊಂಡಿದೆ ? (ವಿವರ ನೀಡುವುದು)

## ಪಶು ಸಂಗೋಪನಾ ಇಲಾಖೆಯ ಕಾರ್ಯಕ್ರಮಗಳ ಕುರಿತು

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೩೭ (೪೮೪) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಪಶು ಸಂಗೋಪನಾ ಇಲಾಖೆಯಲ್ಲಿರುವ ಪಶುಗಳ ಸಂಖ್ಯೆ ಎಷ್ಟು ; (ಜಾತಿ–ತಳಿವಾರು ಪ್ರತ್ಯೇಕವಾಗಿ ನೀಡುವುದು)

(ಆ) ಯಾವ ಯಾವ ಪ್ರಾಣಿಗಳನ್ನು ಪಶುಗಳೆಂದು ಪರಿಗಣಿಸಲಾಗುವುದು; (ಜಾತಿ–ತಳಿವಾರು ಪ್ರತ್ಯೇಕವಾಗಿ ನೀಡುವುದು)

(ಇ) ಪಶು ಸಂಗೋಪನಾ ಇಲಾಖೆಯ ಮೂಲಕ ಪಶುಗಳ ಅಭಿವೃದ್ಧಿಗಾಗಿ ಕೈಗೊಂಡ ಕಾರ್ಯಕ್ರಮಗಳಾವುವು ; ವಿವರ ಒದಗಿಸುವುದು ;

(ಈ) ಉಡುಪಿ ಜಿಲ್ಲೆಯ ಜಾನುವಾರು ಗಣತಿಯ ವಿವರಗಳೇನು ? (ಉಡುಪಿ ಜಿಲ್ಲೆಯ ಗ್ರಾಮವಾರು ಜಾನುವಾರು ಗಣತಿಯ ಮತ್ತು ಲಭ್ಯ ಗೋಮಾಳದ ವಿವರ ಒದಗಿಸುವುದು )

## ಪ್ರಧಾನಮಂತ್ರಿ ಫಸಲ್ ಭೀಮಾ ಯೋಜನೆಯಡಿ ರೈತರ ವಿಮಾ ಬಗ್ಗೆ

**ಶ್ರೀ ಕಾಂತರಾಜು (ಬಿ.ಎಂ.ಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೩೮ (೬೧೭) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಕಳೆದ ಒಂದು ವರ್ಷದಲ್ಲಿ ಪ್ರಧಾನಮಂತ್ರಿ ಫಸಲ್ ಭೀಮಾ ಯೋಜನೆಯಡಿ ರೈತರಿಂದ ವಿಮಾ ಕಂಪನಿಗಳು ಎಷ್ಟು ಹಣವನ್ನು ಸಂಗ್ರಹ ಮಾಡಿದ್ದವು ; (ಜಿಲ್ಲಾವಾರು ವಿವರ ನೀಡುವುದು)

(ಆ) ತದನಂತರ ಈ ಯೋಜನೆಯಡಿ ಬೆಳೆ ನಷ್ಟ ಹೊಂದಿದ ರೈತರಿಗೆ ವಿತರಣೆ ಮಾಡಿದ ವಿಮಾ ಪರಿಹಾರದ ಮೊತ್ತವೆಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಇ) ಬಾಕಿ ಇರುವ ಬೆಳೆ ವಿಮಾ ಪರಿಹಾರದ ಹಣವನ್ನು ರೈತರಿಗೆ ಯಾವಾಗ ವಿತರಣೆ ಮಾಡಲಾಗುವುದು ; ಸ್ಪಷ್ಟ ಮಾಹಿತಿ ನೀಡುವುದು ?

## ಕಲ್ಲಿದ್ದಲ್ಲು ಕೊರತೆಯಿಂದ ವಿದ್ಯುತ್ ಕ್ಷಾಮ ಉಂಟಾಗುವ ಬಗ್ಗೆ

**ಶ್ರೀ ಕಾಂತರಾಜು (ಬಿ.ಎಂ.ಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೩೯ (೬೧೬) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಕಲ್ಲಿದ್ದಲು ಕೊರೆತೆಯಿಂದಾಗಿ ವಿದ್ಯುತ್ ಕ್ಷಾಮ ಅನಿರ್ದಿಷ್ಟಾವಧಿಯವರೆಗೆ ಮುಂದುವರಿಯುವುದೇ ; (ವಿವರ ನೀಡುವುದು)

(ಆ) ರಾಯಚೂರು ಮತ್ತು ಬಳ್ಳಾರಿ ಉಷ್ಣ ವಿದ್ಯುತ್ ಸ್ಥಾವರಗಳಿಗೆ ದಿನವೊಂದಕ್ಕೆ ಎಷ್ಟು ಪ್ರಮಾಣದ ಕಲ್ಲಿದ್ದಲ್ಲು ಬೇಕಾಗುತ್ತದೆ ;

(ಇ) ಈ ಸ್ಥಾವರಗಳಿಗೆ ಹಾಲಿ ಪೂರೈಕೆಯಾಗುತ್ತಿರುವ ಕಲ್ಲಿದ್ದಲ್ಲಿನ ಪ್ರಮಾಣವೆಷ್ಟು ಮತ್ತು ಕೊರತೆ ಇರುವ ಕಲ್ಲಿದ್ದಲ್ಲನ್ನು ಯಾವ ರೀತಿ ಪೂರೈಕೆ ಮಾಡಿಕೊಳ್ಳಲು ಸರ್ಕಾರ ಸಿದ್ಧತೆ ಮಾಡಿಕೊಂಡಿದೆ;

(ಈ) ಸದ್ಯದ ಬೇಡಿಕೆಯಂತೆ ರಾಜ್ಯದಲ್ಲಿ ಎಷ್ಟು ಮೆಗಾವ್ಯಾಟ್ ವಿದ್ಯುತ್ ಬೇಡಿಕೆ ಇದೆ ; ಎಷ್ಟು ಮೆಗಾವ್ಯಾಟ್ ಕೊರತೆ ಇದೆ ; (ವಿವರ ನೀಡುವುದು)

(ಉ) ಕೇಂದ್ರ ಸರ್ಕಾರದಿಂದ ಎಷ್ಟು ಪ್ರಮಾಣದ ಮೆಗಾವ್ಯಾಟ್ ವಿದ್ಯುತ್ ಹಂಚಿಕೆಯಾಗಿದೆ ; ಹಂಚಿಕೆಯಾಗಿರುವ ಪೂರ್ಣ ಪ್ರಮಾಣದ ವಿದ್ಯುತ್ ಸರಬರಾಜು ಆಗುತ್ತಿದೆಯೇ ; (ವಿವರ ನೀಡುವುದು)

(ಊ) ಮುಂಬರುವ ದಿನಗಳು ಬೇಸಿಗೆ ಕಾಲವಾಗಲಿರುವುದರಿಂದ ಕುಡಿಯುವ ನೀರಿಗೆ ಪೂರೈಕೆಯಾಗುವ ವಿದ್ಯುತ್ ಸೇರಿದಂತೆ ಇನ್ನಿತರೆ ಚಟುವಟಿಕೆಗಳಿಗೆ ಹೆಚ್ಚಿನ ಪ್ರಮಾಣದಲ್ಲಿ ವಿದ್ಯುತ್ ಬೇಕಾಗಿರುವುದರಿಂದ ಕೊರತೆ ಇರುವ ವಿದ್ಯುತ್ ಅನ್ನು ಸರ್ಕಾರ ಯಾವ ರೀತಿ ನಿಭಾಯಿಸಲು ಮುಂಜಾಗ್ರತಾ ಕ್ರಮ ತೆಗೆದುಕೊಂಡಿದೆ? (ವಿವರ ನೀಡುವುದು)

## ಯಶವಂತಪುರ APMC ಮಾರುಕಟ್ಟೆಯನ್ನು ದಾಸನಪುರಕ್ಕೆ ಸ್ಥಳಾಂತರ ಮಾಡುವ ಬಗ್ಗೆ

**ಶ್ರೀ ಕಾಂತರಾಜು (ಬಿ.ಎಂ.ಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೪೦ (೭೮೮) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ಉತ್ತರ ತಾಲ್ಲೂಕು ದಾಸನಪುರದಲ್ಲಿ ಹೊಸದಾಗಿ ಎ.ಪಿ.ಎಂ.ಸಿ. ಮಾರುಕಟ್ಟೆಯ ಪ್ರಾಂಗಣವನ್ನು ನಿರ್ಮಿಸಲಾಗಿದೆಯೇ; ಹಾಗಿದ್ದಲ್ಲಿ, ಈ ಮಾರುಕಟ್ಟೆಯನ್ನು ನಿರ್ಮಿಸಲು ಅಂತಿಮ ಹಂತದವರೆಗೆ ಎಷ್ಟು ಹಣವನ್ನು ಖರ್ಚು ಮಾಡಲಾಗಿದೆ ; (ವಿವರ ನೀಡುವುದು)

(ಆ) ಈ ಮಾರುಕಟ್ಟೆಯ ಶಂಕುಸ್ಥಾಪನೆಯನ್ನು ಯಾವಾಗ ಮಾಡಲಾಗಿತ್ತು ಮತ್ತು ಯಾವಾಗ ಈ ಕಾಮಗಾರಿಗಳನ್ನು ಪೂರ್ಣಗೊಳಿಸಿ ಉದ್ಘಾಟನೆ ಮಾಡಲಾಗಿದೆ ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಈ ಮಾರುಕಟ್ಟೆಯನ್ನು ನಿರ್ಮಾಣ ಮಾಡಿದ ಉದ್ದೇಶವೇನು ; (ವಿವರ ನೀಡುವುದು)

(ಈ) ಬೆಂಗಳೂರು ಯಶವಂತಪುರದಲ್ಲಿರುವ ಎ.ಪಿ.ಎಂ.ಸಿ. ಮಾರುಕಟ್ಟೆಯನ್ನು ರದ್ದುಪಡಿಸಿ, ಅಲ್ಲಿನ ಎಲ್ಲಾ ವಹಿವಾಟುಗಳನ್ನು

ನೂತನವಾಗಿ ನಿರ್ಮಿಸಿರುವ ದಾಸನಪುರ ಎ.ಪಿ.ಎಂ.ಸಿ. ಮಾರುಕಟ್ಟೆಗೆ ಸ್ಥಳಾಂತರಿಸುವ ಉದ್ದೇಶ ಹೊಂದಲಾಗಿತ್ತೆ ; ಹಾಗಿದ್ದಲ್ಲಿ ಇಲ್ಲಿಯ ತನಕ ಸ್ಥಳಾಂತರ ಮಾಡದಿರಲು ಕಾರಣವೇನು;

(ಉ) ತುಮಕೂರು–ಬೆಂಗಳೂರು ಮಾರ್ಗದಲ್ಲಿ ಉತ್ತರ ಕನ್ನಡದ ಮತ್ತು ಹಳೆ ಮೈಸೂರು ಹಾಗೂ ಕರಾವಳಿ ಭಾಗದ ಸುಮಾರು ೨೦ ರಿಂದ ೨೨ ಜಿಲ್ಲೆಯ ವಾಹನಗಳು ತುಮಕೂರು–ಯಶವಂತಪುರ–ಬೆಂಗಳೂರು ಮಾರ್ಗವಾಗಿ ಹಾದು ಹೋಗುತ್ತಿರುವುದರ ಜೊತೆಗೆ ಯಶವಂತಪುರ ಎ.ಪಿ.ಎಂ.ಸಿ. ಮಾರುಕಟ್ಟೆಗೆ ತರುವ ಉತ್ಪನ್ನಗಳ ಲಾರಿಗಳಿಂದಲೂ ಸಹ ದಿನೇ ದಿನೇ ಟ್ರಾಫಿಕ್ ಸಮಸ್ಯೆ ಉದ್ಭವಿಸಿ, ಸಾರ್ವಜನಿಕರು ನರಕಯಾತನೆ ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿಲ್ಲವೆ ;

(ಊ) ಬಂದಿದಲ್ಲಿ, ಟ್ರಾಫಿಕ್ ಸಮಸ್ಯೆಯನ್ನು ಬಗೆಹರಿಸಲು ಕೋಟ್ಯಾಂತರ ₹.ಗಳನ್ನು ಖರ್ಚು ಮಾಡಿ ನಿರ್ಮಿಸಿರುವ ದಾನಸಪುರ ಎ.ಪಿ.ಎಂ.ಸಿ. ಮಾರುಕಟ್ಟೆಗೆ ಯಶವಂತಪುರ ಮಾರುಕಟ್ಟೆಯನ್ನು ಸ್ಥಳಾಂತರಿಸಲು ಸರ್ಕಾರ ಕೂಡಲೇ ಕ್ರಮ ಕೈಗೊಳ್ಳುವುದೇ ; (ವಿವರ ನೀಡುವುದು)

(ಋ) ಸರ್ಕಾರ ಎಷ್ಟು ದಿವಸದೊಳಗಾಗಿ ಯಶವಂತಪುರ ಎ.ಪಿ.ಎಂ.ಸಿ. ಮಾರುಕಟ್ಟೆಯನ್ನು ದಾಸನಪುರ ಎ.ಪಿ.ಎಂ.ಸಿ. ಮಾರುಕಟ್ಟೆಗೆ ಸ್ಥಳಾಂತರ ಮಾಡಿ ಸಾರ್ವಜನಿಕರಿಗೆ, ವ್ಯಾಪಾರಸ್ಥರಿಗೆ, ರೈತರಿಗೆ, ಖರೀದಿದಾರರಿಗೆ ಅನುಕೂಲ ಮಾಡಿ ಕೊಡಲಾಗುವುದು ? (ವಿವರ ನೀಡುವುದು)

## ರೈತರ ಸಾಲ ಮನ್ನಾ ಮಾಡುವ ವಿಚಾರದ ಬಗ್ಗೆ

**ಶ್ರೀ ಕಾಂತರಾಜು (ಬಿ.ಎಂ.ಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೪೧ (೬೧೫) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೭–೧೮ನೇ ಸಾಲಿನಲ್ಲಿ ರೈತರು ಸಹಕಾರ ಸಂಘಗಳಿಂದ/ ಸಹಕಾರ ಬ್ಯಾಂಕುಗಳಿಂದ ಪಡೆದ ಕೃಷಿ ಸಾಲದ ಮೊತ್ತವೆಷ್ಟು; (ಅಲ್ಪಾವಧಿ/ಮಧ್ಯಮಾವದಿ/ದೀರ್ಘಾವಧಿ ಸಾಲುಗಳು ಸೇರಿದಂತೆ ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಇದೇ ಸಾಲಿನಲ್ಲಿ ರಾಷ್ಟ್ರೀಕೃತ ಬ್ಯಾಂಕಿನಲ್ಲಿ ಪಡೆದ ಕೃಷಿ ಸಾಲದ ಮೊತ್ತವೆಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಇದೇ ಸಾಲಿನಲ್ಲಿ ಸಹಕಾರ ಬ್ಯಾಂಕುಗಳಿಂದ ಪಡೆದ ರೈತರ ಕೃಷಿ ಸಾಲವನ್ನು ಎಷ್ಟು ಪ್ರಮಾಣದಲ್ಲಿ ಮನ್ನಾ ಮಾಡಲಾಗಿದೆ ; ಹಾಗಿದ್ದಲ್ಲಿ, ಇದರ ಒಟ್ಟು ಮೊತ್ತವೆಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಈ) ಮಳೆಯಿಲ್ಲದೆ ಬೆಳೆ ನಷ್ಟ, ಭೀಕರ ಬರಗಾಲದ ಪರಿಸ್ಥಿತಿ ಇರುವುದರಿಂದ ರೈತರ ಕೃಷಿ ಸಾಲ ಸಂಪೂರ್ಣ ಮನ್ನಾ ಮಾಡಲು ಸರ್ಕಾರ ಕ್ರಮ ಕೈಗೊಳ್ಳುವುದೇ ;

(ಉ) ೨೦೧೭–೧೮ನೇ ಸಾಲಿನ ಕೃಷಿ ಸಾಲವನ್ನು ಸಂಪೂರ್ಣವಾಗಿ ಮನ್ನಾ ಮಾಡಿದರೆ ಸರ್ಕಾರಕ್ಕೆ ಎಷ್ಟು ಮೊತ್ತದ ಹೊರೆಯಾಗುತ್ತದೆ? (ವಿವರ ನೀಡುವುದು)

## ಯಶಸ್ವಿನಿ ಆರೋಗ್ಯ ವಿಮಾ ಯೋಜನೆ ಬಗ್ಗೆ

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೫೪೨ (೭೬೬) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ರೈತರಿಗೆ ಸಹಕಾರಿ ಸಂಸ್ಥೆಗಳ ಮೂಲಕ ಯಶಸ್ವಿನಿ ಆರೋಗ್ಯ ವಿಮಾ ಯೋಜನೆಯನ್ನು ಜಾರಿ ಮಾಡಿರುವುದು ನಿಜವೇ ;

(ಆ) ಹಾಗಿದ್ದಲ್ಲಿ, ಕಳೆದ ಮೂರು ವರ್ಷಗಳಲ್ಲಿ ಯಶಸ್ವಿನಿ ಆರೋಗ್ಯ ವಿಮಾ ಯೋಜನೆಯಡಿ ನೋಂದಾಯಿತ ಖಾಸಗಿ, ಅರೆ ಸರ್ಕಾರಿ ಆಸ್ಪತ್ರೆಗಳೆಷ್ಟು ; ಸದರಿ ಯೋಜನೆಯಡಿ ನೋಂದಾಯಿತ ರೈತರ ಸಂಖ್ಯೆ ಎಷ್ಟು ;

(ಇ) ಬೆಳಗಾವಿ ಜಿಲ್ಲೆಯಲ್ಲಿ ಯಶಸ್ವಿನಿ ಆರೋಗ್ಯ ವಿಮಾ ಯೋಜನೆಯಡಿ ನೋಂದಾಯಿತ ಖಾಸಗಿ, ಅರೆ ಸರ್ಕಾರಿ ಆಸ್ಪತ್ರೆಗಳೆಷ್ಟು ; ಅವು ಯಾವುವು ; (ವಿವರ ನೀಡುವುದು)

(ಈ) ಯಶಸ್ವಿನಿ ಆರೋಗ್ಯ ವಿಮಾ ಯೋಜನೆಯಡಿ ರೈತರು ನೋಂದಾಯಿಸಿಕೊಳ್ಳಲು ಇರುವ ಮಾರ್ಗಸೂಚಿಗಳೇನು ; ಅವರು ಎಷ್ಟು ವಿಮಾ ಕಂತನ್ನು ತುಂಬಬೇಕು ; ಈ ಯೋಜನೆಗೆ ರಾಜ್ಯ ಸರ್ಕಾರವು ಎಷ್ಟು ಮೊತ್ತದ ಹಣ ತುಂಬುತ್ತಿದೆ ; ಕಳೆದ ಮೂರು ವರ್ಷಗಳಲ್ಲಿ ಸರ್ಕಾರ ಪಾವತಿಸಿರುವ ಒಟ್ಟು ಮೊತ್ತವೆಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಉ) ರಾಜ್ಯದ ರೈತರ ಯಾವ ಯಾವ ಖಾಯಿಲೆಗಳನ್ನು ಈ ಯಶಸ್ವಿನಿ ಯೋಜನೆಯಡಿ ತರಲಾಗಿದೆ ; ಎಷ್ಟು ಮೊತ್ತದವರೆಗೆ ರೈತರು ಯಶಸ್ವಿನಿ ಯೋಜನೆಯಡಿ ಚಿಕಿತ್ಸೆ ಪಡೆಯಬಹುದು ; (ವಿವರ ನೀಡುವುದು)

(ಊ) ಕಳೆದ ಮೂರು ವರ್ಷಗಳಲ್ಲಿ ಎಷ್ಟು ಜನ ರೈತರು ಸದರಿ ಯೋಜನೆಯಡಿ ಚಿಕಿತ್ಸೆ ಪಡೆದುಕೊಂಡಿದ್ದಾರೆ ? (ತಾಲ್ಲೂಕುವಾರು ಸಂಪೂರ್ಣ ವಿವರ ನೀಡುವುದು)

## ಕೇಂದ್ರ ಸರ್ಕಾರದ ಭೀಮಾ ಫಸಲ್ ಯೋಜನೆ ಬಗ್ಗೆ

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೫೪೩ (೭೬೭) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೇ:–

(ಅ) ಕೇಂದ್ರ ಸರ್ಕಾರದ ಮಹತ್ವಕಾಂಕ್ಷೆಯ ಯೋಜನೆಯಾದ ರೈತರ ಭೀಮಾ ಫಸಲ್ ಯೋಜನೆಯು ರಾಜ್ಯದಲ್ಲಿ ಅನುಷ್ಠಾನವಾಗಿದೆಯೇ; ಹಾಗಿದ್ದಲ್ಲಿ, ರಾಜ್ಯದ ಎಷ್ಟು ಜಿಲ್ಲೆಗಳಲ್ಲಿ ಈ ಯೋಜನೆಯು ಅನುಷ್ಠಾನಗೊಂಡಿದೆ ;

(ಆ) ೨೦೧೪–೧೫, ೨೦೧೫–೧೬ ಹಾಗೂ ೨೦೧೬–೧೭ನೇ ಸಾಲಿನಲ್ಲಿ ಎಷ್ಟು ಜಿಲ್ಲೆಗಳಲ್ಲಿ, ಎಷ್ಟು ಜನ ರೈತರು ಸದರಿ ಯೋಜನೆಯ ಫಲಾನುಭವಿಯಾಗಿದ್ದಾರೆ ; ಎಷ್ಟು ಜನ ರೈತರು ವಿಮಾ ಕಂತು ತುಂಬಿದ್ದಾರೆ ; (ವರ್ಷಾವಾರು ವಿವರ ನೀಡುವುದು)

(ಇ) ಕಳೆದ ಮೂರು ವರ್ಷಗಳಲ್ಲಿ ಎಷ್ಟು ವಿಮೆ ಮರುಪಾವತಿ ಮಾಡಲಾಗಿದೆ ; (ತಾಲ್ಲೂಕುವಾರು ಸಂಪೂರ್ಣ ವಿವರ ನೀಡುವುದು)

(ಈ) ಇಲ್ಲಿಯವರೆಗೆ ಎಷ್ಟು ಜನ ರೈತರು ಸದರಿ ಯೋಜನೆಯಡಿ ನೋಂದಾಯಿಸಿಕೊಂಡಿದ್ದಾರೆ ; ಈ ಯೋಜನೆಯ ಬಗ್ಗೆ ರಾಜ್ಯದ ರೈತರಿಗೆ ಮಾಹಿತಿ ನೀಡಿ ಪ್ರೋತ್ಸಾಹಿಸಲು ರಾಜ್ಯ ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

## ರಾಜ್ಯದ ಗಡಿ ಜಿಲ್ಲೆಗಳಲ್ಲಿ ಹಾಲು ಕಲಬೆರಕೆ ನಡೆಯುತ್ತಿರುವ ಬಗ್ಗೆ

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೫೪೪ (೭೬೯) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಗಡಿ ಜಿಲ್ಲೆಗಳಲ್ಲಿ ಹಾಲು ಹಾಲಾಹಲವಾಗಿ ಕಲಬೆರಕೆಯು ಅವ್ಯಹತವಾಗಿ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ವ್ಯವಸ್ಥಿತವಾಗಿ ನಡೆಯುತ್ತಿರುವ ಹಾಲು ಕಲಬೆರಕೆ ದಂಧೆಯನ್ನು ನಿಯಂತ್ರಿಸುವ ನಿಟ್ಟಿನಲ್ಲಿ ಸರ್ಕಾರ ತೆಗೆದುಕೊಂಡ ಕ್ರಮಗಳೇನು;

(ಆ) ಮನುಷ್ಯನ ಆರೋಗ್ಯಕ್ಕೆ ಮಾರಕವಾಗಿರುವ ಕಲಬೆರಕೆ ಹಾಲಿನ ದಂಧೆಯು ಯಾವ ಯಾವ ಗಡಿಜಿಲ್ಲೆಗಳಲ್ಲಿ ಹೆಚ್ಚಾಗಿ ಕಂಡು ಬಂದಿರುತ್ತದೆ; ಅವರ ವಿರುದ್ಧ ಏನೇನು ಕ್ರಮ ಕೈಗೊಳ್ಳಲಾಗಿದೆ; (ವಿವರ ನೀಡುವುದು)

(ಇ) ಇಲ್ಲಿಯವರೆಗೆ ಎಲ್ಲೆಲ್ಲಿ, ಎಷ್ಟು ಪ್ರಕರಣಗಳನ್ನು ಪತ್ತೆ ಹಚ್ಚಲಾಗಿದೆ; ಸದರಿ ಪ್ರಕರಣಗಳು ಯಾವ ಹಂತದಲ್ಲಿದೆ;

(ಈ) "ಆಹಾರ ಸುರಕ್ಷತೆ ಕಾಯ್ದೆ, ೨೦೦೬" ಸಮರ್ಪಕವಾಗಿ ಅನುಷ್ಠಾನಗೊಳ್ಳದೆ ಇರಲು ಕಾರಣಗಳೇನು; ಈ ಕಾಯ್ದೆಯನ್ನು ಜಾರಿಗೊಳಿಸುವ ಹೊಣೆ ಯಾರದು; ಸದರಿ ಕಾಯ್ದೆಯ ಸ್ಥೂಲ ವಿವರ ನೀಡುವುದು;

(ಉ) ಸದರಿ ಕಾಯ್ದೆಯು ಕಟ್ಟುನಿಟ್ಟಾಗಿ ಯಾವಾಗ ಅನುಷ್ಠಾನಗೊಳ್ಳುವುದು?

## ಬೆಳಗಾವಿ ಮಹಾನಗರದಲ್ಲಿ ಖಾದಿ ಪ್ಲಾಜಾ ನಿರ್ಮಿಸುವ ಕುರಿತು

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೫೪೫ (೭೬೮) ಮಾನ್ಯ ಜವಳಿ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಳಗಾವಿ ಮಹಾನಗರದಲ್ಲಿ ಕೇಂದ್ರ ಸರ್ಕಾರದ ಸಹಯೋಗದಲ್ಲಿ ನಿರ್ಮಿಸಲು ಉದ್ದೇಶಿಸಿರುವ ಖಾದಿ ಪ್ಲಾಜಾಗೆ ಸ್ಥಳ ಗುರುತಿಸುವಲ್ಲಿ ವಿಳಂಬವಾಗುತ್ತಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಪ್ಲಾಜಾ ನಿರ್ಮಿಸಲು ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ಕ್ರಮವಾಗಿ ಯಾವ ಅನುಪಾತದಲ್ಲಿ ಅನುದಾನ ವಿನಿಯೋಗಿಸುತ್ತಿವೆ;

(ಆ) ಖಾದಿ ಪ್ಲಾಜಾ ನಿರ್ಮಿಸಲು ಈಗಾಗಲೇ ಸ್ಥಳ ಗುರುತಿಸಲಾಗಿದೆಯೇ; ಹಾಗಿದ್ದಲ್ಲಿ, ಯಾವ ಯಾವ ಸ್ಥಳಗಳನ್ನು ಗುರುತಿಸಲಾಗಿದೆ;

(ಇ) ಯಾವ ಕಾಲಮಿತಿಯಲ್ಲಿ ಸ್ಥಳ ಗುರುತಿಸಿ ಖಾದಿ ಪ್ಲಾಜಾ ನಿರ್ಮಿಸಲು ಸರ್ಕಾರ ಕ್ರಮ ಕೈಗೊಳ್ಳುವುದು;

(ಈ) ಬೆಳಗಾವಿ ಜಿಲ್ಲೆಯಲ್ಲಿ ಇರುವ ಒಟ್ಟು ಖಾದಿ ಸಂಸ್ಥೆಗಳೆಷ್ಟು; ಮತ್ತು ವಾರ್ಷಿಕ ಖಾದಿ ಉತ್ಪನ್ನಗಳ ವಹಿವಾಟು ಎಷ್ಟು? (ವಿವರ ನೀಡುವುದು)

## ಬೆಳಗಾವಿ ದಕ್ಷಿಣ ಮತಕ್ಷೇತ್ರದ ನೇಕಾರರ ಬಗ್ಗೆ

**ಶ್ರೀ ಎಂ.ಡಿ.ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು):–**

೫೪೬ (೭೪೯) ಮಾನ್ಯ ಜವಳಿ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಳಗಾವಿ ದಕ್ಷಿಣ ಮತ ಕ್ಷೇತ್ರದಲ್ಲಿ ಅತೀ ಹೆಚ್ಚು ಬಡ ಕೂಲಿ ಸಂಘಟನೆ, ಅಸಂಘಟನೆ ನೇಕಾರರು ವಾಸಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದಯೇ;

(ಆ) ಹಾಗಿದ್ದಲ್ಲಿ, ಜಿಲ್ಲಾ ಮಟ್ಟದ ಜವಳಿ ಇಲಾಖಾ ಅಧಿಕಾರಿಗಳು ನೇಕಾರರಿಗೆ ಬೇಡಿಕೆಗೆ ತಕ್ಕಂತೆ ಸ್ಪಂದಿಸಿರುವರೇ;

(ಇ) ಈ ವರ್ಷದ ಆಯವ್ಯಯದಲ್ಲಿ ಈ ಕ್ಷೇತ್ರದ ನೇಕಾರರ ಬೇಡಿಕೆಗೆ ತಕ್ಕಂತೆ ಯಾವ ಯಾವ ಯೋಜನೆ ಕೈಗೆತ್ತಿಕೊಳ್ಳಲಾಗಿದೆ;

(ಈ) ಬಡ ನೇಕಾರರಿಗೆ ಮುಂದಿನ ಆಯವ್ಯಯದಲ್ಲಿ ನೀಡುವ ಯೋಜನೆಗಳು ಯಾವುವು? (ವಿವರ ನೀಡುವುದು)

## ಬೆಳಗಾವಿ ದಕ್ಷಿಣ ಮತ ಕ್ಷೇತ್ರದ ರೈತರಿಗೆ ನೀರಾವರಿ ಯೋಜನೆ ಬಗ್ಗೆ

**ಶ್ರೀ ಎಂ.ಡಿ.ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು):–**

೫೪೭ (೭೫೦) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಳಗಾವಿ ದಕ್ಷಿಣ ಮತ ಕ್ಷೇತ್ರದಲ್ಲಿ ಬರುವ ದ್ಯಾಮಗೆ, ಯಳ್ಳೂರು, ದುಚ್ಚೆ, ಸಿರನವಾಡಿ ಈ ನಾಲ್ಕು ಗ್ರಾಮ ಪಂಚಾಯಿತಿ ವ್ಯಾಪ್ತಿಯ ರೈತರಿಗೆ ಕಳೆದ ಐದು ವರ್ಷಗಳಲ್ಲಿ ನೀಡಿರುವ ಯೋಜನೆಗಳಾವುವು; (ವಿವರ ನೀಡುವುದು)

(ಆ) ಸರ್ಕಾರದ ಯೋಜನೆಗಳನ್ನು ರೈತರಿಗೆ ಸಮರ್ಪಕವಾಗಿ ಮಾಹಿತಿ ನೀಡದಿರಲು ಕಾರಣವೇನು;

(ಇ) ಹಲವಾರು ಬಾರಿ ರೈತರು ಕಛೇರಿಗೆ ಬಂದಿದ್ದರೂ, ಅಧಿಕಾರಿಗಳು ಸ್ಪಂದಿಸಿಲ್ಲವೆಂಬ ದೂರುಗಳು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಬಂದಿದ್ದಲ್ಲಿ, ಕೂಡಲೇ ಗಮನಹರಿಸಿ, ಸರಿಪಡಿಸಿ ರೈತರಿಗೆ ನ್ಯಾಯ ನೀಡಲಾಗುವುದೇ?

## ಬೆಂಗಳೂರು–ಮಂಗಳೂರು ಸೂಪರ್ ಹೈವೆ ಬಗ್ಗೆ

**ಶ್ರೀ ಎಂ.ಡಿ.ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು):–**

೫೪೮ (೭೪೮) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು–ಮಂಗಳೂರು ಸೂಪರ್ ಹೈವೆ ಕಾಮಗಾರಿ ಕುರಿತಾದ ವಿವರಗಳೇನು;

(ಆ) ಉದ್ದೇಶಿತ ಕಾಮಗಾರಿಯನ್ನು ಪೂರ್ಣಗೊಳಿಸಲು ನಿಗಧಿಪಡಿಸಿರುವ ಕಾಲಾವಧಿ ಎಷ್ಟು;

(ಇ) ಸೂಪರ್ ಹೈವೆಯ ಇಕ್ಕೆಲಗಳಲ್ಲಿ ಎಷ್ಟು ಜಾಗವನ್ನು ರಸ್ತೆಗೆ ಮೀಸಲಿಡಲು ಕಾನೂನು ನಿಯಮಗಳು ಇವೆ;

(ಈ) ಸೂಪರ್ ಹೈವೆಗೆ ತಮ್ಮ ಜಮೀನನ್ನು ಬಿಟ್ಟುಕೊಡುವ ಹಕ್ಕುದಾರರಿಗೆ ನೀಡುವ ಪರಿಹಾರ ಮತ್ತು ಸೌಲಭ್ಯಗಳೇನು?

## ಶ್ರೀ ಕುಕ್ಕೆ ಸುಬ್ರಹ್ಮಣ್ಯ ದೇವಸ್ಥಾನದ ಆಡಳಿತಕ್ಕೆ ಒಳಪಟ್ಟ ಪ್ರೌಢ ಶಾಲೆ/ಪದವಿ ಪೂರ್ವ ಕಾಲೇಜುಗಳ ಭೋದಕ ಮತ್ತು ಭೋದಕೇತರ ಸಿಬ್ಬಂದಿ ಅನುದಾನ ಕುರಿತು

**ಶ್ರೀ ಮೋಹನ್ ಕುಮಾರ್ ಕೊಂಡಜ್ಜಿ (ನಾಮನಿರ್ದೇಶನ ಹೊಂದಿದವರು):–**

೫೪೯ (೭೮೬) ಮಾನ್ಯ ಜವಳಿ ಮತ್ತು ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಶ್ರೀ ಕುಕ್ಕೆ ಸುಬ್ರಹ್ಮಣ್ಯ ದೇವಾಲಯದ ಆಡಳಿತಕೊಳಪಟ್ಟ ಪ್ರೌಢ ಶಾಲೆ ಮತ್ತು ಪದವಿ ಪೂರ್ವ ಕಾಲೇಜಿನಲ್ಲಿ ಅನುದಾನರಹಿತ ನೆಲೆಯಲ್ಲಿ ನೇಮಕಗೊಂಡ ಭೋದಕ ಮತ್ತು ಭೋದಕೇತರ ಸಿಬ್ಬಂದಿ ವರ್ಗದವರಿಗೆ ಸೇವಾ ಭದ್ರತೆ ಮತ್ತು ಕನಿಷ್ಠ ವೇತನ ಹಾಗೂ ಖಾಯಂಗೊಳಿಸುವ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು;

(ಆ) ಕಟೀಲು ಶ್ರೀ ದುರ್ಗಾಪರಮೇಶ್ವರಿ ದೇವಾಲಯದಿಂದ ಸಂಯುಕ್ತ ಪದವಿ ಪೂರ್ವ ಕಾಲೇಜಿನ ಸಿಬ್ಬಂದಿಗಳಿಗೆ ಕಾಲಬದ್ಧ ವೇತನ ಬಡ್ತಿಯನ್ನು ಮಂಜೂರು ಮಾಡಿ ಆದೇಶಿಸಿರುವಂತೆ ಶ್ರೀ ಕುಕ್ಕೆ ಸುಬ್ರಹ್ಮಣ್ಯ ದೇವಾಲಯದ ಸುಬ್ರಹ್ಮಣ್ಯ ಪದವಿ ಪೂರ್ವ ಕಾಲೇಜಿನ ಸಿಬ್ಬಂದಿಗಳಿಗೆ ಕಾಲಬದ್ಧ ವೇತನ ಬಡ್ತಿ ಮಂಜೂರು ಮಾಡಲು ಇರುವ ಅಡೆತಡೆಗಳೇನು;

(ಇ) ಕನಿಷ್ಠ ವೇತನ ಪಡೆದು ಕಾರ್ಯನಿರ್ವಹಿಸುತ್ತಿರುವುದರ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿರುತ್ತದೆಯೇ;

(ಈ) ಖಾಯಂಗೊಳಿಸಲು ಸರ್ಕಾರದಿಂದ ಕೈಗೊಂಡ ಕ್ರಮಗಳ ಮಾಹಿತಿ ಒದಗಿಸುವುದು?

## ಎಲ್.ಇ.ಡಿ. ಬಲ್ಪ್ ಮತ್ತು ಫ್ಯಾನ್‌ಗಳ ಬಗ್ಗೆ

**ಶ್ರೀ ಎಂ ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೫೫೦ (೭೮೨) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಗ್ರಾಹಕರಿಗೆ ಇಂಧನ ಇಲಾಖೆ ವತಿಯಿಂದ ವಿದ್ಯುತ್ ಉಳಿಸಲು ಕೆಲವು ವಿದ್ಯುತ್ (ಎಲ್.ಇ.ಡಿ. ಬಲ್ಪ್ ಮತ್ತು ಫ್ಯಾನ್‌ಗಳನ್ನು) ಸಾಮಗ್ರಿಗಳನ್ನು ನೀಡಲಾಗುತ್ತಿದೆಯೇ;

(ಆ) ನೀಡಲಾಗುತ್ತಿದ್ದರೆ, ಇತ್ತೀಚಿನ ದಿನಗಳಲ್ಲಿ ಎಲ್.ಇ.ಡಿ. ಬಲ್ಪ್‌ಗಳನ್ನು ನೀಡದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ವಿದ್ಯುತ್ ಉಳಿತಾಯವಾಗುವಂತಹ ವಿದ್ಯುತ್ ಸಾಮಗ್ರಿಗಳನ್ನು ನೀಡಲು ಸರ್ಕಾರಕ್ಕಿರುವ ತೊಂದರೆಗಳೇನು? (ಪೂರ್ಣ ಮಾಹಿತಿ ನೀಡುವುದು)

## ಬಿತ್ತನೆ ಬೀಜ ವಿತರಿಸುವ ಕುರಿತು

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೫೫೧ (೭೮೪) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಸಣ್ಣ ಮತ್ತು ಅತಿಸಣ್ಣ ರೈತರಿಗೆ ಶೇ. ೪೦ ರಷ್ಟು ರಿಯಾಯಿತಿ ದರದಲ್ಲಿ ಬಿತ್ತನೆ ಬೀಜವನ್ನು ವಿತರಿಸುವ ಕಾರ್ಯಕ್ರಮವನ್ನು ಸರ್ಕಾರವು ಹಮ್ಮಿಕೊಂಡಿದೆಯೇ;

(ಆ) ಕಳೆದ ೨ ವರ್ಷಗಳಿಂದ ಈ ಯೋಜನೆಗೆ ಮೀಸಲಿಟ್ಟ ಹಣದ ಮೊತ್ತವೆಷ್ಟು; ಮತ್ತು ರಾಜ್ಯದಲ್ಲಿ ಎಷ್ಟು ಜನ ರೈತ ಬಾಂಧವರು ಈ ಯೋಜನೆಯ ಲಾಭವನ್ನು ಪಡೆದುಕೊಂಡಿರುತ್ತಾರೆ;

(ಇ) ಈ ಸಾಲಿನಲ್ಲಿ ಎಷ್ಟು ಕ್ವಿಂಟಾಲ್ ಬಿತ್ತನೆ ಬೀಜ ದಾಸ್ತಾನು ಇದೆ; ಈ ದಾಸ್ತಾನು ರೈತರ ಬೇಡಿಕೆಯುನ್ನು ಪೂರೈಸಲು ಸಾಕಾಗುತ್ತಿದೆಯೇ?

## ರೈತರ ಅವಶ್ಯಕತೆಗನುಗುಣವಾಗಿ ಸೌಲಭ್ಯಗಳನ್ನು ಒದಗಿಸುವ ಬಗ್ಗೆ

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೫೫೨ (೭೮೯) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬಿತ್ತನೆ, ಕಟಾವು ಮತ್ತು ಇತರೆ ಕೃಷಿ ಕಾರ್ಯಗಳ ಯಂತ್ರೋಪಕರಣಗಳನ್ನು ಪ್ರತಿ ಸಹಕಾರಿ ಸಂಘಗಳಿಗೆ ರಿಯಾಯಿತಿ ದರದಲ್ಲಿ ಒದಗಿಸುವ ಮೂಲಕ ಕೃಷಿ ಕಾರ್ಮಿಕರ ಕೊರತೆಯನ್ನು ನಿವಾರಿಸಬಲ್ಲ ಯೋಜನೆಯನ್ನು ಸರ್ಕಾರವು ಹೊಂದಿದೆಯೇ; ಇಲ್ಲದೇ ಇದ್ದಲ್ಲಿ, ಕಾರಣವೇನು;

(ಆ) ಕೃಷಿ ಕಾರ್ಮಿಕರ ಕೊರತೆ ಇರುವುದರಿಂದ, ರೈತರಿಂದ ಕೃಷಿ ಯಂತ್ರಗಳಿಗೆ ಬಹಳಷ್ಟು ಬೇಡಿಕೆ ಇದ್ದು, ಬೇರೆ ರಾಜ್ಯಗಳಿಂದ ಯಂತ್ರಗಳು ಬರುತ್ತಿದ್ದು, ಅವುಗಳಿಗೆ ಮನಸೋ ಇಚ್ಛೆ ದರವನ್ನು ಪಡೆಯುತ್ತಿದ್ದರೂ ಕೂಡ, ಅವಶ್ಯಕತೆಗೆ ತಕ್ಕಂತೆ ಸರ್ಕಾರದಿಂದ ಯಂತ್ರಗಳನ್ನು ಪೂರೈಸಲು ಕ್ರಮ ಕೈಗೊಳ್ಳದಿರಲು ಕಾರಣವೇನು; ಇದಕ್ಕೆ ಬದಲಿ ವ್ಯವಸ್ಥೆ ಏನು?

## ಸಹಕಾರ ಸಪ್ತಾಹಕ್ಕೆ ಸಂಗ್ರಹಿಸಿದ ಮೊತ್ತವನ್ನು ವಿನಿಯೋಗಿಸಿರುವ ಬಗ್ಗೆ

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೫೫೩ (೭೯೩) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಸಹಕಾರ ಸಂಘಗಳಿಂದ ಸಹಕಾರ ಸಪ್ತಾಹ ಆಚರಿಸಲು ಸಂಗ್ರಹಿಸಿದ ಮೊತ್ತವೆಷ್ಟು; (ಜಿಲ್ಲಾವಾರು ವಿವರ ನೀಡುವುದು)

(ಆ) ಸಹಕಾರ ಸಪ್ತಾಹಕ್ಕೆ ಸಂಗ್ರಹಿಸಿದ ಮೊತ್ತವನ್ನು ಯಾವ ಯಾವ ಕಾರ್ಯಕ್ರಮಗಳಿಗೆ ಉಪಯೋಗಿಸಲಾಗಿದೆ; ರೈತರಿಗೆ ತರಬೇತಿ ನೀಡಿದ ಕಾರ್ಯಕ್ರಮಗಳೆಷ್ಟು; (ಜಿಲ್ಲಾವಾರು ವಿವರ ನೀಡುವುದು)

(ಇ) ಸಹಕಾರ ಸಪ್ತಾಹಕ್ಕೆ ಸಂಗ್ರಹಿಸಿದ ಮೊತ್ತದಲ್ಲಿ ಅವ್ಯವಹಾರ ಆಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಅವು ಯಾವುವು; ಈ ಬಗ್ಗೆ ಸರ್ಕಾರ ತೆಗೆದುಕೊಂಡ ಕ್ರಮವೇನು?

## ಮೆಸ್ಕಾಂನ ಶಂಕರನಾರಾಯಣ ಉಪ ವಿಭಾಗವು ಸಮರ್ಪಕವಾಗಿ ಕಾರ್ಯಾರಂಭಗೊಳ್ಳದಿರುವ ಬಗ್ಗೆ

**ಶ್ರೀ ಕೆ. ಪ್ರತಾಪ್‌ಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೫೪ (೭೯೨) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮೆಸ್ಕಾಂನ ಉಡುಪಿ ಜಿಲ್ಲೆಯ ಶಂಕರನಾರಾಯಣ ಉಪ ವಿಭಾಗವು ಯಾವಾಗ ಕಾರ್ಯಾರಂಭಗೊಂಡಿತು; ಇಲ್ಲಿಗೆ ಮಂಜೂರಾದ ಮತ್ತು ಕಾರ್ಯನಿರ್ವಹಿಸುತ್ತಿರುವ ಹುದ್ದೆಗಳ ವಿವರ ನೀಡುವುದು;

(ಆ) ಈ ಉಪವಿಭಾಗದ ಕಂದಾಯ ಶಾಖೆಯು ಪ್ರಾರಂಭವಾಗದೇ ಇರುವುದರಿಂದ ಜನರಿಗೆ ತೊಂದರೆಯಾಗುತ್ತಿದ್ದು, ಈ ಬಗ್ಗೆ ಸರ್ಕಾರದ ಕ್ರಮವೇನು;

(ಇ) ಈ ಉಪವಿಭಾಗ ವ್ಯಾಪ್ತಿಯ ಬೆಳ್ವೆ ಶಾಖೆ ಮತ್ತು ಅಂಪಾರು ಶಾಖೆಗಳಿಗೆ ಅಗತ್ಯವಿರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು; ಮತ್ತು ಯಾವಾಗ ಕಾರ್ಯಾರಂಭಗೊಳ್ಳುವುದು?

## ರೆಡಿಮಿಕ್ಸ್, ವೆಟ್‌ಮಿಕ್ಸ್ ಘಟಕಗಳ ಬಳಕೆ ಬಗ್ಗೆ ಮಾನದಂಡ, ಮಾರ್ಗಸೂಚಿಗಳ ಬಗ್ಗೆ

**ಶ್ರೀ ಕೆ. ಪ್ರತಾಪ್‌ಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

*೫೫೫* (೭೯೧) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ರಸ್ತೆ ನಿರ್ಮಾಣದ ರೆಡಿಮಿಕ್ಸ್ ಮತ್ತು ವೆಟ್‌ಮಿಕ್ಸ್ (ಕಾಂಕ್ರೀಟ್ & ಟಾರ್)ನ ಎಷ್ಟು ಘಟಕಗಳಿವೆ; ಇವುಗಳಿಂದ ಎಷ್ಟು ದೂರದವರೆಗಿನ ಕಾಮಗಾರಿ ಸ್ಥಳಕ್ಕೆ ರೆಡಿಮಿಕ್ಸ್ ಮತ್ತು ವೆಟ್‌ಮಿಕ್ಸ್‌ನ್ನು ಕೊಂಡೊಯ್ಯಬಹುದು; ನಿಗದಿತ ಅಂತರವನ್ನು ಮೀರಿ ಇವುಗಳನ್ನು ಕೊಂಡೊಯ್ಯುವುದರಿಂದ ಕಾಮಗಾರಿಯ ಗುಣಮಟ್ಟಕ್ಕೆ ತೊಂದರೆಯಾಗುವುದಿಲ್ಲವೇ;

(ಆ) ಕಾಮಗಾರಿ ಸ್ಥಳ ಹಾಗೂ ರೆಡಿಮಿಕ್ಸ್, ವೆಟ್‌ಮಿಕ್ಸ್‌ನ ಘಟಕಗಳು ಬೇರೆ ಬೇರೆ ಸ್ಥಳದಲ್ಲಿರುವುದರಿಂದ, ಇಂಜಿನಿಯರ್‌ಗಳು ರೆಡಿಮಿಕ್ಸ್ ಮತ್ತು ವೆಟ್‌ಮಿಕ್ಸ್‌ಗಳ ತಯಾರಿಯ ಸಂದರ್ಭದಲ್ಲಿ ಸ್ಥಳದಲ್ಲಿ ಇಲ್ಲದೇ ಇರುವುದರಿಂದ ಕಾಮಗಾರಿಯ ಗುಣಮಟ್ಟವನ್ನು ಪರಿಶೀಲಿಸುವುದು ಹೇಗೆ ಸಾಧ್ಯ; ಈ ಬಗ್ಗೆ ಸರ್ಕಾರದ ಕ್ರಮವೇನು;

(ಇ) ರೆಡಿಮಿಕ್ಸ್, ವೆಟ್‌ಮಿಕ್ಸ್‌ಗಳ ಬಳಕೆ ಬಗ್ಗೆ ಸರ್ಕಾರದ ಮಾರ್ಗಸೂಚಿ, ಮಾನದಂಡಗಳನ್ನು ಒದಗಿಸುವುದು, ಇಲ್ಲದಿದ್ದಲ್ಲಿ ಹೊಸ ತಂತ್ರಜ್ಞಾನದಡಿಯಲ್ಲಿ ಕಳಪೆ ಕಾಮಗಾರಿಗೆ ಅವಕಾಶ ಕೊಟ್ಟಂತಾಗುವುದಿಲ್ಲವೇ?

## ತೋಟಗಾರಿಕಾ ಬೆಳೆಗಳು ಕಾಡುಪ್ರಾಣಿಗಳಿಂದ ನಾಶವಾಗುತ್ತಿರುವುದನ್ನು ತಡೆಯಲು ವೈಜ್ಞಾನಿಕವಾಗಿ ಪರಿಹಾರ ಕಂಡುಕೊಳ್ಳುವ ಬಗ್ಗೆ

**ಶ್ರೀ ಕೆ. ಪ್ರತಾಪ್‌ಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೫೬ (೭೯೦) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ತೆಂಗಿನ ತೋಟಗಳಲ್ಲಿ, ತೆಂಗಿನ ಗಿಡಗಳು ಹಾಗೂ ಬಿದ್ದ ತೆಂಗಿನಕಾಯಿಗಳು, ಕಾಡುಹಂದಿಗಳಿಂದ ನಾಶವಾಗುತ್ತಿರುವುದು ಇಲಾಖೆಯ ಗಮನಕ್ಕೆ ಬಂದಿದೆಯೇ; ಈ ಕಾಡುಪ್ರಾಣಿಗಳ ಹಾವಳಿಯನ್ನು ನಿಯಂತ್ರಿಸಲು ಇಲಾಖೆಯ ಕ್ರಮವೇನು;

(ಆ) ತೆಂಗು, ಅಡಿಕೆ, ಗೇರು ಮುಂತಾದ ಬೆಳೆಗಳಿಗೆ ಕಾಡುಪ್ರಾಣಿಯಾದ ಮಂಗಗಳಿಂದ ಆಗುತ್ತಿರುವ ಹಾವಳಿಯನ್ನು ನಿಯಂತ್ರಿಸಲು ಇಲಾಖೆಯ ಕ್ರಮವೇನು;

(ಇ) ಇಲಾಖೆಯಿಂದ ಲಕ್ಷಾಂತರ ರೂಪಾಯಿ ತೋಟಗಾರಿಕೆಗೆ ಪ್ರೋತ್ಸಾಹಧನವನ್ನು ನೀಡಿ, ರೈತನು ಕಷ್ಟಪಟ್ಟು ಬೆಳೆಸಿದ ಗಿಡಗಳನ್ನು ಹಾಗೂ ಫಲವನ್ನು ರಕ್ಷಿಸಲಾಗದ ಪರಿಸ್ಥಿತಿಯಲ್ಲಿ ರೈತನು ಇರುವುದು ಇಲಾಖೆಯ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಇವುಗಳ ಶಾಶ್ವತ ಪರಿಹಾರಕ್ಕೆ ವೈಜ್ಞಾನಿಕವಾಗಿ ಪರಿಹಾರವನ್ನು ಕಂಡುಕೊಳ್ಳುವ ಪ್ರಯತ್ನ ಮಾಡಲಾಗುವುದೇ; ಈ ಬಗ್ಗೆ ಸರ್ಕಾರದ ಚಿಂತನೆಯೇನು?

## ರಾಜ್ಯದಲ್ಲಿ ಬೆಳೆದಿರುವ ಮೆಕ್ಕೆಜೋಳಕ್ಕೆ ಬೆಂಬಲ ಬೆಲೆ ನಿಗಧಿ ಬಗ್ಗೆ

**ಶ್ರೀ ಆರ್. ಪ್ರಸನ್ನ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೫೭ (೪೮೧) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಬೆಳೆದಿರುವ ಮೆಕ್ಕೆಜೋಳಕ್ಕೆ ಬೆಂಬಲ ಬೆಲೆ ನಿಗಧಿಯಾಗಿದೆಯೇ; ನಿಗಧಿಯಾಗಿದ್ದಲ್ಲಿ, ಯಾವ ದರಕ್ಕೆ ನಿಗಧಿಯಾಗಿದೆ;

(ಆ) ಮೆಕ್ಕೆಜೋಳ ಖರೀದಿ ಕೇಂದ್ರ ಆರಂಭಿಸಲು ಇರುವ ತೊಂದರೆ ಏನು; ತೊಂದರೆ ಇದ್ದಲ್ಲಿ, ಇದನ್ನು ನಿವಾರಣೆ ಮಾಡಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ;

(ಇ) ಇತರೆ ಯಾವ ಬೆಳೆಗಳ ಖರೀದಿಗೆ ಸರ್ಕಾರದ ವತಿಯಿಂದ ಖರೀದಿ ಕೇಂದ್ರಗಳನ್ನು ಆರಂಭಿಸಿದ್ದೀರಿ, ಖರೀದಿ ಕೇಂದ್ರಗಳ ವಿವರ ಹಾಗೂ ಬೆಳೆಗಳ ವಿವರ ನೀಡುವುದು?

## ಬೆಳೆ ವಿಮೆ ಸಂಸ್ಥೆಗಳ ಬಗ್ಗೆ

**ಶ್ರೀ ಆರ್. ಪ್ರಸನ್ನಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೫೮ (೪೮೦) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಬೆಳೆ ವಿಮೆಗಳನ್ನು ಮಾಡಿಸಲು ಯಾವ ಯಾವ ಸಂಸ್ಥೆಗಳು ಇವೆ; (ಇವುಗಳ ವಿವರ ನೀಡುವುದು)

(ಆ) ಬೆಳೆ ವಿಮೆ ಕಂಪನಿಗಳಿಂದ ರೈತರಿಗೆ ಬರಬೇಕಾದ ಬೆಳೆ ವಿಮೆ ಹಣ ಪೂರ್ಣ ಸಂದಾಯವಾಗಿದೆಯೇ; ಸಂದಾಯವಾಗದಿದ್ದಲ್ಲಿ, ಇದರ ವಿವರವನ್ನು ನೀಡುವುದು;

(ಇ) ಶಿವಮೊಗ್ಗ ಜಿಲ್ಲೆಯಲ್ಲಿ ಇನ್ನೂ ಪಾವತಿಯಾಗದೆ ಉಳಿದಿರುವ ಬೆಳೆ ವಿಮೆ ಹಣ ಎಷ್ಟು;

(ಈ) ಬೆಳೆ ವಿಮೆ ಮಾಡಿಸಿರುವ ರೈತರ ಬ್ಯಾಂಕ್ ಅಕೌಂಟ್ ನಂ. ಹಾಗೂ ಆಧಾರ್ ಕಾರ್ಡ್ ನಂ. ತಾಳೆಯಾಗದೆ ಇರುವಂತಹ ಪ್ರಕರಣ ಎಷ್ಟು; ಇದರ ಮೊತ್ತ ಎಷ್ಟು;

(ಉ) ಬಾಕಿ ಉಳಿದಿರುವ ಹಣವನ್ನು ರಾಜ್ಯದ ಅಪೆಕ್ಸ್ ಬ್ಯಾಂಕಿನಲ್ಲಿ ಜಮಾ ಮಾಡಲಾಗಿದೆಯೇ; ಜಮೆ ಮಾಡಿದ್ದಲ್ಲಿ ಅದರ ವಿವರ ನೀಡುವುದು?

## ತೋಟಗಾರಿಕೆ ಬೆಳೆಗಾರರ ಸೌಲಭ್ಯ ಕುರಿತು

**ಶ್ರೀ ಆರ್. ಪ್ರಸನ್ನ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೫೯ (೬೧೨) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ತೋಟಗಾರಿಕೆ ಬೆಳೆಗಾರರಿಗೆ ಇಲಾಖೆಯಿಂದ ಯಾವ ಸೌಲಭ್ಯಗಳನ್ನು ನೀಡಲಾಗುತ್ತಿದೆ;

(ಆ) ಈ ಸೌಲಭ್ಯಗಳ ವಿವರಗಳನ್ನು ನೀಡಲಾಗುವುದೇ; ೨೦೧೩ ರಿಂದ ೨೦೧೮ರವರೆಗೆ ಎಷ್ಟು ಜನ ಫಲಾನುಭವಿಗಳಿಗೆ ಸೌಲಭ್ಯಗಳು ದೊರೆತಿರುತ್ತವೆ; ಇದರ ಮೊತ್ತ ಎಷ್ಟು; (ಜಿಲ್ಲಾವಾರು ವಿವರ ನೀಡುವುದು)

(ಇ) ತೋಟಗಾರಿಕೆ ಬೆಳೆ ಬೆಳೆಯಲು ಪ್ರೋತ್ಸಾಹವನ್ನು ನೀಡುವುದಕ್ಕಾಗಿ ಹೊಸ ಯೋಜನೆಗಳೇನಾದರೂ ಸರ್ಕಾರದ ಮುಂದಿದೆಯೇ?

## ಭತ್ತ ಕಟಾವಿಗೆ ಬರುವ ಸಂದರ್ಭದಲ್ಲಿ ಸೈನಿಕ ಹುಳುವಿನ ಬಾಧೆಯಿಂದ ಭತ್ತದ ಬೆಳೆ ನಾಶವಾಗುತ್ತಿರುವ ಬಗ್ಗೆ

**ಶ್ರೀ ಆರ್. ಪ್ರಸನ್ನ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೬೦ (೬೧೧) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಭತ್ತ ಕಟಾವಿಗೆ ಬರುವ ಸಂದರ್ಭದಲ್ಲಿ ಸೈನಿಕ ಹುಳುವಿನ ಬಾಧೆಯಿಂದ ಭತ್ತದ ತೆನೆ ಕಟ್ಟಾಗಿ ಬೀಳುವುದರಿಂದ ರೈತರಿಗೆ ತುಂಬಾ ನಷ್ಟವುಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಇಳುವರಿಯಲ್ಲಿ ಶೇಕಡ ೮೦ ಭಾಗ ಕಡಿಮೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಗಮನಕ್ಕೆ ಬಂದಿದ್ದಲ್ಲಿ, ಸರ್ಕಾರ ಈ ರೋಗಕ್ಕೆ ಕಾರಣವಾದ ಹುಳುವಿನ ಬಾಧೆಯನ್ನು ತಡೆಗಟ್ಟಲು ಯಾವ ಕ್ರಮ ಕೈಗೊಂಡಿದೆ;

(ಇ) ರೈತರಿಗೆ ಈ ಸಮಸ್ಯೆ ಕುರಿತು ಇಲಾಖೆಯಿಂದ ತಿಳುವಳಿಕೆ ಕೊಡುವ ಬಗ್ಗೆ ಯಾವ ಕ್ರಮ ಕೈಗೊಂಡಿದೆ;

(ಈ) ಭತ್ತದ ಬೆಳೆ ಹಾಳಾಗಿರುವ ರೈತರಿಗೆ ಪರಿಹಾರ ಧನ ಕೊಡುವ ಚಿಂತನೆ ಸರ್ಕಾರದ ಮುಂದಿದೆಯೇ?

## ನೈಟ್ರೋಜನ್ ಗ್ಯಾಸ್ ಕಂಟೇನರ್ ಖರೀದಿಯಲ್ಲಿನ ಅಕ್ರಮದ ಬಗ್ಗೆ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):–**

೫೬೧ (೪೭೫) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಪಶುಸಂಗೋಪನೆ ಇಲಾಖೆಯಲ್ಲಿ ಜಾನುವಾರುಗಳ ತಳಿ ಅಭಿವೃದ್ಧಿಗಾಗಿ ನೈಟ್ರೋಜನ್ ಗ್ಯಾಸ್ ಕಂಟೇನರ್ ಖರೀದಿಯಲ್ಲಿ ಅಕ್ರಮ/ ಅವ್ಯವಹಾರ ನಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, (ವಿವರ ನೀಡುವುದು)

(ಆ) ನೈಟ್ರೋಜನ್ ಗ್ಯಾಸ್ ಕಂಟೇನರ್‌ಗಳನ್ನು ಖರೀದಿಸಲು ಯಾವ ಯಾವ ಕಂಪನಿಗಳು ಟೆಂಡರ್‌ನಲ್ಲಿ ಭಾಗಿಯಾಗಿದ್ದವು; (ಸಂಪೂರ್ಣ ವಿವರ ನೀಡುವುದು)

(ಇ) ವಾಸ್ತವವಾಗಿ ಸರ್ಕಾರಿ ಸ್ವಾಮ್ಯದ ಕಂಪನಿಯು ಕಡಿಮೆ ದರದಲ್ಲಿ ಕಂಟೇನರ್‌ಗಳನ್ನು ಸರಬರಾಜು ಮಾಡುವ ಬಗ್ಗೆ ಟೆಂಡರ್‌ನಲ್ಲಿ ಉಲ್ಲೇಖಿಸಿದ್ದರೂ, ಖಾಸಗಿ ಕಂಪನಿಯವರಿಗೆ ಟೆಂಡರ್ ನೀಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ವಿವರ ನೀಡುವುದು; ಹಾಗೂ ಈ ಕಂಟೇನರ್‌ಗಳು ಯಾವ ಕಂಪನಿಗೆ ಸೇರಿರುತ್ತದೆ;

(ಈ) ಈ ಅಕ್ರಮದಲ್ಲಿ ಭಾಗಿಯಾದ ಅಧಿಕಾರಿಗಳ ವಿರುದ್ಧ ಯಾವ ಕ್ರಮ ಕೈಗೊಳ್ಳಲಾಗಿದೆ ಹಾಗೂ ಇದರಿಂದ ಸರ್ಕಾರಕ್ಕೆ ಉಂಟಾಗಿರುವ ನಷ್ಟವೆಷ್ಟು? (ಸಂಪೂರ್ಣ ವಿವರ ನೀಡುವುದು)

## ವಿದ್ಯುತ್ ನಿಗಮಕ್ಕೆ ಬರಬೇಕಾದ ಬಾಕಿ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):–**

೫೬೨ (೪೭೬) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ವಿದ್ಯುತ್ ನಿಗಮ ಕೆ.ಪಿ.ಟಿ.ಸಿಎಲ್. ಮತ್ತು ಎಲ್ಲಾ ಎಸ್ಕಾಂಗಳಿಗೆ ವಿದ್ಯುತ್ ಸರಬರಾಜು ಮಾಡಿದ್ದಕ್ಕಾಗಿ ಮತ್ತು ಇತರೆ ಕಾರಣಗಳಿಗಾಗಿ ಯಾವ ಯಾವ ಸಂಸ್ಥೆಗಳಿಂದ ಮತ್ತು ವ್ಯಕ್ತಿಗಳಿಂದ ಇಲ್ಲಿಯವರೆಗೆ ಎಷ್ಟೆಷ್ಟು ಮೊತ್ತದ ಬಾಕಿ ಹಣ ಬರಬೇಕಾಗಿದೆ; (ಬಾಕಿ ಉಳಿಸಿಕೊಂಡಿರುವ ಸಂಸ್ಥೆಗಳು ವ್ಯಕ್ತಿಗಳ ಹೆಸರು ವಿವರಗಳನ್ನು ಒದಗಿಸುವುದು)

(ಆ) ಎಷ್ಟು ಅವಧಿಯಿಂದ ಈ ಬಾಕಿ ಉಳಿದುಕೊಂಡು ಬಂದಿದೆ; ಈ ಬಾಕಿ ಹಣವನ್ನು ವಸೂಲು ಮಾಡಲು ಇಂಧನ ಇಲಾಖೆಯು ಇಲ್ಲಿಯವರೆವಿಗೆ ಯಾವ ಯಾವ ಕ್ರಮಗಳನ್ನು ಕೈಗೊಂಡಿದೆ; ಎಷ್ಟು ಜನರಿಗೆ ನೊಟೀಸ್ ನೀಡಿದೆ; ಎಷ್ಟು ಪ್ರಕರಣಗಳಲ್ಲಿ ವಿದ್ಯುತ್ ಸಂಪರ್ಕವನ್ನು ಕಡಿದು ಹಾಕಿದೆ? (ಎಲ್ಲಾ ಪ್ರಕರಣಗಳ ಸಂಪೂರ್ಣ ವಿವರಗಳನ್ನು ಒದಗಿಸುವುದು)

## ತೋಟಗಾರಿಕೆ ವಿಜ್ಞಾನಿಗಳ ವಿಶ್ವವಿದ್ಯಾಲಯ ಕಾರ್ಯಚಟುವಟಿಕೆಗಳು

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):–**

೫೬೩ (೪೭೭) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯು ಅಸ್ಥಿತ್ವಕ್ಕೆ ಬಂದಾಗಿನಿಂದ ತೋಟಗಾರಿಕೆ ಬೆಳೆಗಳ ಮಹತ್ವ ಸಂಶೋಧನ ವಿಸ್ತರಣೆ ಮತ್ತು ಶಿಕ್ಷಣವನ್ನು ನೀಡುವಲ್ಲಿ ಹಮ್ಮಿಕೊಂಡ ಗುರಿ ಮತ್ತು ಸಾಧನೆಗಳ ವಿವರ ನೀಡುವುದು; (ಮಾಹಿತಿ ನೀಡುವುದು)

(ಆ) ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ತೋಟಗಾರಿಕೆ ವಿಶ್ವವಿದ್ಯಾಲಯಕ್ಕೆ ಈ ಅವಧಿಯಲ್ಲಿ ಮಂಜೂರು ಮಾಡಿದ ಅನುದಾನದ ಮೊತ್ತ ಎಷ್ಟು;

(ಇ) ಉತ್ತರ ಕರ್ನಾಟಕ ಭಾಗದಲ್ಲಿ ತೋಟಗಾರಿಕೆ ಬೆಳೆಗಳ ವಲಯಕ್ಕೆ ವಿಶ್ವವಿದ್ಯಾಲಯ ಸಲ್ಲಿಸಿದ ಸೇವೆ ಮತ್ತು ಆ ಭಾಗದ ಜನರಿಗೆ ನೂತನ ತೋಟಗಾರಿಕೆ ಕುರಿತ ಶಿಕ್ಷಣ ಮತ್ತು ಮಾರುಕಟ್ಟೆ ಅಭಿವೃದ್ಧಿ ನಿಟ್ಟಿನಲ್ಲಿ ವಿಶ್ವವಿದ್ಯಾಲಯದ ಗಣನೀಯ ಕೊಡುಗೆ ಏನು? (ವಿವರ ಒದಗಿಸುವುದು)

## ಲೋಕೋಪಯೋಗಿ ಕಾಮಗಾರಿಗಳ ಪ್ರಗತಿ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):–**

೫೬೪ (೪೭೮) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ಮೂರು ವರ್ಷದ ಅವಧಿಯಲ್ಲಿ ಲೋಕೋಪಯೋಗಿ ಇಲಾಖೆಯ ವತಿಯಿಂದ ಪ್ರತಿ ವಿಧಾನ ಸಭಾ ಕ್ಷೇತ್ರದಲ್ಲಿ ಒಂದು ಕೋಟಿ ₹. ಗಳಿಗೆ ಮೇಲ್ಪಟ್ಟ ಎಷ್ಟು ವಿವಿಧ ಬಗೆಯ ಕಾಮಗಾರಿಗಳು ಪ್ರಗತಿಯಲ್ಲಿವೆ ; (ಕಾಮಗಾರಿಯ ವಿವರ ಮತ್ತು ಟೆಂಡರ್ ಮೊತ್ತದ ಅಂಕಿ ಅಂಶಗಳ ಸ್ಪಷ್ಟ ಮಾಹಿತಿ ಒದಗಿಸುವುದು)

(ಆ) ನಿಯಮಗಳ ಪ್ರಕಾರ ಈ ಕಾಮಗಾರಿಗಳು ಎಂದಿಗೆ ಮುಕ್ತಾಯವಾಗಬೇಕಾಗಿತ್ತು ಇದರ ಅನ್ವಯ ನಿಗಧಿತ ಸಮಯದಲ್ಲಿ ಮುಕ್ತಾಯಗೊಂಡ ಕಾಮಗಾರಿಗಳು ಯಾವುವು ಮತ್ತು ನಿಗಧಿತ ಅವಧಿ ಮೀರಿದ ನಂತರವೂ ಅಪೂರ್ಣವಾಗಿರುವ ಕಾಮಗಾರಿಗಳು ಯಾವುವು; (ಕಾಮಗಾರಿಗಳ ಹೆಸರು ವಿವರಗಳನ್ನು ವಿಧಾನ ಸಭಾ ಕ್ಷೇತ್ರವಾರು ಅಂಕಿ ಅಂಶಗಳನ್ನು ಒದಗಿಸುವುದು)

(ಇ) ನಿಗಧಿತ ಅವಧಿ ಪೂರ್ಣಗೊಂಡ ನಂತರವೂ ಅಪೂರ್ಣವಾಗಿರುವ ಕಾಮಗಾರಿಗಳನ್ನು ಆದಷ್ಟು ಶೀಘ್ರವಾಗಿ ಪೂರ್ಣಗೊಳಿಸಲು ಸರ್ಕಾರದ ಮುಂದಿರುವ ಕ್ರಮಗಳೇನು? (ವಿವರ ನೀಡುವುದು)

## ನಿವೇಶನದ ಹಣ ಪಾವತಿಸಿರುವ ಸಹ ಸದಸ್ಯರುಗಳಿಗೆ ನಿವೇಶನ ನೋಂದಣಿ ಮಾಡಿಕೊಡುವ ಬಗ್ಗೆ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):–**

೫೬೫ (೬೨೧) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಗೃಹ ನಿರ್ಮಾಣ ಸಹಕಾರ ಸಂಘ (ರಿ), ಎಂ.ಸಿ. ಲೇಔಟ್, ವಿಜಯನಗರ ವಾಟರ್ ಟ್ಯಾಂಕ್ ಹಿಂಭಾಗ, ಬೆಂಗಳೂರು, ಇವರು ಈವರೆಗೆ ಎಷ್ಟು ಸಹ ಸದಸ್ಯರಿಂದ (Associated Member) ನಿವೇಶನ ಹಂಚಿಕೆಗಾಗಿ ಪೂರ್ಣ ಹಣವನ್ನು ವಸೂಲಿ ಮಾಡಿರುತ್ತಾರೆ; ಪ್ರತಿ ನಿವೇಶನಕ್ಕೆ ವಸೂಲಿ ಮಾಡಿರುವ ಹಣ ಎಷ್ಟು; (ಸಹ ಸದಸ್ಯರನ್ನೊಳಗೊಂಡ ಪೂರ್ಣ ಮಾಹಿತಿ ಒದಗಿಸುವುದು)

(ಆ) ಪೂರ್ಣ ಹಣವನ್ನು ಪಾವತಿಸಿರುವ ಎಷ್ಟು ಸಹ ಸದಸ್ಯರುಗಳಿಗೆ ನಿವೇಶನ ಹಂಚಿಕೆ ಮಾಡಿ ನೋಂದಣಿ ಮಾಡಿಕೊಡಲಾಗಿದೆ; ಎಷ್ಟು ಜನರಿಗೆ ನಿವೇಶನ ಹಂಚಿಕೆ ಬಾಕಿ ಇದೆ; ನಿವೇಶನ ಹಂಚಿಕೆ ಮಾಡದಿರಲು ಕಾರಣಗಳೇನು;

(ಇ) ಪೂರ್ಣ ಹಣ ಪಾವತಿಸಿರುವ ಸಹ ಸದಸ್ಯರುಗಳಿಗೆ ನಿವೇಶನವನ್ನು ಹಂಚಿಕೆ ಮಾಡದೆ ಹಾಗೂ ನೋಂದಣಿ ಮಾಡಿಕೊಡದೇ ಇರುವುದರಿಂದ ಸದರಿ ಸಂಘದ ವಿರುದ್ಧ ಸರ್ಕಾರ ಕೈಗೊಂಡಿರುವ ಕ್ರಮಗಳೇನು; ಈ ಬಗ್ಗೆ ಸರ್ಕಾರದ ನಿಲುವೇನು;

(ಈ) ಪೂರ್ಣ ಹಣವನ್ನು ಪಾವತಿಸಿರುವ ಸಹ ಸದಸ್ಯರುಗಳಿಗೆ (Associated Member) ನಿವೇಶನ ಹಂಚಿಕೆ ಮಾಡಿ ಯಾವಾಗ ನೋಂದಣಿ ಮಾಡಿಕೊಡಲಾಗುವುದು?

## ಚೈನ್ ಲಿಂಕ್ ರೀತಿಯಲ್ಲಿ ಹಣವನ್ನು ಸಂಗ್ರಹಿಸುತ್ತಿರುವ ಖಾಸಗಿ ಹಣಕಾಸು ಕಂಪನಿಗಳಿಂದ ಸಾರ್ವಜನಿಕರಿಗೆ ಮೋಸ ವಂಚನೆಗಳಾಗುತ್ತಿರುವ ಕುರಿತು

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) :–**

೫೬೬ (೭೫೩) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಗ್ರಾಹಕರ ಪ್ರತಿನಿಧಿಗಳಾಗಿ, ಚೈನ್ ಲಿಂಕ್ ರೀತಿಯಲ್ಲಿ ಜನರಿಂದ ಹಣವನ್ನು ಕಟ್ಟಿಸಿಕೊಳ್ಳುತ್ತಿರುವ ಖಾಸಗಿ ಹಣಕಾಸು ಕಂಪನಿಗಳು ರಾಜ್ಯದಲ್ಲಿ ಅಂದಾಜು ಎಷ್ಟು ಕಂಪನಿಗಳು ವಹಿವಾಟು ನಡೆಸುತ್ತಿವೆ; (ವಿವರ ನೀಡುವುದು)

(ಆ) ಇವುಗಳಲ್ಲಿ ಈ ರಾಜ್ಯದ ಹೊರ ರಾಜ್ಯಗಳ ಮತ್ತು ವಿದೇಶಿ ಮೂಲದ ಹಣಕಾಸು ಸಂಸ್ಥೆಗಳು ಎಷ್ಟು; (ವಿವರ ನೀಡುವುದು)

(ಇ) ಈ ರೀತಿಯ ಹಣಕಾಸು ಸಂಸ್ಥೆಗಳಿಂದ ಸಾರ್ವಜನಿಕರು ಮೋಸ ಹೋಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; (ವಿವರ ನೀಡುವುದು)

(ಈ) ಈ ಸಂಬಂಧ ಯಾವ ರೀತಿಯ ಕಠಿಣ ಕ್ರಮ ತೆಗೆದುಕೊಳ್ಳಲಾಗಿದೆ; ಜನಜಾಗೃತಿ ಮಾಡಲಾಗಿದೆ? (ವಿವರ ನೀಡುವುದು)

## ಸಹಕಾರ ಸಂಘಗಳ ಚುನಾವಣೆ ಕುರಿತು

**ಶ್ರೀ ರಮೇಶ ಬಾಬು (ಶಿಕ್ಷಕರ ಕ್ಷೇತ್ರ) :–**

೫೬೭ (೪೮೭) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ರಾಜ್ಯದಲ್ಲಿ ಒಟ್ಟು ಎಷ್ಟು ಸಹಕಾರ ಸಂಘಗಳು ಇರುತ್ತವೆ; ಕಳೆದ ಐದು ವರ್ಷಗಳಲ್ಲಿ ಎಷ್ಟು ಸಹಕಾರ ಸಂಘಗಳ ಆಡಳಿತ ಮಂಡಳಿಗಳಿಗೆ ಚುನಾವಣೆ ನಡೆಸಲಾಗಿದೆ; ಚುನಾವಣೆಗೆ ಬಾಕಿಯಿರುವ ಸಹಕಾರ ಸಂಘಗಳು ಎಷ್ಟು; ಇವುಗಳ ಮೇಲೆ ಏನು ಕ್ರಮ ಕೈಗೊಳ್ಳಲಾಗಿದೆ;

(ಆ) ಸಹಕಾರ ಸಂಘಗಳ ಆಡಳಿತ ಮಂಡಳಿಗಳಿಗೆ ಹಿಂದುಳಿದ ವರ್ಗ ಮತ್ತು ಮಹಿಳಾ ಸ್ಥಾನಗಳನ್ನು ತುಂಬಲು ಅವಕಾಶ ಇದೆಯೇ; ಇದ್ದಲ್ಲಿ, ಇಲ್ಲಿಯವರೆಗೆ ಎಷ್ಟು ಆಡಳಿತ ಮಂಡಳಿಗಳು ಸದರಿ ಸ್ಥಾನಗಳನ್ನು ಖಾಲಿ ಇಟ್ಟಿರುತ್ತವೆ; (ಸಂಪೂರ್ಣ ವಿವರ

ನೀಡತಕ್ಕದ್ದು) ಆಡಳಿತ ಮಂಡಳಿಗಳಿಗೆ ಆಯ್ಕೆಯಾಗದೇ ಖಾಲಿ ಇರುವ ಹಿಂದುಳಿದ ವರ್ಗ ಮತ್ತು ಮಹಿಳಾ ಸ್ಥಾನಗಳನ್ನು ತುಂಬಲು ಏನು ಕ್ರಮ ಕೈಗೊಳ್ಳಲಾಗಿದೆ;

(ಇ) ಸಹಕಾರ ಸಂಘಗಳಲ್ಲಿ ತೆರವಾದ ಪದಾಧಿಕಾರಿಗಳನ್ನು ಎಷ್ಟು ದಿನಗಳ ಒಳಗೆ ಆಯ್ಕೆ ಮಾಡಲು ಕಾನೂನಿನಲ್ಲಿ ಅವಕಾಶ ಕಲ್ಪಿಸಲಾಗಿದೆ; ತೆರವಾದ ಪದಾಧಿಕಾರಿಗಳ ಆಯ್ಕೆಗೆ ಚುನಾವಣಾಧಿಕಾರಿಗಳ ನೇಮಕದ ಅವಶ್ಯಕತೆ ಇರುತ್ತದೆಯೇ; ಪದಾಧಿಕಾರಿಗಳನ್ನು ಆಯ್ಕೆ ಮಾಡಲು ಸಹಕಾರ ಸಂಘದ ಮುಖ್ಯ ಕಾರ್ಯ ನಿರ್ವಹಣಾಧಿಕಾರಿಗೆ ಅಧಿಕಾರ ನೀಡಲು ಸರ್ಕಾರ ಉದ್ದೇಶವನ್ನು ಹೊಂದಿರುತ್ತದೆಯೇ;

(ಈ) ರಾಜ್ಯ ಸಹಕಾರಿ ಚುನಾವಣಾ ಪ್ರಾಧಿಕಾರದಲ್ಲಿ ಎಷ್ಟು ಸಿಬ್ಬಂದಿ ಕಾರ್ಯ ನಿರ್ವಹಿಸುತ್ತಿದ್ದಾರೆ; ಇವರಲ್ಲಿ ಎಷ್ಟು ಮಂದಿ ನಿವೃತ್ತಿಯಾದವರು ಕಾರ್ಯ ನಿರ್ವಹಿಸುತ್ತಿದ್ದಾರೆ; ನಿವೃತ್ತಿಯಾಗಿರುವ ಸಿಬ್ಬಂದಿ ಕಾರ್ಯ ನಿರ್ವಹಿಸಲು ಕಾನೂನಿನಲ್ಲಿ ಅವಕಾಶ ಇರುತ್ತದೆಯೇ; ನಿವೃತ್ತಿಯಾದ ಸಿಬ್ಬಂದಿಯನ್ನು ನೇಮಕ ಮಾಡಿಕೊಂಡ ಅಧಿಕಾರಿಗಳ ಮೇಲೆ ಏನು ಕ್ರಮ ಕೈಗೊಳ್ಳಲಾಗಿದೆ?

## ರಾಜ್ಯ ಹೆದ್ದಾರಿಗಳ ಮಾಹಿತಿ ಕೋರಿ

**ಶ್ರೀ ರಮೇಶ ಬಾಬು (ಶಿಕ್ಷಕರ ಕ್ಷೇತ್ರ) :–**

೫೬೮ (೪೮೮) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕದಲ್ಲಿ ರಾಜ್ಯ ಹೆದ್ದಾರಿ ಅಭಿವೃದ್ಧಿ ಯೋಜನೆಯ ಎಷ್ಟು ಹಂತದ ಕಾಮಗಾರಿಗಳನ್ನು ೦೧-೦೫-೨೦೧೩ ರಿಂದ ಕೈಗೆತ್ತಿಕೊಳ್ಳಲಾಗಿದೆ; ಇವುಗಳಲ್ಲಿ ಪೂರ್ಣಗೊಂಡಿರುವ ಕಾಮಗಾರಿಗಳೆಷ್ಟು; ಬಾಕಿಯಿರುವ ಕಾಮಗಾರಿಗಳೆಷ್ಟು; ಸದರಿ ಕಾಮಗಾರಿಗಳಿಗೆ ಮಂಜೂರಾಗಿರುವ ಹಣವೆಷ್ಟು; ಇಲ್ಲಿಯವರೆಗೆ ಬಿಡುಗಡೆಯಾಗಿರುವ ಹಣವೆಷ್ಟು;

(ಆ) ಲೋಕೋಪಯೋಗಿ ಇಲಾಖೆಯು ೦೧-೦೫-೨೦೧೩ ರಿಂದ ಇಲ್ಲಿಯವರೆಗೆ ಅಭಿವೃದ್ಧಿಪಡಿಸಿರುವ ರಾಜ್ಯ ಹೆದ್ದಾರಿ, ಜಿಲ್ಲಾ ಹೆದ್ದಾರಿ ಹಾಗೂ ಸ್ಥಳೀಯ ರಸ್ತೆಗಳ ಉದ್ದ ಎಷ್ಟು; ಈ ಕಾಮಗಾರಿಗಳಿಗೆ ಮಂಜೂರಾಗಿರುವ ಹಣ ಮತ್ತು ಇಲ್ಲಿಯವರೆಗೆ ಬಿಡುಗಡೆಯಾಗಿರುವ ಹಣವೆಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ರಾಜ್ಯದಲ್ಲಿರುವ ಟೋಲ್ ಸಂಗ್ರಹ ಕೇಂದ್ರಗಳು ಎಷ್ಟು; ಎಷ್ಟು ಟೋಲ್ ಕೇಂದ್ರಗಳಲ್ಲಿ ಪ್ರಯಾಣಿಕರಿಗೆ ಮೂಲಭೂತ ಸೌಕರ್ಯಗಳನ್ನು ಒದಗಿಸಲಾಗಿದೆ; ಮೂಲಭೂತ ಸೌಕರ್ಯ ಇಲ್ಲದ ಎಷ್ಟು ಟೋಲ್ ಕೇಂದ್ರಗಳ ಮೇಲೆ ಕ್ರಮಗಳನ್ನು ಕೈಗೊಳ್ಳಲಾಗಿದೆ;

(ಈ) ಟೋಲ್ ಕೇಂದ್ರಗಳಲ್ಲಿ ಖಾಸಗಿ ಭದ್ರತಾ ಸಿಬ್ಬಂದಿಗಳನ್ನು ನಿಯೋಜನೆ ಮಾಡಿಕೊಳ್ಳಲು ಕಾನೂನಿನಲ್ಲಿ ಅವಕಾಶ ಇದೆಯೇ ; ಟೋಲ್ ಕೇಂದ್ರಗಳ ಖಾಸಗಿ ಭದ್ರತಾ ಸಿಬ್ಬಂದಿ ಸಣ್ಣಪುಟ್ಟ ವಿಷಯಗಳಿಗೆ ಪ್ರಯಾಣಿಕರ ಮೇಲೆ ಹಲ್ಲೆ ನಡೆಸುತ್ತಿರುವುದು ರಾಜ್ಯ ಸರ್ಕಾರ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಅಂತಹವರ ಮೇಲೆ ಕೈಗೊಂಡಿರುವ ಕ್ರಮಗಳೇನು?

## ಮುಜರಾಯಿ ದೇವಾಲಯಗಳ ಮಾಹಿತಿ ಕುರಿತು

**ಶ್ರೀ ರಮೇಶ್ ಬಾಬು (ಶಿಕ್ಷಕರ ಕ್ಷೇತ್ರ):–**

೫೭೯ (೪೮೯) ಮಾನ್ಯ ಜವಳಿ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮುಜರಾಯಿ ಇಲಾಖೆಯಿಂದ ದೇವಾಲಯಗಳ ಅಭಿವೃದ್ಧಿಗೆ ನೀಡಿರುವ ಜಿಲ್ಲಾವಾರು ಅನುದಾನ ಎಷ್ಟು; ಬಿಡುಗಡೆಯಾಗಿರುವ ಅನುದಾನ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಕರ್ನಾಟಕ ರಾಜ್ಯದಲ್ಲಿ ಧಾರ್ಮಿಕ ಮತ್ತು ದತ್ತಿ ಇಲಾಖೆಗೆ ಸೇರಿದ ಯಾವ ಯಾವ ವರ್ಗದ ಒಟ್ಟು ಎಷ್ಟು ದೇವಾಲಯಗಳು ಇರುತ್ತವೆ; (ವಿವರವಾದ ಮಾಹಿತಿಯನ್ನು ನೀಡುವುದು)

(ಇ) ಮುಜರಾಯಿ ಸಚಿವರಿಂದ ದೇವಾಲಯಗಳ ಅಭಿವೃದ್ಧಿಗೆ ಅನುದಾನ ಕೋರಿ ಪ್ರಸಕ್ತ ಸಾಲಿನಲ್ಲಿ ಎಷ್ಟು ವಿಧಾನಸಭಾ ಸದಸ್ಯರು ಮತ್ತು ವಿಧಾನ ಪರಿಷತ್ತಿನ ಸದಸ್ಯರು ಮನವಿ ಪತ್ರಗಳನ್ನು ನೀಡಿರುತ್ತಾರೆ; ಅವುಗಳಲ್ಲಿ ಎಷ್ಟು ದೇವಾಲಯಗಳಿಗೆ ಮುಜರಾಯಿ ಸಚಿವರು ಅನುದಾನವನ್ನು ನೀಡಿರುತ್ತಾರೆ; (ಜಿಲ್ಲಾವಾರು ಮಾಹಿತಿ ನೀಡುವುದು)

(ಈ) ಪ್ರತಿ ವರ್ಷ ಮುಜರಾಯಿ ದೇವಾಲಯಗಳಿಂದ ಮುಜರಾಯಿ ಇಲಾಖೆಗೆ ಬರುತ್ತಿರುವ ಆದಾಯ ಎಷ್ಟು; ಮುಜರಾಯಿ ದೇವಾಲಯಗಳಿಂದ ಬಂದ ಹಣದಲ್ಲಿ ಎಷ್ಟು ಹಣವನ್ನು ದೇವಾಲಯಗಳ ಅಭಿವೃದ್ಧಿಗೆ ವೆಚ್ಚ ಮಾಡಲಾಗುತ್ತಿದೆ;

(ಉ) ಹಾವೇರಿ ಜಿಲ್ಲೆಯಲ್ಲಿ ಇರುವ ಒಟ್ಟು ದೇವಾಲಯಗಳು ಎಷ್ಟು; ಇವುಗಳಲ್ಲಿ ಮುಜರಾಯಿ ದೇವಾಲಯಗಳು ಎಷ್ಟು; ಕಳೆದ ಎರಡು ವರ್ಷಗಳಲ್ಲಿ ಹಾವೇರಿ ಜಿಲ್ಲೆಯ ಎಷ್ಟು ದೇವಾಲಯಗಳಿಗೆ ಎಷ್ಟು ಎಷ್ಟು ಮೊತ್ತವನ್ನು ಮುಜರಾಯಿ ಇಲಾಖೆಯಿಂದ ಅನುದಾನವಾಗಿ ನೀಡಲಾಗಿದೆ?

## ಕೃಷಿ ಉತ್ಪನ್ನ ಮಾರುಕಟ್ಟೆಗಳ ಕುರಿತು

**ಶ್ರೀ ರಮೇಶ್ ಬಾಬು (ಶಿಕ್ಷಕರ ಕ್ಷೇತ್ರ):–**

೫೭೦ (೪೯೦) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ತುಮಕೂರು, ಚಿತ್ರದುರ್ಗ, ದಾವಣಗೆರೆ, ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಗಳಲ್ಲಿ ಎಷ್ಟು ಕೃಷಿ ಉತ್ಪನ್ನ ಮಾರುಕಟ್ಟೆಗಳಿವೆ; ಹೊಸದಾಗಿ ಕೃಷಿ ಮಾರುಕಟ್ಟೆಗಳನ್ನು ತೆರೆಯಲು ಈ ಜಿಲ್ಲೆಗಳಿಂದ ಎಷ್ಟು ಪ್ರಸ್ತಾವನೆಗಳು ಬಂದಿರುತ್ತವೆ; ಈ ಜಿಲ್ಲೆಗಳ ಯಾವ ಯಾವ ಕೃಷಿ ಮಾರುಕಟ್ಟೆಗಳಲ್ಲಿ ಯಾವ ಯಾವ ಕೃಷಿ ಉತ್ಪನ್ನಗಳನ್ನು ಮಾರಾಟ ಮಾಡಲು ಅವಕಾಶ ಕಲ್ಪಿಸಲಾಗಿದೆ;

(ಆ) ತುಮಕೂರು, ಚಿತ್ರದುರ್ಗ, ದಾವಣಗೆರೆ, ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಗಳಲ್ಲಿ ಇರುವ ಕೃಷಿ ಉತ್ಪನ್ನ ಮಾರುಕಟ್ಟೆಗಳ ಚುನಾಯಿತ ಆಡಳಿತ ಮಂಡಳಿಗಳ ಅವಧಿ ಎಷ್ಟು; ಎಷ್ಟು ಸಮಿತಿಗಳಿಗೆ ಚುನಾವಣೆ ಬಾಕಿ ಇರುತ್ತದೆ; ಆಡಳಿತಾವಧಿ ಮುಗಿದಿರುವ ಸಮಿತಿಗಳಿಗೆ ಯಾವಾಗ ಚುನಾವಣೆ ನಡೆಸಲಾಗುವುದು;

(ಇ) ತುಮಕೂರು ಜಿಲ್ಲೆ ಚಿಕ್ಕನಾಯಕನಹಳ್ಳಿ ತಾಲ್ಲೂಕಿನ ಹುಳಿಯಾರು ಎ.ಪಿ.ಎಂ.ಸಿ. ಮಾರುಕಟ್ಟೆಯಲ್ಲಿ ಯಾವ ಯಾವ ಕೃಷಿ ಉತ್ಪನ್ನಗಳ

ಮಾರಾಟಕ್ಕೆ ಅವಕಾಶ ಇರುತ್ತದೆ. ಈ ಸಮಿತಿಯಿಂದ ವಾರ್ಷಿಕ ಲಾಭ ಎಷ್ಟು; ಸಮಿತಿಗೆ ಪೂರ್ಣ ಪ್ರಮಾಣದ ಸಿಬ್ಬಂದಿ ನೇಮಕ ಆಗಿರುತ್ತಾರೆಯೇ; ಖಾಲಿಯಿರುವ ಸಿಬ್ಬಂದಿ ಎಷ್ಟು;

(ಈ) ಚಿಕ್ಕನಾಯಕನಹಳ್ಳಿ ಕೃಷಿ ಉತ್ಪನ್ನ ಮಾರುಕಟ್ಟೆ ಹಳೆಯ ಮಾರುಕಟ್ಟೆಯಾಗಿದ್ದು, ಸದರಿ ಮಾರುಕಟ್ಟೆಯನ್ನು ಹುಳಿಯಾರು ಮಾರುಕಟ್ಟೆ ಸಮಿತಿಯಿಂದ ಬೇರ್ಪಡಿಸುವ ಕಾರ್ಯಕ್ಕೆ ಯಾವಾಗ ಚಾಲನೆ ನೀಡಲಾಗುವುದು?

## ಹಾಲು ಒಕ್ಕೂಟಗಳ ಮಾಹಿತಿ ಕೋರಿ

**ಶ್ರೀ ರಮೇಶ್ ಬಾಬು (ಶಿಕ್ಷಕರ ಕ್ಷೇತ್ರ):–**

೫೭೧ (೪೯೬) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ರಾಜ್ಯದಲ್ಲಿರುವ ಒಟ್ಟು ಹಾಲು ಒಕ್ಕೂಟಗಳ ಸಂಖ್ಯೆ ಎಷ್ಟು; ಈ ಒಕ್ಕೂಟಗಳಲ್ಲಿ ಎಷ್ಟು ಒಕ್ಕೂಟಗಳು ಲಾಭವನ್ನು ಗಳಿಸುತ್ತಿವೆ; ನಷ್ಟದಲ್ಲಿರುವ ಹಾಲು ಒಕ್ಕೂಟಗಳೆಷ್ಟು; (ವಿವರಗಳನ್ನು ನೀಡುವುದು)

(ಆ) ಪ್ರಸ್ತುತ ರಾಜ್ಯದ ರೈತರಿಗೆ ಹಾಲು ಒಕ್ಕೂಟಗಳು ಪ್ರತಿ ಲೀಟರ್ ಹಾಲಿಗೆ ನೀಡುತ್ತಿರುವ ಹಣ ಎಷ್ಟು; ಹಾಲು ಒಕ್ಕೂಟಗಳು ಗ್ರಾಹಕರಿಗೆ ಮಾರಾಟ ಮಾಡುತ್ತಿರುವ ಪ್ರತಿ ಲೀಟರ್ ಹಾಲಿನ ಬೆಲೆ ಎಷ್ಟು; ಹಾಲು ಒಕ್ಕೂಟಗಳ ಮೂಲಕ ಹಾಲು ಮಾರಾಟ ಮಾಡುವ ಮಾರಾಟಗಾರರಿಗೆ ನೀಡುತ್ತಿರುವ ಪ್ರತಿ ಲೀಟರ್‌ಗೆ ಕಮಿಷನ್ ಎಷ್ಟು; ಪ್ರತಿ ಲೀಟರ್ ಹಾಲಿಗೆ ತಗಲುವ ಸಾಗಾಣಿಕೆ ವೆಚ್ಚ ಎಷ್ಟು;

(ಇ) ರಾಜ್ಯದ ಹಾಲು ಒಕ್ಕೂಟಗಳು ಯಾವ ಯಾವ ದರದಲ್ಲಿ ಪಶು ಆಹಾರವನ್ನು ಮಾರಾಟ ಮಾಡುತ್ತಿವೆ; ಯಾವ ಯಾವ ಒಕ್ಕೂಟಗಳು ಪಶು ಆಹಾರದ ಗೋದಾಮುಗಳನ್ನು ಹೊಂದಿರುತ್ತವೆ; ಶೇಖರಣೆ ಮಾಡಿರುವ ಪಶು ಆಹಾರದ ಪ್ರಮಾಣವೆಷ್ಟು; ಯಾವ ಯಾವ ಒಕ್ಕೂಟಕ್ಕೆ ಪಶು ಆಹಾರ ಮಾರಾಟದಲ್ಲಿ ನಷ್ಟ ಉಂಟಾಗಿರುತ್ತದೆ; ಪಶು ಆಹಾರದ ಮಾರಾಟದಿಂದ ಯಾವ ಯಾವ ಒಕ್ಕೂಟಕ್ಕೆ ಲಾಭ ಬಂದಿರುತ್ತದೆ;

(ಈ) ರಾಜ್ಯದ ಹಾಲು ಒಕ್ಕೂಟಗಳಿಂದ ಕಳೆದ ನಾಲ್ಕು ವರ್ಷಗಳಲ್ಲಿ ಎಷ್ಟು ಹಾಲು ಮತ್ತು ಹಾಲು ಉತ್ಪನ್ನಗಳು ಹೊರ ರಾಜ್ಯಕ್ಕೆ ಮಾರಾಟವಾಗುತ್ತಿದೆ; ಅದೇ ರೀತಿ ಎಷ್ಟು ಹಾಲು ಉತ್ಪನ್ನಗಳು ರಫ್ತು ಮಾಡಲಾಗುತ್ತಿದೆ; ಪ್ರತಿ ವರ್ಷ ರಾಜ್ಯದ ಹೊರ ಭಾಗದಲ್ಲಿ ಮಾರಾಟವಾಗುತ್ತಿರುವ ಹಾಲು ಮತ್ತು ಹಾಲು ಉತ್ಪನ್ನಗಳಿಂದ ರಾಜ್ಯದ ಹಾಲು ಒಕ್ಕೂಟಗಳಿಗೆ ಬರುತ್ತಿರುವ ಲಾಭ ಎಷ್ಟು? (ವಿವರವಾದ ಮಾಹಿತಿ ನೀಡುವುದು)

## ಜನತಾ ಬಜಾರುಗಳನ್ನು ಉತ್ತಮಪಡಿಸುವ ಬಗ್ಗೆ

**ಶ್ರೀ ಸುನೀಲ್ ಸುಬ್ರಮಣಿ ಎಂ.ಪಿ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೫೭೨ (೪೯) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಎಷ್ಟು ಜನತಾ ಬಜಾರುಗಳು ಕರ್ತವ್ಯ ನಿರ್ವಹಿಸುತ್ತಿವೆ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಸದರಿ ಜನತಾ ಬಜಾರುಗಳಿಗೆ ಯಾವ ರೀತಿಯ ಸೌಲಭ್ಯಗಳನ್ನು ಸರ್ಕಾರದಿಂದ ನೀಡಲಾಗುತ್ತಿದೆ;

(ಇ) ಹಲವು ಜಿಲ್ಲೆಗಳಲ್ಲಿ ಜನತಾ ಬಜಾರುಗಳು ಮುಚ್ಚುವಂತಹ ಸ್ಥಿತಿ ಬಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ರಾಜ್ಯದಲ್ಲಿ ಸಹಕಾರಿ ಕ್ಷೇತ್ರದಲ್ಲಿ ಜನತಾ ಬಜಾರನ್ನು ಉತ್ತಮವಾಗಿ ನಡೆಸಲು ಸರ್ಕಾರದ ಕ್ರಮಗಳೇನು; ಕಳೆದ ಮೂರು ವರ್ಷಗಳಿಂದ ಇವುಗಳಿಗೆ ನೀಡಲಾದ ಸೌಲಭ್ಯಗಳಾವುವು;

(ಉ) ಸಹಕಾರಿ ಕ್ಷೇತ್ರದಲ್ಲಿ ಜನತಾ ಬಜಾರುಗಳನ್ನು ಉಳಿಸಿಕೊಳ್ಳಲು ಸರ್ಕಾರದ ಮುಂದಿರುವ ಕಾರ್ಯಕ್ರಮಗಳೇನು?

## ಮುಜರಾಯಿ ದೇವಸ್ಥಾನಗಳ ಅರ್ಚಕರಿಗೆ ವೇತನ ನೀಡುವಲ್ಲಿನ ತೊಡಕುಗಳ ಬಗ್ಗೆ

**ಶ್ರೀ ಸುನೀಲ್ ಸುಬ್ರಮಣಿ ಎಂ.ಪಿ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೫೭೩ (೪೯೮) ಮಾನ್ಯ ಜವಳಿ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಮುಜರಾಯಿ ಇಲಾಖೆಯಡಿ ಬರುವ ದೇವಾಲಯಗಳು ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು) ಈ ಮುಜರಾಯಿ ದೇವಸ್ಥಾನಗಳಿಗೆ ಬರುವ ಹುಂಡಿ ಹಣವನ್ನು ಯಾವ ರೀತಿಯಲ್ಲಿ ಉಪಯೋಗಿಸಲಾಗುತ್ತಿದೆ; (ವಿವರ ನೀಡುವುದು)

(ಆ) ಸದರಿ ಮುಜರಾಯಿ ದೇವಸ್ಥಾನಗಳಲ್ಲಿ ಅರ್ಚಕರಿಗೆ ಹಾಗೂ ಸಿಬ್ಬಂದಿ ವರ್ಗದವರಿಗೆ ಮಾಸಿಕವಾಗಿ ನೀಡುತ್ತಿರುವ ಸಂಭಾವನೆ/ವೇತನ ಮೊತ್ತ ಎಷ್ಟು;

(ಇ) ಸದರಿ ಸಂಭಾವನೆ/ವೇತನಗಳನ್ನು ಪ್ರತಿ ಮಾಹೆ ನೀಡಲಾಗುತ್ತಿದೆಯೇ ; ಅಥವಾ ಯಾವ ರೀತಿಯಲ್ಲಿ ಪಾವತಿ ಮಾಡಲಾಗುತ್ತಿದೆ ; (ಮಾಹಿತಿ ನೀಡುವುದು)

(ಈ) ಕೊಡಗು ಜಿಲ್ಲೆಯಲ್ಲಿರುವ ಮುಜರಾಯಿ ದೇವಸ್ಥಾನದ ಅರ್ಚಕರಿಗೆ ಹಾಗೂ ಸಿಬ್ಬಂದಿ ವರ್ಗದವರಿಗೆ ಸಂಭಾವನೆ/ವೇತನ ಅಲ್ಲದೇ ಬೇರೆ ಯಾವ ಯಾವ ಸೌಲಭ್ಯಗಳನ್ನು ಇದುವರೆಗೂ ನೀಡಲಾಗಿದೆ? (ಮಾಹಿತಿ ನೀಡುವುದು)

## ಸರ್ಕಾರದಿಂದ ರೇಷ್ಮೆ ಬೆಳೆಗಾರರಿಗೆ ನೀಡುವ ಸೌಲಭ್ಯಗಳ ಕುರಿತು

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು):–**

೫೭೪ (೭೫೯) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರದಿಂದ ಬೆಳೆಯುವ ರೈತರಿಗೆ ಯಾವ ಯಾವ ಸೌಲಭ್ಯಗಳಿವೆ; ಮತ್ತು ಸಣ್ಣ, ಅತಿ ಸಣ್ಣ, ಮಧ್ಯಮ, ದೊಡ್ಡ ಹಿಡುವಳಿ ರೈತರಿಗೆ ನೀಡುವ ಅನುಕೂಲಗಳು ಯಾವುವು;

(ಆ) ಹಾವೇರಿ ಜಿಲ್ಲೆಗೆ ಇಲಾಖೆಯಿಂದ ೨೦೧೩–೧೪ ರಿಂದ ಇಲ್ಲಿಯವರೆಗೆ ಸರ್ಕಾರದಿಂದ ಎಷ್ಟು ಅನುದಾನ ಬಂದಿದೆ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ೨೦೧೩–೧೪ ರಿಂದ ಇಲ್ಲಿಯವರೆಗೆ ಹಾವೇರಿ ಜಿಲ್ಲೆ, ಶಿಗ್ಗಾಂವ್, ಸವಣೂರು ಮತ ಕ್ಷೇತ್ರಕ್ಕೆ ಎಷ್ಟು ಅನುದಾನ ಬಂದಿದೆ; ಯಾವ ಯಾವ ರೈತರಿಗೆ, ಯಾವ ಯಾವ ರೀತಿಯಲ್ಲಿ ಅನುಕೂಲವಾಗಿದೆ; ಹೆಸರು, ಗ್ರಾಮ, ಸರ್ಕಾರದ ಯೋಜನೆವಾರು, ವರ್ಷಾವಾರು ಸಂಪೂರ್ಣ ವಿವರ ನೀಡುವುದು?

## ಕೃಷಿ ಮಾರುಕಟ್ಟೆಯ ಯೋಜನೆಗಳ ಬಗ್ಗೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು):–**

೫೭೫ (೮೦೨) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೃಷಿ ಮಾರುಕಟ್ಟೆ ಇಲಾಖೆಯಲ್ಲಿ ಒಟ್ಟು ಎಷ್ಟು ಯೋಜನೆಗಳಿವೆ; ಅವು ಯಾವುವು; (ಸಂಪೂರ್ಣ ವಿವರ ನೀಡುವುದು)

(ಆ) ೨೦೧೩-೧೪ ರಿಂದ ಇಲ್ಲಿಯವರೆಗೆ ಸರ್ಕಾರದಿಂದ ಯಾವ ಯಾವ ಯೋಜನೆಗಳಿಗೆ ಮತ್ತು ಇನ್ನಿತರ ಕಾಮಗಾರಿಗಳಿಗೆ ಎಷ್ಟು ಅನುದಾನ ಬಂದಿದೆ; ಇದರಲ್ಲಿ ಖರ್ಚಾದ ಅನುದಾನವೆಷ್ಟು; (ತಾಲ್ಲೂಕುವಾರು, ಯೋಜನಾವಾರು ಕಾಮಗಾರಿಗಳ ವಿವರಗಳೊಂದಿಗೆ ಸಂಪೂರ್ಣ ಮಾಹಿತಿ ಒದಗಿಸುವುದು)

(ಇ) ಈ ಯೋಜನೆಗಳ ಫಲಾನುಭವಿಗಳ ಸಂಖ್ಯೆ ಎಷ್ಟು; ಆ ಯೋಜನೆಗಳ ಮೊತ್ತವೆಷ್ಟು ? (ತಾಲ್ಲೂಕುವಾರು ವಿವರ ನೀಡುವುದು)

## ಲೋಕೋಪಯೋಗಿ ಇಲಾಖೆಯಿಂದ ೨೦೧೩-೧೪ ರಿಂದ ಹಾವೇರಿ ಜಿಲ್ಲೆಗೆ ಬಂದ ಅನುದಾನದ ಬಗ್ಗೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು):–**

೫೭೬ (೭೫೮) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೩-೧೪ನೇ ಸಾಲಿನಿಂದ ಲೋಕೋಪಯೋಗಿ ಇಲಾಖೆಯಿಂದ ಯಾವ ಯಾವ ಯೋಜನೆಗಳಡಿಯಲ್ಲಿ ಇಲ್ಲಿಯವರೆಗೆ ಹಾವೇರಿ ಜಿಲ್ಲೆಗೆ ಯಾವ ಯಾವ ಕಾಮಗಾರಿಗಳಿಗೆ ಎಷ್ಟೆಷ್ಟು ಅನುದಾನ ಬಿಡುಗಡೆಯಾಗಿರುತ್ತದೆ; (ಕಾಮಗಾರಿಗಳ ಯೋಜನೆಗಳವಾರು, ವರ್ಷವಾರು, ತಾಲ್ಲೂಕುವಾರು ವಿವರ ನೀಡುವುದು)

(ಆ) ಇವುಗಳಲ್ಲಿ ಎಷ್ಟು ಕಾಮಗಾರಿಗಳು ಪೂರ್ಣಗೊಂಡಿವೆ; ಚಾಲ್ತಿಯಲ್ಲಿರುವ ಕಾಮಗಾರಿಗಳೆಷ್ಟು; ಬಾಕಿಯಿರುವ

ಕಾಮಗಾರಿಗಳೆಷ್ಟು; ಇದಕ್ಕೆ ಖರ್ಚಾಗಿರುವ ಅನುದಾನವೆಷ್ಟು; ಬಾಕಿಯಿರುವ ಅನುದಾನವೆಷ್ಟು; (ಸಂಪೂರ್ಣ ಮಾಹಿತಿ ಒದಗಿಸುವುದು)

(ಇ) ಶಿಗ್ಗಾಂವ್ ತಾಲ್ಲೂಕಿನಲ್ಲಿ ಕಾಮಗಾರಿಗಳ ಹೆಸರು, ಊರುಗಳವಾರು, ಯೋಜನಾವಾರು, ಅನುದಾನವಾರು ಪ್ರತ್ಯೇಕ ಮಾಹಿತಿ ಒದಗಿಸುವುದು?

## ಸಹಕಾರ ಇಲಾಖೆಯಲ್ಲಿರುವ ಯೋಜನೆಗಳ ಬಗ್ಗೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು):–**

೫೭೭ (೭೬೦) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಹಕಾರ ಇಲಾಖೆಯಲ್ಲಿರುವ ಯೋಜನೆಗಳಾವುವು; ಈ ಯೋಜನೆಗಳಿಗೆ ಸರ್ಕಾರದಿಂದ ೨೦೧೩–೧೪ರಿಂದ ಇಲ್ಲಿಯವರೆಗೆ ಹಾವೇರಿ ಜಿಲ್ಲೆಗೆ ಯಾವ ಯಾವ ಯೋಜನೆಗಳಿಗೆ ಎಷ್ಟೆಷ್ಟು ಅನುದಾನ ನೀಡಲಾಗಿದೆ; (ಯೋಜನಾವಾರು, ವರ್ಷವಾರು, ತಾಲ್ಲೂಕುವಾರು ಮಾಹಿತಿ ಒದಗಿಸುವುದು)

(ಆ) ಹಾವೇರಿ ಜಿಲ್ಲೆಯಲ್ಲಿ ಸದರಿ ಯೋಜನೆಗಳಡಿಯಲ್ಲಿ ಪೂರ್ಣಗೊಂಡ ಕಾಮಗಾರಿಗಳಾವುವು; (ಯೋಜನಾವಾರು, ಕಾಮಗಾರಿವಾರು ವಿವರ ನೀಡುವುದು) ಈ ಯೋಜನೆಗಳಡಿಯಲ್ಲಿ ಸದುಪಯೋಗ ಪಡೆದುಕೊಂಡ ಫಲಾನುಭವಿಗಳ ಸಂಖ್ಯೆ ಎಷ್ಟು; (ಯೋಜನಾವಾರು ವಿವರ ನೀಡುವುದು)

(ಇ) ಹಾವೇರಿ ಜಿಲ್ಲೆಯಲ್ಲಿರುವ ಸಹಕಾರಿ ಬ್ಯಾಂಕ್‌ಗಳೆಷ್ಟು; ೨೦೧೩–೨೦೧೪ ರಿಂದ ಇಲ್ಲಿಯವರೆಗೆ ಸಣ್ಣ, ಅತಿ ಸಣ್ಣ, ಮಧ್ಯಮ ವರ್ಗದ ಹಾಗೂ ದೊಡ್ಡ ರೈತರುಗಳು ಪಡೆದ ಸಾಲಗಳೆಷ್ಟು;

(ಈ) ಶಿಗ್ಗಾಂವ್ ತಾಲ್ಲೂಕಿನಲ್ಲಿ ಎಷ್ಟು ಸಣ್ಣ, ಅತಿ ಸಣ್ಣ, ಮಧ್ಯಮ ವರ್ಗದ ದೊಡ್ಡ ರೈತರುಗಳು ಯಾವ ಯಾವ ಸಹಕಾರಿ ಬ್ಯಾಂಕಿನಿಂದ ಸಾಲ ಪಡೆದಿರುತ್ತಾರೆ; ಸಾಲ ಪಡೆದ ರೈತರುಗಳೆಷ್ಟು; ಮತ್ತು ಎಷ್ಟೆಷ್ಟು ಸಾಲ ಪಡೆದಿರುತ್ತಾರೆ; ಇವುಗಳಲ್ಲಿ ಯಾವ ಯಾವ ರೈತರ ಸಾಲ ಮನ್ನಾ ಆಗಿರುತ್ತದೆ?

## ಅನುದಾನದ ಬಳಕೆ ಕುರಿತು

**ಶ್ರೀ ವಿ. ಸೋಮಣ್ಣ (ವಿಧಾನಸಭೆಯಿಂದ ಚುನಾಯಿತರಾದವರು):–**

೫೭೮ (೪೭೯) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೪ ಮೇ ನಂತರ ಕೇಂದ್ರ ಸರ್ಕಾರದಿಂದ ಒಟ್ಟು ಎಷ್ಟು ಅನುದಾನ ರಾಜ್ಯಕ್ಕೆ ಬಿಡುಗಡೆ ಮಾಡಲಾಗಿದೆ; ಬಿಡುಗಡೆಯಾದ ಅನುದಾನದಲ್ಲಿ ಬಳಕೆಯಾದ ಅನುದಾನವೆಷ್ಟು;

(ಆ) ಮೇ –೨೦೧೪ ರಿಂದ ಇಲ್ಲಿಯವರೆಗೆ ಎಷ್ಟು ಜನ ರೈತರು ಆತ್ಮಹತ್ಯೆ ಮಾಡಿಕೊಂಡಿದ್ದಾರೆ, ಆತ್ಮಹತ್ಯೆಗೊಳಗಾದ ರೈತರಿಗೆ ಪರಿಹಾರ ನೀಡಲಾಗಿದೆಯೇ; ನೀಡಿದ್ದಲ್ಲಿ, ಜಿಲ್ಲಾವಾರು ಮಾಹಿತಿ ನೀಡುವುದು; ಎಷ್ಟು ಜನರಿಗೆ ನೀಡಲಾಗಿದೆ, ನೀಡದೆ ಬಾಕಿಯಿರುವ ಸಂಖ್ಯೆ ಎಷ್ಟು, ಕಾರಣ ನೀಡಿ;

(ಇ) ಕೇಂದ್ರ ಸರ್ಕಾರಿಂದ ಹನಿ ನೀರಾವರಿಗಾಗಿ ನೀಡಿದ ಅನುದಾನವೆಷ್ಟು; (ಜಿಲ್ಲಾವಾರು ಫಲಾನುಭವಿಗಳ ಮಾಹಿತಿ ನೀಡುವುದು)

(ಈ) ರೈತರ ಆತ್ಮಹತ್ಯೆ ತಡೆಯಲು ಸರ್ಕಾರ ಕೈಗೊಂಡ ಕ್ರಮಗಳೇನು?

## ಗದಗ ಜಿಲ್ಲೆಯಲ್ಲಿ ಪವನಶಕ್ತಿ ಹಾಗೂ ಸೌರಶಕ್ತಿ ವಿದ್ಯುತ್ ಉತ್ಪಾದನೆ ಮಾಡುವ ಕುರಿತು

**ಶ್ರೀ ಎಸ್.ವ್ಹಿ. ಸಂಕನೂರ (ಪದವೀಧರರ ಕ್ಷೇತ್ರ) :–**

೫೭೯ (೭೬೧) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಪವನಶಕ್ತಿ ಹಾಗೂ ಸೌರಶಕ್ತಿ ಬಳಸಿಕೊಂಡು ಅತಿ ಹೆಚ್ಚು ವಿದ್ಯುತ್ ಉತ್ಪಾದನೆ ಮಾಡುವ ಜಿಲ್ಲೆಗಳು ಯಾವುವು; (ವಿವರ ನೀಡುವುದು)

(ಆ) ಗದಗ ಜಿಲ್ಲೆಯಲ್ಲಿ ಪವನಶಕ್ತಿ ಮತ್ತು ಸೌರಶಕ್ತಿಯಿಂದ ಉತ್ಪಾದನೆಯಾಗುವ ವಿದ್ಯುತ್ ಎಷ್ಟು; (ವಿವರ ನೀಡುವುದು)

(ಇ) ಪವನಶಕ್ತಿ ಮತ್ತು ಸೌರಶಕ್ತಿಯನ್ನು ಬಳಸಿ ಗದಗ ಜಿಲ್ಲೆಯ ಯಾವ ಯಾವ ಸ್ಥಳಗಳಲ್ಲಿ ವಿದ್ಯುತ್ ಉತ್ಪಾದನೆ ಮಾಡಲಾಗುತ್ತಿದೆ; (ವಿವರವಾದ ಮಾಹಿತಿ ನೀಡುವುದು)

(ಈ) ಈ ರೀತಿ ವಿದ್ಯುತ್ ಉತ್ಪಾದನೆ ಮಾಡಲು ಎಷ್ಟು ಎಕರೆ ಭೂಮಿಯನ್ನು ಬಳಸಿಕೊಳ್ಳಲಾಗಿದೆ; (ವಿವರ ನೀಡುವುದು)

(ಉ) ಪವನಶಕ್ತಿ ಮತ್ತು ಸೌರಶಕ್ತಿಯನ್ನು ಉತ್ಪಾದನೆ ಮಾಡಲು ಯಾವ ಯಾವ ಕಂಪನಿಗಳಿಗೆ ಜವಾಬ್ದಾರಿ ನೀಡಲಾಗಿದೆ; ಮತ್ತು ಅವರೊಂದಿಗೆ ಯಾವ ರೀತಿಯ ಒಪ್ಪಂದ ಮಾಡಿಕೊಳ್ಳಲಾಗಿದೆ? (ವಿವರ ನೀಡುವುದು)

## ರಾಜ್ಯದಲ್ಲಿನ ಹಾಲಿನ ಒಕ್ಕೂಟ ಮತ್ತು ಡೈರಿಗಳ ಬಗ್ಗೆ

**ಶ್ರೀ ಟಿ.ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೮೦ (೭೬೩) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಒಟ್ಟು ಹಾಲಿನ ಒಕ್ಕೂಟಗಳೆಷ್ಟು; ವಿವರವಾದ ಜಿಲ್ಲಾವಾರು ಮಾಹಿತಿ ನೀಡುವುದು;

(ಆ) ತುಮಕೂರು ಜಿಲ್ಲಾ ಹಾಲು ಒಕ್ಕೂಟದ ವ್ಯಾಪ್ತಿಗೆ ಒಳಪಡುವ ತಾಲ್ಲೂಕುಗಳು ಎಷ್ಟು; ಇವುಗಳಲ್ಲಿ ಎಷ್ಟು ಡೈರಿಗಳನ್ನು ಸ್ಥಾಪಿಸಲಾಗಿದೆ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಗುಬ್ಬಿ ತಾಲ್ಲೂಕಿನ, ಕಸಬಾ ಹೋಬಳಿಯಲ್ಲಿ ಬರುವ ಡೈರಿ ಹಾಗೂ ಉಪ ಕೇಂದ್ರ ಡೈರಿಗಳು ಹಾಗೂ ಇತರೆಗಳೆಷ್ಟು; ವಿವರವಾಗಿ ಗ್ರಾಮ ಪಂಚಾಯಿತಿವಾರು ಮಾಹಿತಿ ನೀಡುವುದು;

(ಈ) ಸದರಿ ಹೋಬಳಿಯಲ್ಲಿ ಬರುವ ಡೈರಿ/ಉಪಕೇಂದ್ರ ಡೈರಿಗಳ ದಿನ ಒಂದಕ್ಕೆ ರೈತರಿಂದ ಖರೀದಿಸಿರುವ ಹಾಲಿನ ಪ್ರಮಾಣ ಎಷ್ಟು; (ಡೈರಿವಾರು ಮಾಹಿತಿ ನೀಡುವುದು)

(ಉ) ಒಂದು ಡೈರಿಯಲ್ಲಿ ಸೃಜಿಸಿರುವ ಹುದ್ದೆಗಳು ಎಷ್ಟು; ಅವು ಯಾವುವು; ಇವುಗಳನ್ನು ಯಾವ ರೀತಿ ಭರ್ತಿ ಮಾಡಲಾಗುವುದು; ಈ ಹುದ್ದೆಗಳಿಗೆ ನಿಗಧಿಪಡಿಸಿದ ವೇತನವೆಷ್ಟು; (ವಿವರವಾದ ಮಾಹಿತಿ ನೀಡುವುದು)

(ಊ) ಸದರಿ ಗ್ರಾಮದಲ್ಲಿರುವ ಡೈರಿಗಳಿಗೆ ಒಕ್ಕೂಟ/ರಾಜ್ಯ ಸರ್ಕಾರ/ ಕೇಂದ್ರ ಸರ್ಕಾರದ ವಿವಿಧ ಯೋಜನೆಗಳಿಂದ ದೊರೆಯಬಹುದಾದ ಸಹಾಯಧನ/ಇತರೆ ಎಷ್ಟು? (ವಿವರವಾದ ಮಾಹಿತಿ ನೀಡುವುದು)

## ರೈತರ ಬೆಳೆಗಳಿಗೆ ಬೆಂಬಲ ಬೆಲೆ ನಿಗಧಿಪಡಿಸುವ ಬಗ್ಗೆ

**ಶ್ರೀ ಟಿ.ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೮೧ (೭೬೪) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ರೈತರು ಬೆಳೆಯುವ ಬೆಳೆಗಳಲ್ಲಿ ಯಾವ ಯಾವ ಬೆಳೆಗಳಿಗೆ ಬೆಂಬಲ ಬೆಲೆ ನಿಗಧಿ ಪಡಿಸಲಾಗಿದೆ; (ವಿವರವಾದ ಮಾಹಿತಿ ನೀಡುವುದು)

(ಆ) ಬೆಂಬಲ ಬೆಲೆ ನಿಗಧಿಯಾದ ಬೆಳೆಗಳ ಖರೀದಿಗೆ ಖರೀದಿ ಕೇಂದ್ರಗಳನ್ನು ಯಾವ ಯಾವ ಹಂತಗಳಲ್ಲಿ ತೆರೆಯಲಾಗಿದೆ; ಖರೀದಿ ಕೇಂದ್ರಗಳನ್ನು ಪ್ರಾರಂಭಿಸಲಾಗದ ಪಕ್ಷದಲ್ಲಿ ವಿಳಂಬವಾಗಲು ಕಾರಣಗಳೇನು;

(ಇ) ಖರೀದಿ ಪ್ರಕ್ರಿಯೆಗೆ ಸರ್ಕಾರದಲ್ಲಿ ಸಾಕಷ್ಟು ಅನುದಾನ ಲಭ್ಯತೆ ಇದೆಯೇ;

(ಈ) ಯಾವ ಕಾಲಮಿತಿಯೊಳಗೆ ರೈತರಿಗೆ ಹಣ ಪಾವತಿ ಮಾಡಲು ಸರ್ಕಾರ ತೀರ್ಮಾನಿಸಿದೆ?

## ರಾಜ್ಯದಲ್ಲಿರುವ ಗೃಹ ನಿರ್ಮಾಣ ಸಹಕಾರ ಸಂಘಗಳ ಬಗ್ಗೆ

**ಶ್ರೀ ಟಿ.ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೮೨ (೭೬೫) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗೃಹ ನಿರ್ಮಾಣ ಸಹಕಾರ ಸಂಘಗಳೆಂದರೇನು; ಇವು ಯಾವ ನಿಯಮದಡಿ ಬರುತ್ತದೆ; ಇವುಗಳನ್ನು ಯಾರು ಸ್ಥಾಪಿಸಬಹುದು; ಇವುಗಳ ಉದ್ದೇಶವೇನು; ಇದರ ಸಂಬಂಧ ಸರ್ಕಾರ ಇಲ್ಲಿಯವರೆಗೂ ಹೊರಡಿಸಿರುವ ಆದೇಶಗಳು ಯಾವುವು;

(ಆ) ಗೃಹ ನಿರ್ಮಾಣ ಸಹಕಾರ ಸಂಘಗಳಿಗೆ ಸರ್ಕಾರದಿಂದ ದೊರೆಯಬಹುದಾದ ಪ್ರಯೋಜನಗಳೇನು; (ವಿವರವಾದ ಮಾಹಿತಿ ನೀಡುವುದು)

(ಇ) ರಾಜ್ಯದಲ್ಲಿ ಇಲ್ಲಿಯವರೆಗೂ ನೋಂದಾಯಿತವಾಗಿರುವ ಗೃಹ ನಿರ್ಮಾಣ ಸಹಕಾರ ಸಂಘಗಳು ಎಷ್ಟು; ಅವು ಯಾವುವು; ವಿವರವಾದ ಜಿಲ್ಲಾವಾರು ಮಾಹಿತಿ ನೀಡುವುದು;

(ಈ) ಇವುಗಳಲ್ಲಿ ಅಕ್ರಮ ನಡೆದಿರುವ ಗೃಹ ನಿರ್ಮಾಣ ಸಹಕಾರ ಸಂಘಗಳ ಸಂಖ್ಯೆ ಎಷ್ಟು? (ವಿವರವಾಗಿ ಜಿಲ್ಲಾವಾರು ಮಾಹಿತಿ ನೀಡುವುದು)

## ರಾಜ್ಯದಲ್ಲಿರುವ ನೋಂದಾಯಿತ ಕ್ಲಬ್‌ಗಳ ಬಗ್ಗೆ

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) :–**

೫೮೩ (೫೦೫) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಎಷ್ಟು ನೋಂದಾಯಿತ ಕ್ಲಬ್‌ಗಳಿವೆ; (ಜಿಲ್ಲಾವಾರು ವಿವರ ನೀಡುವುದು)

(ಆ) ಈ ಕ್ಲಬ್‌ಗಳಿಗೆ ಸರ್ಕಾರ ಜಮೀನನ್ನು ಗುತ್ತಿಗೆ ಅಥವಾ ಬಾಡಿಗೆ ಆಧಾರದಲ್ಲಿ ನೀಡಿದೆಯೇ;

(ಇ) ನೀಡಿದ್ದಲ್ಲಿ, ಜಿಲ್ಲಾವಾರು ಅಂತಹ ಕ್ಲಬ್‌ಗಳ ವಿವರವನ್ನು ನೀಡುವುದು?

## ಮಂಡ್ಯ ಮೈಸುಗರ್ ಸಕ್ಕರೆ ಕಾರ್ಖಾನೆಯ ಬಗ್ಗೆ

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) :–**

೫೮೪ (೭೮೫) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಡ್ಯ ಮೈಸುಗರ್ ಸಕ್ಕರೆ ಕಾರ್ಖಾನೆ ಯಾವಾಗ ಸ್ಥಾಪನೆಯಾಗಿದೆ;

(ಆ) ಏಕೈಕ ಸರ್ಕಾರಿ ಸ್ವಾಮ್ಯದ ಈ ಸಕ್ಕರೆ ಕಾರ್ಖಾನೆಯುನ್ನು ಉಳಿಸಿಕೊಳ್ಳಲು ಸರ್ಕಾರ ಕೈಗೊಂಡಿರುವಂತಹ ಕ್ರಮಗಳೇನು;

(ಇ) ಪ್ರಸ್ತುತ ಸಕ್ಕರೆ ಕಾರ್ಖಾನೆ ಚಾಲನೆಯಲ್ಲಿದೆಯೇ;

(ಈ) ಕಳೆದ ಐದು ವರ್ಷಗಳಿಂದ ಈ ಕಾರ್ಖಾನೆಯ ಅಭಿವೃದ್ಧಿಗೆ ಬಿಡುಗಡೆಯಾದ ಅನುದಾನ ಎಷ್ಟು; ಇದರಲ್ಲಿ ಖರ್ಚಾದ ಹಾಗೂ ಉಳಿದ ಅನುದಾನ ಎಷ್ಟು;

(ಉ) ಒಟ್ಟಾರೆ ಸದರಿ ಸಕ್ಕರೆ ಕಾರ್ಖಾನೆಯನ್ನು ಉಳಿಸಿಕೊಳ್ಳಲು ಸರ್ಕಾರ ಕೈಗೊಂಡಿರುವ ಅಗತ್ಯ ಕ್ರಮಗಳೇನು?

## ರೈತರ ಕೃಷಿ ಚಟುವಟಿಕೆಗೆ ಸಮರ್ಪಕ ವಿದ್ಯುತ್ ಪೂರೈಸುವ ಬಗ್ಗೆ

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) :–**

೫೮೫ (೭೫೭) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ರೈತರ ಕೃಷಿ ಪಂಪ್‌ಸೆಟ್‌ಗಳಿಗೆ ವಿದ್ಯುತ್ ಸಂಪರ್ಕವನ್ನು ಒದಗಿಸಲು ಸೂಕ್ತವಾದಂತಹ ಸಮಯವನ್ನು ಸರ್ಕಾರ ನಿಗದಿ ಪಡಿಸಿದೆಯೇ;

(ಆ) ಪ್ರಸ್ತುತ ಕೃಷಿ ಚಟುವಟಿಕೆಗೆ ಎಷ್ಟು ಸಮಯ ೩ ಫೇಸ್ ವಿದ್ಯುತ್ ನೀಡಲಾಗುತ್ತಿದೆ;

(ಇ) ಇನ್ನೂ ಹೆಚ್ಚಿನ ಅವಧಿ ೩ ಫೇಸ್ ವಿದ್ಯುತ್ ನೀಡಿ ರೈತರಿಗೆ ಅನುಕೂಲ ಮಾಡಿಕೊಳ್ಳಲು ಸರ್ಕಾರ ಆಲೋಚಿಸಿದೆಯೇ;

(ಈ) ರೈತರಿಗೆ ವಿದ್ಯುತ್ ಸಂಪರ್ಕವನ್ನು ಒದಗಿಸುವ ನಿಟ್ಟಿನಲ್ಲಿ ಅಧಿಕಾರಿಗಳಿಂದ ವಿಳಂಬ ಧೋರಣೆ ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡಿರುವ ಸುಧಾರಣಾ ಕ್ರಮಗಳೇನು?

## ಜಾನುವಾರುಗಳು ಮತ್ತು ಪಶು ವೈದ್ಯ ಆಸ್ಪತ್ರೆಗಳ ಬಗ್ಗೆ

**ಶ್ರೀ ವಿ.ಎಸ್. ಉಗ್ರಪ್ಪ (ನಾಮನಿರ್ದೇಶನ ಹೊಂದಿದವರು) :–**

೫೮೬ (೫೦೨) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಒಟ್ಟು ಎಷ್ಟು ಜಾನುವಾರುಗಳಿವೆ; (ಗ್ರಾಮ ಪಂಚಾಯಿತಿವಾರು ಮಾಹಿತಿಯೊಂದಿಗೆ)

(ಆ) ಜಾನುವಾರುಗಳ ಸಂರಕ್ಷಣೆಗಾಗಿ ಒಟ್ಟು ಎಷ್ಟು ಪಶು ವೈದ್ಯ ಆಸ್ಪತ್ರೆ ಮತ್ತು ಔಷಧಾಲಯುಗಳನ್ನು ತೆರೆಯಲಾಗಿದೆ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ಪಶು ವೈದ್ಯ ಆಸ್ಪತ್ರೆ ತೆರೆಯಲು ಸರ್ಕಾರ ವಿಧಿಸುವ ಮಾನದಂಡಗಳೇನು? (ವಿವರ ನೀಡುವುದು)

## ಮುಜರಾಯಿ ದೇವಸ್ಥಾನಗಳು ಮತ್ತು ಮುಜರಾಯಿಯಲ್ಲದ ದೇವಸ್ಥಾನಗಳ ಬಗ್ಗೆ

**ಶ್ರೀ ವಿ.ಎಸ್. ಉಗ್ರಪ್ಪ (ನಾಮನಿರ್ದೇಶನ ಹೊಂದಿದವರು) :–**

೫೮೭ (೫೦೧) ಮಾನ್ಯ ಜವಳಿ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಎಷ್ಟು ಮುಜರಾಯಿ ದೇವಸ್ಥಾನಗಳು ಮತ್ತು ಮುಜುರಾಯಿಯಲ್ಲದ ದೇವಸ್ಥಾನಗಳು ಇವೆ; ಅವು ಯಾವುವು; (ತಾಲ್ಲೂಕುವಾರು ವಿವರ ನೀಡುವುದು)

(ಆ) ಮುಜರಾಯಿ ದೇವಸ್ಥಾನಗಳನ್ನು ವಿಭಾಗವಾರು ವಿಂಗಡಿಸಲಾಗಿದೆಯೇ; ಹಾಗಿದ್ದಲ್ಲಿ, ಆ ವಿಭಾಗಗಳು ಯಾವುವು; ಆ ವಿಭಾಗಗಳ ವ್ಯಾಪ್ತಿಯಲ್ಲಿರುವ ಗ್ರಾಮಗಳು ಮತ್ತು ದೇವಸ್ಥಾನಗಳು ಯಾವುವು? (ದೇವಸ್ಥಾನವಾರು ವಿವರ ನೀಡುವುದು)

## ಕೆ.ಎಸ್.ಆರ್.ಟಿ.ಸಿ. ಗೃಹ ನಿರ್ಮಾಣ ಮಂಡಳಿಯ ಭ್ರಷ್ಟಾಚಾರದ ಬಗ್ಗೆ

**ಶ್ರೀ ವಿ.ಎಸ್. ಉಗ್ರಪ್ಪ (ನಾಮನಿರ್ದೇಶನ ಹೊಂದಿದವರು) :–**

೫೮೮ (೫೦೦) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಗೃಹ ನಿರ್ಮಾಣ ಮಂಡಳಿ, ಬೆಂಗಳೂರು ವತಿಯಿಂದ ನೆಲಮಂಗಲ ತಾಲ್ಲೂಕು ವ್ಯಾಪ್ತಿಗೆ ಬರುವ ಕಣೇಗೌಡನಹಳ್ಳಿ ಮತ್ತು ನಾರಾಯಣರಾವ್ ಪಾಳ್ಯದಲ್ಲಿ ಸಂಸ್ಥೆಯ ಸದಸ್ಯ ನೌಕರರು ಕಳೆದ ೧೦ ವರ್ಷಗಳಿಂದ ನಿವೇಶನ ಪಡೆಯುವ ಸಲುವಾಗಿ ಹಣ ಪಾವತಿಸಿರುವ ಎಷ್ಟು ಸದಸ್ಯರುಗಳಿಗೆ ನಿವೇಶನವನ್ನು ಹಂಚಿಕೆ ಮಾಡಿ, ಸಬ್ ರಿಜಿಸ್ಟ್ರಾರ್ ಕಛೇರಿಯಲ್ಲಿ ಫಲಾನುಭವಿಗಳ ಹೆಸರಿಗೆ ಕ್ರಯ ಮಾಡಿ ಕೊಟ್ಟಿರುವ ಒಟ್ಟು ಫಲಾನುಭವಿಗಳು ಎಷ್ಟು; ನಿವೇಶನಗಳ ವಿಸ್ತೀರ್ಣವೇನು; (ಪೂರ್ಣ ವಿವರ ನೀಡುವುದು)

(ಆ) ಮಂಡಳಿಯಲ್ಲಿ ಅಧಿಕೃತವಾಗಿ ಈ ಹಿಂದೆ ಅಧಿಕಾರ ಹೊಂದಿದ್ದ ಅಧ್ಯಕ್ಷರು, ಕಾರ್ಯದರ್ಶಿ, ಖಜಾಂಚಿ ಹಾಗೂ ಇನ್ನಿತರರಿಂದ ಕೋಟ್ಯಾಂತರ ಹಣ ದುರುಪಯೋಗವಾಗಿರುವ ಬಗ್ಗೆ ಪತ್ರಿಕೆ ಹಾಗೂ ದೃಶ್ಯ ಮಾಧ್ಯಮಗಳಲ್ಲಿ ಪ್ರಕಟ/ಪ್ರಸಾರಗೊಂಡಿದ್ದ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಯಾವ ಕ್ರಮ ಕೈಗೊಳ್ಳಲಾಗಿದೆ;

(ಇ) ಹಾಲಿ ಇರುವ ಗೃಹ ನಿರ್ಮಾಣ ಮಂಡಳಿಯಲ್ಲಿ ಪದಾಧಿಕಾರಿಗಳು ಹಿಂದೆ ಅಧಿಕಾರ ಹೊಂದಿದ್ದ ಅಧ್ಯಕ್ಷರು, ಕಾರ್ಯದರ್ಶಿ, ಖಜಾಂಚಿ ಹಾಗೂ ಇನ್ನಿತರರು ಕೋಟ್ಯಾಂತರ ಹಣ ದುರುಪಯೋಗ ಮಾಡಿರುವವರ ಮೇಲೆ ಕ್ರಿಮಿನಲ್ ಕೇಸ್ ದಾಖಲು ಮಾಡಿದ್ದಾರೆಯೇ; ಮಾಡಿದ್ದರೆ, ಯಾರ ಯಾರ ಮೇಲೆ ದಾಖಲು ಮಾಡಲಾಗಿದೆ?

## ಭತ್ತದ ಕೃಷಿ ಉತ್ತೇಜಿಸಲು ಪ್ರೋತ್ಸಾಹ ಧನ ನೀಡುವ ಕುರಿತು

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು):–**

೫೮೯ (೬೦೯) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೊಡಗು ಜಿಲ್ಲೆಯಲ್ಲಿ ಭತ್ತದ ಕೃಷಿಗೆ ಉತ್ತೇಜನ ನೀಡುವ ಸಲುವಾಗಿ ರೈತರಿಗೆ ಎಕರೆಗೆ ೧೦,೦೦೦ ರೂಪಾಯಿ ಪ್ರೋತ್ಸಾಹ ಧನ ನೀಡುವ ಪ್ರಸ್ತಾವ ಸರ್ಕಾರದ ಮುಂದಿದೆಯೇ ;

(ಆ) ಇದ್ದಲ್ಲಿ, ಯಾವ ಕಾಲಮಿತಿಯೊಳಗೆ ಈ ಸಂಬಂಧ ಆದೇಶ ಹೊರಡಿಸಲಾಗುವುದು;

(ಇ) ಜಿಲ್ಲೆಯಲ್ಲಿ ಭತ್ತದ ಕೃಷಿ ವಿಸ್ತೀರ್ಣ ಗಣನೀಯವಾಗಿ ಕುಸಿದಿರುವ ಹಿನ್ನೆಲೆಯಲ್ಲಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು;

(ಈ) ಜಿಲ್ಲೆಯಲ್ಲಿ ಭತ್ತದ ಕೃಷಿಗೆ ಉತ್ತೇಜನ ನೀಡುವ ಸಲುವಾಗಿ ಸರ್ಕಾರ ರೂಪಿಸಿರುವ ದೀರ್ಘಾವಧಿ ಕಾರ್ಯಕ್ರಮ ಮತ್ತು ಯೋಜನೆಗಳೇನು?

## ಕೊಡಗಿನ ತಲಕಾವೇರಿ ಹಾಗೂ ಶ್ರೀ ಭಗಂಡೇಶ್ವರ ದೇವಸ್ಥಾನಗಳ ಪಾವಿತ್ರ್ಯಕ್ಕೆ ಧಕ್ಕೆ ಬಾರದಂತೆ ವಹಿಸಿರುವ ಕ್ರಮಗಳ ಕುರಿತು

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು):–**

೫೯೦ (೬೧೦) ಮಾನ್ಯ ಜವಳಿ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೊಡಗಿನ ತಲಕಾವೇರಿ ಹಾಗೂ ಶ್ರೀ ಭಗಂಡೇಶ್ವರ ದೇವಸ್ಥಾನಗಳ ಪಾವಿತ್ರ್ಯಕ್ಕೆ ಧಕ್ಕೆ ಬರುವಂತಹ ಘಟನೆಗಳು ಪ್ರವಾಸಿಗರು ಹಾಗೂ ಯಾತ್ರಾರ್ಥಿಗಳಿಂದ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಆ ರೀತಿಯ ಘಟನೆಗಳು ಮರುಕಳಿಸದಂತೆ ಇರಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು;

(ಇ) ಸದರಿ ದೇವಸ್ಥಾನಗಳಲ್ಲಿ ಭಕ್ತರ ಅನುಕೂಲಕ್ಕಾಗಿ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲು ಪ್ರಸಕ್ತ ವರ್ಷದಲ್ಲಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು? (ಸಂಪೂರ್ಣ ವಿವರ ನೀಡುವುದು)

## ಬೀದರ್– ಔರಾದ್ ಹೆದ್ದಾರಿ ರಸ್ತೆ ನಿರ್ಮಾಣದ ಬಗ್ಗೆ

**ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೯೧ (೭೭೫) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಯ ಔರಾದ್–ಬೀದರ್ ಹೆದ್ದಾರಿ ರಸ್ತೆಯ ಸಂಪೂರ್ಣ ದುರಸ್ಥಿಗೆ ಯಾವ ಕ್ರಮ ಕೈಗೊಳ್ಳಲಾಗಿದೆ;

(ಆ) ಕಳೆದ ೨೦೧೩ ರಿಂದ ಇಲ್ಲಿಯವರೆಗೆ ಔರಾದ್–ಬೀದರ್ ರಸ್ತೆಗಾಗಿ ಖರ್ಚು ಮಾಡಿದ ಅನುದಾನ ಎಷ್ಟು; (ವಿವರ ನೀಡುವುದು)

(ಇ) ಔರಾದ್–ಬೀದರ್ ಹೆದ್ದಾರಿ ರಾಷ್ಟ್ರೀಯ ಹೆದ್ದಾರಿಯಾಗಿ ನಿರ್ಮಾಣವಾಗಲು ಇನ್ನೂ ಎಷ್ಟು ಕಾಲಾವಧಿ ಬೇಕಾಗುವುದು; (ಮಾಹಿತಿ ನೀಡುವುದು)

(ಈ) ಅತಿವೃಷ್ಟಿಯಿಂದ ಹಾಳಾದ ಬ್ರಿಡ್ಜ್‌ಗಳ ದುರಸ್ಥಿಗೆ ಖರ್ಚು ಮಾಡಿದ ಅನುದಾನ ಎಷ್ಟು; ಕಾಮಗಾರಿ ಕಳಪೆ ಮಟ್ಟದಲ್ಲಿ ನಡೆದಿದೆ ಎನ್ನುವ ಬಗ್ಗೆ ದೂರುಗಳು ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮಗಳೇನು?

## ಪಶು ಭಾಗ್ಯ ಯೋಜನೆಯ ಬಗ್ಗೆ

**ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೯೨ (೭೭೬) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪಶು ಭಾಗ್ಯ ಯೋಜನೆಯಲ್ಲಿ ೨೦೧೫ನೇ ಸಾಲಿನಲ್ಲಿ ಆಯ್ಕೆಯಾದ ಫಲಾನುಭವಿಗಳಿಗೆ ಇನ್ನೂ ಹಸುಗಳನ್ನು ಪಡೆಯಲು ಹಣ ನೀಡದಿರಲು ಕಾರಣಗಳೇನು;

(ಆ) ಪಶು ಭಾಗ್ಯ ಯೋಜನೆ ಅಡಿಯಲ್ಲಿ ಜಿಲ್ಲೆಯ ಎಷ್ಟು ಜನರು ಸದುಪಯೋಗ ಪಡೆದು ಕೊಂಡಿದ್ದಾರೆ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಪಶು ಭಾಗ್ಯ ಯೋಜನೆಯಡಿ ಜಿಲ್ಲೆಗೆ ಖರ್ಚು ಮಾಡಿದ ಅನುದಾನ ಎಷ್ಟು? (ತಾಲ್ಲೂಕುವಾರು ವಿವರ ನೀಡುವುದು)

## ಬೀದರ್ ಜಿಲ್ಲೆಯ ಕೃಷಿ ಹೊಂಡಾ ಹಾಗೂ ಪಾಲಿ ಹೌಸ್ ಅನುದಾನದ ಬಗ್ಗೆ

**ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೯೩ (೭೭೩) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೫–೨೦೧೬ರಲ್ಲಿ ಹಾಗೂ ೨೦೧೬–೨೦೧೭ನೇ ಸಾಲಿನಲ್ಲಿ ಬೀದರ್ ಜಿಲ್ಲೆಯಲ್ಲಿ ಎಷ್ಟು ಕೃಷಿ ಹೊಂಡಾ ಹಾಗೂ ಪಾಲಿ ಹೌಸ್‌ಗಳನ್ನು ಫಲಾನುಭವಿಗಳು ನಿರ್ಮಿಸಿಕೊಂಡಿದ್ದಾರೆ;

(ಆ) ಬೀದರ್ ಜಿಲ್ಲೆಯಲ್ಲಿ ಕೃಷಿ ಭಾಗ್ಯ ಯೋಜನೆಯಲ್ಲಿ ಖರ್ಚು ಮಾಡಿದ ಅನುದಾನ ಎಷ್ಟು; (ಫಲಾನುಭವಿಗಳ ಸಂಖ್ಯೆಯೊಂದಿಗೆ ತಾಲ್ಲೂಕುವಾರು ವಿವರ ನೀಡುವುದು)

(ಇ) ಬೀದರ್ ಜಿಲ್ಲೆಯಲ್ಲಿ ಸಾವಯವ ಭಾಗ್ಯ ಯೋಜನೆ ಅಡಿಯಲ್ಲಿ ಎಷ್ಟು ರೈತರು ಸಾವಯವ ಕೃಷಿ ಮಾಡುತ್ತಿದ್ದಾರೆ, ತಾಲ್ಲೂಕುವಾರು ಹೆಕ್ಟೇರ್ ಪ್ರದೇಶದೊಂದಿಗೆ ಸಾವಯವ ಭಾಗ್ಯ ಯೋಜನೆಯಡಿ ಖರ್ಚು ಮಾಡಿದ ಅನುದಾನ ಎಷ್ಟು ? (ತಾಲ್ಲೂಕುವಾರು ವಿವರ ನೀಡುವುದು)

## ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆಯ ವಿವಿಧ ಯೋಜನೆ ಕುರಿತು

**ಶ್ರೀ ಘೋಟ್ನೇಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೫೯೪ (೪೮೩) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಾರವಾರ ಜಿಲ್ಲೆಯಲ್ಲಿ ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆಯಿಂದ ೨೦೧೫–೧೬ನೇ ಸಾಲಿನಿಂದ ೨೦೧೭–೧೮ನೇ ಸಾಲಿನವರೆಗೆ ಯಾವ ಯಾವ ಯೋಜನೆಗಳು ಜಾರಿಯಾಗಿವೆ; (ತಾಲ್ಲೂಕುವಾರು, ಜಿಲ್ಲಾವಾರು ವಿವರ ನೀಡುವುದು)

(ಆ) ೨೦೧೫–೧೬ ರಿಂದ ೨೦೧೭–೧೮ನೇ ಸಾಲಿನವರೆಗೆ ಬಂದಿರುವ ಯೋಜನೆಯಿಂದ ಎಷ್ಟು ಮಂದಿ ಫಲಾನುಭವಿಗಳಿಗೆ ಯಾವ ಯಾವ ರೀತಿಯ ಅನುಕೂಲಗಳಾಗಿವೆ ; ಫಲಾನುಭವಿಗಳ ಹೆಸರು ಸಹಿತ ಅವರಿಗೆ ಅನುಕೂಲ ಮಾಡಿಕೊಟ್ಟಿರುವ ವಿವರ ನೀಡುವುದು ? (ಜಿಲ್ಲಾವಾರು, ತಾಲ್ಲೂಕುವಾರು ಮಾಹಿತಿ ಒದಗಿಸಿ)

## ಜವಳಿ ಪಾರ್ಕ್ ಸ್ಥಾಪನೆ ಬಗ್ಗೆ

**ಶ್ರೀ ಐವನ್ ಡಿ' ಸೋಜಾ (ನಾಮನಿರ್ದೇಶನ ಹೊಂದಿದವರು) :–**

೫೯೫ (೮೦೧) ಮಾನ್ಯ ಜವಳಿ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯಲ್ಲಿ ಜವಳಿ ಪಾರ್ಕ್ ಸ್ಥಾಪನೆಗೆ ಪೂರಕವಾದ ವಾತಾವರಣ ನಿರ್ಮಿಸಲು ಇಲಾಖೆ ಕೈಗೊಂಡಿರುವ ಕ್ರಮಗಳಾವುವು ;

(ಆ) ಬೀಡಿ ಉದ್ದಿಮೆಯಿಂದ ಉದ್ಯೋಗವನ್ನು ಕಳೆದುಕೊಳ್ಳುತ್ತಿರುವ ಸುಮಾರು ೪ ಲಕ್ಷ ಮಹಿಳೆಯರಿಗೆ ಬದಲಿ ಉದ್ಯೋಗಕ್ಕಾಗಿ ಜವಳಿ ಉದ್ದಿಮೆ (Readymade Garment Industries) ಪ್ರಾರಂಭಿಸಲು ಇಲಾಖೆಯ ಮುಂದೆ ಪ್ರಸ್ತಾವನೆ ಇದೆಯೇ ; ಮತ್ತು ತರಬೇತಿ ನೀಡಲು ಕ್ರಮ ಕೈಗೊಳ್ಳಲಾಗುವುದೇ ; (ವಿವರ ನೀಡುವುದು)

(ಇ) ಬೀಡಿ ಉದ್ದಿಮೆಯಿಂದ ಉದ್ಯೋಗ ಕಳೆದುಕೊಳ್ಳುತ್ತಿರುವವರಿಗೆ Garment Industries ಮೂಲಕ ಜಿಲ್ಲೆಗಳಲ್ಲಿ ಉದ್ಯೋಗವನ್ನು ನೀಡಲು ಅನುಕೂಲವಾಗುವಂತೆ ಇಲಾಖೆಯಿಂದ ಎಷ್ಟು ಮಂದಿಗೆ ತರಬೇತಿ ನೀಡಲಾಗಿದೆ ? (ವಿವರ ನೀಡುವುದು)

## ಮಲ್ಲಿಗೆ ಕೃಷಿ ಬಗ್ಗೆ

**ಶ್ರೀ ಐವನ್ ಡಿ' ಸೋಜಾ (ನಾಮನಿರ್ದೇಶನ ಹೊಂದಿದವರು) :–**

೫೯೬ (೮೦೦) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಲ್ಲಿಗೆ ಕೃಷಿಯನ್ನು ಪ್ರೋತ್ಸಾಹಿಸಲು ಇಲಾಖೆ ತೆಗೆದುಕೊಂಡಿರುವ ಕ್ರಮಗಳೇನು ; ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯಲ್ಲಿ ಮಲ್ಲಿಗೆ ಕೃಷಿ ಬಗ್ಗೆ ದರ ನಿಗದಿ ಮಾಡಲು ಇಲಾಖೆ ಕೈಗೊಂಡಿರುವ ಕ್ರಮಗಳೇನು ;

(ಆ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ಎಷ್ಟು ಹೆಕ್ಟೇರ್‌ಗಳಲ್ಲಿ ಮಲ್ಲಿಗೆ ಕೃಷಿ ಬೆಳೆಸಲಾಗುತ್ತಿದೆ ;

(ಇ) ಈ ಕೃಷಿ ಅವಲಂಬಿತ ಕುಟುಂಬಗಳೆಷ್ಟು ; (ವಿವರ ನೀಡುವುದು)

(ಈ) ರಾಜ್ಯದಲ್ಲಿ ಮಲ್ಲಿಗೆಯನ್ನು ಯಾವ ಯಾವ ಉತ್ಪನ್ನಗಳಿಗೆ ಬಳಸುತ್ತಾರೆ ? (ವಿವರ ನೀಡುವುದು)

## ರಾಜ್ಯ ಹೆದ್ದಾರಿ ೧೬೯ನ್ನು ಮೇಲ್ದರ್ಜೆಗೇರಿಸಿದ ಕುರಿತು

**ಶ್ರೀ ಐವನ್ ಡಿ' ಸೋಜಾ (ನಾಮನಿರ್ದೇಶನ ಹೊಂದಿದವರು) :–**

೫೯೭ (೭೯೮) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯ ಹೆದ್ದಾರಿ ೧೬೯ನ್ನು ಮೇಲ್ದರ್ಜೆಗೇರಿಸಿ ಎಷ್ಟು ವರ್ಷಗಳಾಗಿವೆ ; ಈ ಹೆದ್ದಾರಿಯ ಕಾಮಗಾರಿಯನ್ನು ಯಾವಾಗ ಪೂರ್ಣಗೊಳಿಸಲಾಗುವುದು ; ಕಾಮಗಾರಿಗಳು ಯಾವ ಹಂತದಲ್ಲಿವೆ ; (ವಿವರ ನೀಡುವುದು)

(ಆ) ರಾಜ್ಯ ಹೆದ್ದಾರಿ ೧೬೯ಕ್ಕೆ ಮೀಸಲಿಟ್ಟಿರುವ ಒಟ್ಟು ಅನುದಾನ ಎಷ್ಟು ; ಬಿಡುಗಡೆಗೊಳಿಸಲಾದ ಅನುದಾನ ಎಷ್ಟು ; (ವಿವರ ನೀಡುವುದು)

(ಇ) ಪ್ರಸ್ತುತ ಈ ಹೆದ್ದಾರಿಯ ನಿರ್ವಹಣೆ ಮಾಡಲಾಗುತ್ತಿದೆಯೇ ; ಮಾಡುತ್ತಿದ್ದಲ್ಲಿ, ನಿರ್ವಹಣೆಗಾಗಿ ಖರ್ಚು ಮಾಡಿದ ಹಣ ಎಷ್ಟು ; (ವಿವರ ನೀಡುವುದು)

(ಈ) ರಾಜ್ಯ ಹೆದ್ದಾರಿಯ ಮಧ್ಯದಲ್ಲಿರುವ ಗುರುಪುರ ಸೇತುವೆ ತೀರಾ ದುಸ್ಥಿತಿಯಲ್ಲಿದ್ದು, ಕುಸಿದು ಬೀಳುವ ಹಂತದಲ್ಲಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ಬಗ್ಗೆ ಇಲಾಖೆ ಕೈಗೊಂಡ ಕ್ರಮಗಳೇನು ? (ವಿವರ ನೀಡುವುದು)

## ರಾಜ್ಯದಲ್ಲಿ ಆಗುತ್ತಿರುವ ವಿದ್ಯುತ್ ಉತ್ಪಾದನೆ ಮತ್ತು ಬಳಕೆ ಬಗ್ಗೆ

**ಶ್ರೀ ಐವನ್ ಡಿ' ಸೋಜಾ (ನಾಮನಿರ್ದೇಶನ ಹೊಂದಿದವರು) :–**

೫೯೮ (೭೯೭) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಉತ್ಪಾದನೆ ಆಗುತ್ತಿರುವ ಒಟ್ಟು ವಿದ್ಯುತ್ ಎಷ್ಟು ; ಬೇಡಿಕೆ ಇರುವುದೆಷ್ಟು ;

(ಆ) ವಿದ್ಯುತ್‌ನ್ನು ಯಾವ ದರದಲ್ಲಿ ಖರೀದಿ ಮಾಡಲಾಗುತ್ತಿದೆ ; (ವಿವರ ನೀಡುವುದು)

(ಇ) ಬಿ.ಪಿ.ಎಲ್. ಕಾರ್ಡುದಾರರಿಗೆ ರಾಜ್ಯದಲ್ಲಿ ಉಚಿತವಾಗಿ ವಿದ್ಯುತ್ ಸರಬರಾಜು ಮಾಡುವ ಯೋಜನೆ ಬಗ್ಗೆ ಸರ್ಕಾರದ ಮುಂದೆ ಪ್ರಸ್ತಾವನೆ ಇದೆಯೇ ; (ವಿವರ ನೀಡುವುದು)

(ಈ) ರಾಜ್ಯದಲ್ಲಿರುವ ಒಟ್ಟು ಬಿ.ಪಿ.ಎಲ್. ಕಾರ್ಡುದಾರರಿಗೆ ಮಾಸಿಕ ₹. ೩೦೦.೦೦ ರವರೆಗೆ ಉಚಿತ ವಿದ್ಯುತ್ ಒದಗಿಸಿದ್ದಲ್ಲಿ, ರಾಜ್ಯ ಸರ್ಕಾರಕ್ಕೆ ತಗಲುವ ವೆಚ್ಚ ಎಷ್ಟು ? (ವಿವರ ನೀಡುವುದು)

## ದಕ್ಷಿಣ ಕನ್ನಡ ಜಿಲ್ಲೆ, ಕೊಯಿಲಾದಲ್ಲಿ ಪಶು ವೈದ್ಯಕೀಯ ಕಾಲೇಜು ಪ್ರಾರಂಭಿಸುವ ಬಗ್ಗೆ

**ಶ್ರೀ ಐವನ್ ಡಿ' ಸೋಜಾ (ನಾಮನಿರ್ದೇಶನ ಹೊಂದಿದವರು) :–**

೫೯೯ (೭೯೯) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ದಕ್ಷಿಣ ಕನ್ನಡ ಜಿಲ್ಲೆ, ಕೊಯಿಲಾದಲ್ಲಿ ಪ್ರಾರಂಭಿಸಲು ಉದ್ದೇಶಿಸಿರುವ ಪಶು ವೈದ್ಯಕೀಯ ಕಾಲೇಜು ಎಂದು ಪ್ರಾರಂಭವಾಗುತ್ತದೆ ; ಪ್ರಸ್ತುತ ಯಾವ ಹಂತದಲ್ಲಿದೆ ; (ವಿವರ ನೀಡುವುದು)

(ಆ) ಪಶು ವೈದ್ಯಕೀಯ ಕಾಲೇಜನ್ನು ಪ್ರಾರಂಭಗೊಳಿಸಲು ಇರುವ ಅಡ್ಡಿ–ಆತಂಕಗಳಾವುವು ; ಪ್ರಾರಂಭಗೊಂಡಲ್ಲಿ, ಎಷ್ಟು ವಿದ್ಯಾರ್ಥಿಗಳಿಗೆ ಪ್ರವೇಶ ದೊರಕಲಿರುವುದು ; (ವಿವರ ನೀಡುವುದು)

(ಇ) ರಾಜ್ಯ ಪಶುಸಂಗೋಪನೆ ಇಲಾಖೆಯಲ್ಲಿ ಕಾರ್ಯನಿರ್ವಹಿಸಲು ವೈದ್ಯರ ಕೊರತೆ ಇದೆಯೇ ; ಇದ್ದಲ್ಲಿ, ಇದರ ನಿವಾರಣೆಗೆ ಸರ್ಕಾರ ಕೈಗೊಂಡ ಕ್ರಮಗಳೇನು ?

## ‘ಸಿರಿ’ ತೋಟಗಾರಿಕಾ ಉದ್ಯಾನವನದ ನಿರ್ಮಾಣ ಕುರಿತು

**ಡಾ: ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು) :–**

೬೦೦ (೭೪೪) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ತಮಿಳುನಾಡಿನ ಊಟಿಯಲ್ಲಿ ರಾಜ್ಯದ ತೋಟಗಾರಿಕೆ ಇಲಾಖೆಯಿಂದ ನಿರ್ಮಾಣಗೊಂಡ ‘ಸಿರಿ’ ತೋಟಗಾರಿಕಾ ಉದ್ಯಾನವನದ ಮುಖ್ಯ ಉದ್ದೇಶವೇನು ; (ವಿವರ ನೀಡುವುದು)

(ಆ) ಈ ಉದ್ಯಾನವನ ನಿರ್ಮಾಣ ಮಾಡಲು ತಗುಲಿದ ವೆಚ್ಚವೆಷ್ಟು ;

(ಇ) ಇದೇ ಮಾದರಿ ಉದ್ಯಾನವನಗಳನ್ನು ಕರ್ನಾಟಕ ಪ್ರವಾಸಿ ತಾಣಗಳಾದ ನಂದಿಬೆಟ್ಟ, ಕೆಮ್ಮಣ್ಣುಗುಂಡಿ, ಕೃಷ್ಣರಾಜಸಾಗರ ಮುಂತಾದ ಕಡೆ ನಿರ್ಮಾಣ ಮಾಡಲು ಸರ್ಕಾರ ಚಿಂತನೆ ನಡೆಸಿದೆಯೇ ? (ವಿವರ ನೀಡುವುದು)

## ರಾಜ್ಯದ ಹೋಬಳಿಗಳಲ್ಲಿ ರೈತ ಸಂಪರ್ಕ ಕೇಂದ್ರ ಸ್ಥಾಪನೆ ಕುರಿತು

**ಡಾ: ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು) :–**

೬೦೧ (೭೪೩) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಎಲ್ಲಾ ಹೋಬಳಿಗಳಲ್ಲಿ ರೈತ ಸಂಪರ್ಕ ಕೇಂದ್ರ ಸ್ಥಾಪಿಸಲಾಗಿದೆಯೇ ; (ವಿವರ ನೀಡುವುದು)

(ಆ) ಇಲ್ಲವಾದ್ದಲ್ಲಿ, ಬಾಕಿ ಇರುವ ಹೋಬಳಿಗಳಲ್ಲಿ ರೈತ ಸಂಪರ್ಕ ಕೇಂದ್ರ ಸ್ಥಾಪನೆ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು;

(ಇ) ಚಾಲ್ತಿಯಲ್ಲಿರುವ ಎಷ್ಟು ರೈತ ಸಂಪರ್ಕ ಕೇಂದ್ರಗಳು ಸ್ಥಳಾವಕಾಶವಿಲ್ಲದೆ ಬಾಡಿಗೆ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತಿವೆ ; ಹಾಗಿದ್ದಲ್ಲಿ, ಸರ್ಕಾರ ಈ ಬಗ್ಗೆ ತೆಗೆದುಕೊಂಡ ಕ್ರಮಗಳೇನು ;

(ಈ) ರೈತರ ಮತ್ತು ಸರ್ಕಾರದ ರೈತ ಪರ ಯೋಜನೆಗಳ ಕೊಂಡಿಯಾಗಿರುವ ಈ ರೈತ ಸಂಪರ್ಕ ಕೇಂದ್ರಗಳಲ್ಲಿ ನುರಿತ ತಜ್ಞರ/ಅಧಿಕಾರಿಗಳ ಅಲಭ್ಯತೆಯ ಬಗ್ಗೆ ದೂರುಗಳು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರದ ಕ್ರಮವೇನು ?

## ಪಶು ಭಾಗ್ಯ ಯೋಜನೆ ಮತ್ತು ಹಾಲಿಗೆ ನೀಡಿದ ಪ್ರೋತ್ಸಾಹ ಧನ ಕುರಿತು

**ಡಾ: ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು) :–**

೬೦೨ (೭೪೧) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ಮೂರು ವರ್ಷಗಳಲ್ಲಿ ಪಶುಭಾಗ್ಯ ಯೋಜನೆಯಡಿ ಎಷ್ಟು ಜಾನುವಾರುಗಳನ್ನು ಫಲಾನುಭವಿಗಳಿಗೆ ವಿತರಿಸಲಾಗಿದೆ ; (ಜಿಲ್ಲಾವಾರು ಅಂಕಿ–ಅಂಶಗಳನ್ನು ನೀಡುವುದು)

(ಆ) ವಿತರಿಸಲಾದ ವಿವಿಧ ಜಾನುವಾರುಗಳಿಗೆ ನಿಗದಿಪಡಿಸಲಾದ ಸಹಾಯಧನ ಎಷ್ಟು ; (ವಿವರ ನೀಡುವುದು)

(ಇ) ಕಳೆದ ಮೂರು ವರ್ಷಗಳಲ್ಲಿ ರಾಜ್ಯದಲ್ಲಿ ರೈತರಿಂದ ಸಂಗ್ರಹವಾದ ಹಾಲಿನ ಪ್ರಮಾಣ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಈ) ಈ ಸಂಗ್ರಹವಾದ ಹಾಲಿನ ಪ್ರಮಾಣಕ್ಕೆ ಸರ್ಕಾರದಿಂದ ನೀಡಲಾದ ಪ್ರೋತ್ಸಾಹಧನದ ಮೊತ್ತವೆಷ್ಟು ? (ಜಿಲ್ಲಾವಾರು ಅಂಕಿ–ಅಂಶಗಳನ್ನು ನೀಡುವುದು)

## ನೋಂದಣಿಯಾಗಿರುವ ಸಹಕಾರ ಸಂಘಗಳ ಚುನಾವಣೆ ನಡೆದಿರುವ ಕುರಿತು

**ಡಾ: ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು) :–**

೬೦೩ (೭೪೨) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಸಹಕಾರ ಇಲಾಖೆಯಡಿಯಲ್ಲಿ ಇಲ್ಲಿಯವರೆಗೆ ಎಷ್ಟು ಸಹಕಾರ ಸಂಘಗಳು (ಸೊಸೈಟಿಗಳು) ನೋಂದಣಿ ಪಡೆದಿರುತ್ತದೆ ; (ಜಿಲ್ಲಾವಾರು/ವರ್ಗವಾರು ವಿವರ ನೀಡುವುದು)

(ಆ) ಈ ನೋಂದಣಿಯಾಗಿರುವ ಎಷ್ಟು ಸಹಕಾರ ಸಂಘಗಳಿಗೆ ನಿಯಮಿತ ಕಾಲಾವಧಿಯೊಳಗೆ ಚುನಾವಣೆಗಳು ನಡೆದಿವೆ; (ಜಿಲ್ಲಾವಾರು/ವರ್ಗವಾರು ವಿವರ ನೀಡುವುದು)

(ಇ) ಈ ನೋಂದಣಿಯಾಗಿರುವ ಎಷ್ಟು ಸಹಕಾರ ಸಂಘಗಳಿಗೆ ನಿಯಮಿತ ಅವಧಿಯಲ್ಲಿ ಚುನಾವಣೆಗಳು ನಡೆದಿಲ್ಲ ; ಜಿಲ್ಲಾವಾರು/ ವರ್ಗವಾರು ಅಂಕಿ–ಅಂಶಗಳನ್ನು ನೀಡುವುದು ; ಚುನಾವಣೆಗಳನ್ನು ನಡೆಸಲು ಸರ್ಕಾರದ ಕ್ರಮವೇನು ;

(ಈ) ಕಳೆದ ಮೂರು ವರ್ಷಗಳಲ್ಲಿ ಎಷ್ಟು ಸಹಕಾರ ಸಂಘಗಳು ನಿಷ್ಕ್ರೀಯಗೊಂಡಿವೆ (Defunct) ? (ಜಿಲ್ಲಾವಾರು/ವರ್ಗವಾರು ವಿವರ ನೀಡುವುದು)

## ಅಪೆಂಡಿಕ್ಸ್–ಇ ನಲ್ಲಿ ಗುರುತಿಸಲಾದ ರಸ್ತೆಗಳ ಬಗ್ಗೆ

**ಶ್ರೀ ಸಯದ್ ಮುಧೀರ್ ಆಗಾ (ವಿಧಾನಸಭೆಯಿಂದ ಚುನಾಯಿತರಾದವರು):–**

೬೦೪ (೪೮೬) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ಮೂರು ವರ್ಷಗಳಲ್ಲಿ ರಾಮನಗರ ಜಿಲ್ಲೆ ಮತ್ತು ಚಾಮರಾಜನಗರ ಜಿಲ್ಲೆಗಳ ವ್ಯಾಪ್ತಿಯಲ್ಲಿ ಲೋಕೋಪಯೋಗಿ ಇಲಾಖೆಯ ಅಪೆಂಡಿಕ್ಸ್–ಇ ರಲ್ಲಿ ಗುರುತಿಸಲಾದ ರಸ್ತೆಗಳಾವುವು; ಪೂರ್ಣಗೊಳಿಸಲಾದ ಹಾಗೂ ಅಪೂರ್ಣಗೊಂಡಿರುವ ರಸ್ತೆ ಕಾಮಗಾರಿಗಳಾವುವು; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಈ ರಸ್ತೆಗಳ ಅಭಿವೃದ್ಧಿಗಾಗಿ ಸರ್ಕಾರವು ಇದುವರೆವಿಗೂ ಬಿಡುಗಡೆ ಮಾಡಿರುವ ಅನುದಾನವೆಷ್ಟು ; ಖರ್ಚು ಮಾಡಲಾದ ಹಣವೆಷ್ಟು; ಕಾಮಗಾರಿಗಳ ಇತ್ತೀಚಿನ ಪ್ರಗತಿಯ ಸಂಪೂರ್ಣ ಮಾಹಿತಿ ನೀಡುವುದು ;

(ಇ) ರಸ್ತೆ ಕಾಮಗಾರಿಗಳನ್ನು ಪೂರ್ಣಗೊಳಿಸಲು ಇರುವ ಮಾನದಂಡಗಳೇನು ಹಾಗೂ ಕಾಲಮಿತಿಯೇನು ? (ವಿವರಗಳನ್ನು ನೀಡುವುದು)

## ಜಿಲ್ಲಾ ಮುಖ್ಯ ರಸ್ತೆಗಳ ಬಗ್ಗೆ

**ಶ್ರೀ ಸಯದ್ ಮುಧೀರ್ ಆಗಾ (ವಿಧಾನಸಭೆಯಿಂದ ಚುನಾಯಿತರಾದವರು):–**

೬೦೫ (೪೮೫) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೭–೧೮ನೇ ಸಾಲಿನ ಆಯವ್ಯಯದಲ್ಲಿ ಲೋಕೋಪಯೋಗಿ ಜಿಲ್ಲಾ ಮುಖ್ಯರಸ್ತೆಗಳು ಹಾಗೂ ಇತರೆ ಸಂಪರ್ಕ ರಸ್ತೆಗಳ ಅಭಿವೃದ್ಧಿ/ ಸುಧಾರಣೆ ಮತ್ತು ನಿರ್ವಹಣೆಗೆ ಮೀಸಲಿಟ್ಟ ಹಣವೆಷ್ಟು ; ಖರ್ಚು ಮಾಡಿದ ಹಣವೆಷ್ಟು ; ಖರ್ಚಾಗದೆ ಉಳಿದ ಹಣವೆಷ್ಟು;(ಸಂಪೂರ್ಣ ಮಾಹಿತಿ ನೀಡುವುದು)

(ಆ) ರಾಮನಗರ ಜಿಲ್ಲೆ ಮತ್ತು ಚಾಮರಾಜನಗರ ಜಿಲ್ಲೆಗಳ ವ್ಯಾಪ್ತಿಯಲ್ಲಿ ಲೋಕೋಪಯೋಗಿ ಇಲಾಖೆಯ ರಸ್ತೆಗಳ ಅಭಿವೃದ್ಧಿಗೆ ಬಿಡುಗಡೆಯಾದ ಅನುದಾನವೆಷ್ಟು ; ಖರ್ಚು ಮಾಡಿದ ಹಣವೆಷ್ಟು; ಕಾಮಗಾರಿಗಳ ಇತ್ತೀಚಿನ ಪ್ರಗತಿಯ ಬಗ್ಗೆ ವಿಧಾನಸಭಾ ಕ್ಷೇತ್ರವಾರು ಸಂಪೂರ್ಣ ಮಾಹಿತಿ ನೀಡುವುದು ;

(ಇ) ಲೋಕೋಪಯೋಗಿ ಇಲಾಖೆಯ ರಸ್ತೆ ಕಾಮಗಾರಿಗಳ ಗುಣಮಟ್ಟ ಮತ್ತು ಪಾರದರ್ಶಕ ನಿರ್ವಹಣೆಗೆ ಸರ್ಕಾರವು ಕೈಗೊಂಡಿರುವ ಕ್ರಮಗಳೇನು ? (ವಿವರಗಳನ್ನು ನೀಡುವುದು)

## ಬೆಂಗಳೂರು–ಮೈಸೂರು ಚತುಷ್ಪತ ರಸ್ತೆ ಕುರಿತು

**ಶ್ರೀ ಸಯದ್ ಮುಧೀರ್ ಆಗಾ (ವಿಧಾನಸಭೆಯಿಂದ ಚುನಾಯಿತರಾದವರು):–**

೬೦೬ (೬೨೩) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು–ಮೈಸೂರು ಚತುಷ್ಪಥ ರಸ್ತೆಯನ್ನು ನಿರ್ಮಿಸಲು ಸರ್ಕಾರ ಅನುಮೋದನೆಯನ್ನು ನೀಡಿ, ರಸ್ತೆಯನ್ನು ನಿರ್ಮಿಸಲು ಎಷ್ಟು ಅನುದಾನ ಬಿಡುಗಡೆ ಮಾಡಲಾಗಿದೆ ;

(ಆ) ಹಾಗಿದ್ದಲ್ಲಿ, ಬೆಂಗಳೂರು–ಮೈಸೂರು ಚತುಷ್ಪಥ ರಸ್ತೆಯನ್ನು ನಿರ್ಮಿಸಲು ಟೆಂಡರ್ ಕರೆಯಲಾಗಿದೆಯೇ ;

(ಇ) ಈ ಟೆಂಡರ್‌ನಲ್ಲಿ ಭಾಗವಹಿಸಿದ್ದ ಗುತ್ತಿಗೆದಾರರು ಯಾರು ಹಾಗೂ ಈ ರಸ್ತೆ ನಿರ್ಮಿಸಲು ಗುತ್ತಿಗೆ ನೀಡುವಾಗ ಸರ್ಕಾರ ಅನುಸರಿಸಿದ ಮಾನದಂಡಗಳೇನು ; ಹಾಗೂ ಪ್ರತಿ ಕಿ.ಮೀ. ನಿರ್ಮಾಣಕ್ಕೆ ವೆಚ್ಚವಾಗುತ್ತಿರುವ ಮೊತ್ತವೆಷ್ಟು ; (ವಿವರ ನೀಡುವುದು)

(ಈ) ಸದರಿ ಚತುಷ್ಪಥ ರಸ್ತೆಯನ್ನು ನಿರ್ಮಿಸಲು ಟೆಂಡರ್ ಪ್ರಕ್ರಿಯೆ ಮುಗಿದಿದ್ದಲ್ಲಿ, ಯಾವಾಗ ರಸ್ತೆ ಕಾಮಗಾರಿಯನ್ನು ಕೈಗೆತ್ತಿಕೊಳ್ಳಲಾಗುವುದು ?

## ಮೈಸೂರು–ಬೆಂಗಳೂರು ರಸ್ತೆಯನ್ನು ಆರು ಪಥದ ರಸ್ತೆಯನ್ನಾಗಿ ಅಭಿವೃದ್ಧಿಪಡಿಸುವ ಬಗ್ಗೆ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೬೦೭ (೭೪೦) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮೈಸೂರು–ಬೆಂಗಳೂರು ರಾಷ್ಟ್ರೀಯ ಹೆದ್ದಾರಿಯನ್ನು ಆರು ಪಥದ ರಸ್ತೆಯನ್ನಾಗಿ ಅಭಿವೃದ್ಧಿಪಡಿಸುವ ಅಂತಿಮ ಡಿ.ಪಿ.ಆರ್.ಗೆ ರಾಜ್ಯ ಸರ್ಕಾರ ಹಾಗೂ ಕೇಂದ್ರ ಹೆದ್ದಾರಿ ಸಚಿವಾಲಯದ ಆಡಳಿತಾತ್ಮಕ ಮತ್ತು ಆರ್ಥಿಕ ಅನುಮೋದನೆ ಆಗಿರುತ್ತದೆಯೇ ; ಕೇಂದ್ರ ಸರ್ಕಾರ ಈ ಯೋಜನೆಗೆ ಮಂಜೂರು ಮಾಡಿ, ಬಿಡುಗಡೆ

ಮಾಡಿರುವ ಅನುದಾನ ಎಷ್ಟು ; ರಾಜ್ಯ ಸರ್ಕಾರ ಮಂಜೂರು ಮಾಡಿ, ಬಿಡುಗಡೆ ಮಾಡಿರುವ ಅನುದಾನ ಎಷ್ಟು ; ಟೆಂಡರ್ ಪ್ರಕ್ರಿಯೆ ಯಾವ ಹಂತದಲ್ಲಿದೆ ; ಹೆದ್ದಾರಿ ನಿರ್ಮಾಣ ಕಾಮಗಾರಿಗಳು ಯಾವಾಗ ಆರಂಭವಾಗುತ್ತವೆ ;

(ಆ) ಈ ಯೋಜನೆಗೆ ಅಗತ್ಯವಾಗಿ ಬೇಕಾದ ಹೆಚ್ಚುವರಿ ಭೂಮಿ ಎಷ್ಟು ; ಹೆದ್ದಾರಿ ಹಾದುಹೋಗುವ ಜಿಲ್ಲಾವಾರು ವಿವರ ಒದಗಿಸುವುದು ; ಭೂಸ್ವಾಧೀನ ಹಾಗೂ ಭೂ ಮಾಲೀಕರಿಗೆ ಪರಿಹಾರ ನೀಡುವ ಕಾರ್ಯ ಯಾವ ಹಂತದಲ್ಲಿದೆ ; ಎಲ್ಲೆಲ್ಲಿ ಭೂ ಸ್ವಾಧೀನ ಕಾರ್ಯ ಆಗಿದೆ ; ಇದಕ್ಕಾಗಿ ಒದಗಿಸಿರುವ ಅನುದಾನ ಎಷ್ಟು ; ಖರ್ಚಾಗಿರುವ ಅನುದಾನ ಎಷ್ಟು ;

(ಇ) ಮೈಸೂರು–ಬೆಂಗಳೂರು ಹೆದ್ದಾರಿಯಲ್ಲಿ ಯಾವ ಯಾವ ನಗರಗಳಿಗೆ/ಪಟ್ಟಣಗಳಿಗೆ ಎಲ್ಲೆಲ್ಲಿ ಬೈಪಾಸ್ ರಸ್ತೆಯನ್ನು ನಿರ್ಮಿಸಲು ಉದ್ದೇಶಿಸಲಾಗಿದೆ ; ಎಲ್ಲೆಲ್ಲಿ ಎಲಿವೇಟಡ್ ರಸ್ತೆಯನ್ನು ನಿರ್ಮಿಸಲು ಉದ್ದೇಶಿಸಲಾಗಿದೆ ; ಎಲ್ಲೆಲ್ಲಿ ಅಂಡರ್ ಪಾಸ್ ರಸ್ತೆಯನ್ನು ನಿರ್ಮಿಸಲು ಉದ್ದೇಶಿಸಲಾಗಿದೆ ? (ಪೂರ್ಣ ವಿವರ ಒದಗಿಸುವುದು)

## ರಾಷ್ಟ್ರೀಯ ಹೆದ್ದಾರಿ ೨೦೯ರಲ್ಲಿ ಸತ್ಯಾಗಾಲ, ಸಂತೇಮಾರನಹಳ್ಳಿ ಮತ್ತು ಚಾಮರಾಜನಗರ ಬಳಿ ಬೈಪಾಸ್ ರಸ್ತೆಯ ನಿರ್ಮಾಣ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೬೦೮ (೮೧೨) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಚಾಮರಾಜನಗರ ಜಿಲ್ಲೆಯಲ್ಲಿ ರಾಷ್ಟ್ರೀಯ ಹೆದ್ದಾರಿ ೨೦೯ರ ಅಭಿವೃದ್ಧಿ ಕಾಮಗಾರಿಗಳಿಗೆ ಭೂಸ್ವಾಧೀನ ಕಾರ್ಯ ಪೂರ್ಣಗೊಂಡಿದೆಯೇ ; ಎಷ್ಟು ಎಕರೆ ಭೂಮಿಯನ್ನು ಸ್ವಾಧೀನ ಪಡಿಸಿಕೊಳ್ಳಲಾಗಿದೆ ; ಈ ಸಂಬಂಧ ರೈತರಿಗೆ ನೀಡಲಾಗಿರುವ ಪರಿಹಾರ ಎಷ್ಟು ; ಈ ಕಾಮಗಾರಿಗಳಿಗೆ ಪ್ರಸಕ್ತ ಸಾಲಿನಲ್ಲಿ ಮಂಜೂರು ಮಾಡಿ, ಬಿಡುಗಡೆ ಮಾಡಿರುವ ಅನುದಾನ ಎಷ್ಟು; (ವಿವರ ಒದಗಿಸುವುದು) ಎಷ್ಟು ಹಣ ಖರ್ಚಾಗಿದೆ ; ಹೆದ್ದಾರಿ ನಿರ್ಮಾಣ ಕಾರ್ಯದ ಪ್ರಗತಿಯ ವಿವರಗಳನ್ನು ಒದಗಿಸುವುದು;

(ಆ) ಈ ರಾಷ್ಟ್ರೀಯ ಹೆದ್ದಾರಿಯಲ್ಲಿ ಸತ್ಯಾಗಾಲ, ಸಂತೇಮಾರನಹಳ್ಳಿ ಮತ್ತು ಚಾಮರಾಜನಗರ ಬಳಿ ಬೈಪಾಸ್ ರಸ್ತೆಯ ನಿರ್ಮಾಣ ಮಾಡಲು ಕ್ರಮ ತೆಗೆದುಕೊಳ್ಳಲಾಗಿದೆಯೇ ; ಕಾಮಗಾರಿಗಳು ಯಾವ ಹಂತದಲ್ಲಿವೆ ; ಈ ಕಾಮಗಾರಿಗಳಿಗೆ ಒದಗಿಸಿರುವ ಅನುದಾನ ಎಷ್ಟು ?

## ಚಾಮರಾಜನಗರ ಡೀವಿಯೇಷನ್ ರಸ್ತೆ ಮತ್ತು ಬಿ.ರಾಚಯ್ಯ ರಸ್ತೆಗಳ ಅಗಲೀಕರಣ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೬೦೯ (೮೧೧) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಚಾಮರಾಜನಗರದ ಡೀವಿಯೇಷನ್ ರಸ್ತೆಯ ಅಗಲೀಕರಣ ಕಾರ್ಯ ಪ್ರಗತಿ ಯಾವ ಹಂತದಲ್ಲಿದೆ ; ಇದಕ್ಕಾಗಿ ಸ್ವಾಧೀನಪಡಿಸಿಕೊಂಡಿರುವ ಸ್ವತ್ತುಗಳು ಎಷ್ಟು ; ಭೂ ಸ್ವಾಧೀನ ಮಾಡಿಕೊಂಡಿರುವ ಈ ಸ್ವತ್ತುಗಳಿಗೆ ಮಂಜೂರಾಗಿರುವ, ಬಿಡುಗಡೆ ಆಗಿರುವ ಮತ್ತು ಸ್ವತ್ತುಗಳ ಮಾಲೀಕರಿಗೆ ನೀಡಿರುವ ಪರಿಹಾರ ಎಷ್ಟು ; ಪರಿಹಾರ ಕೊಡಬೇಕಾಗಿರುವ ಬಾಕಿ ಪ್ರಕರಣಗಳೆಷ್ಟು ;

(ಆ) ಹೈಕೋರ್ಟಿನ ತಡೆಯಾಜ್ಞೆ ಇದ್ದರೂ ಈ ಸ್ವತ್ತುಗಳನ್ನು ಒಡೆದು ಹಾಕಲಾಗಿತ್ತೇ ; ಈ ಸಂಬಂಧದ ನ್ಯಾಯಾಂಗ ನಿಂದನೆ ಪ್ರಕರಣ ಯಾವ ಹಂತದಲ್ಲಿದೆ ; ಇದಕ್ಕೆ ಸೂಕ್ತ ಪರಿಹಾರವನ್ನು ಕಂಡು ಕೊಳ್ಳಲಾಗುವುದೇ ;

(ಇ) ಚಾಮರಾಜನಗರ–ಬಿ.ರಾಚಯ್ಯ ರಸ್ತೆಯ ಅಗಲೀಕರಣಕ್ಕೆ ಖಾಸಗಿ ಸ್ವತ್ತುಗಳನ್ನು ವಶಪಡಿಸಿಕೊಳ್ಳಲಾಗಿದೆಯೇ ; ನೋಟೀಸ್ ನೀಡದೇ ರಸ್ತೆಯ ಅಗಲೀಕರಣಕ್ಕೆ ಮನೆಗಳನ್ನು ಒಡೆದು ಹಾಕಲಾಗಿದೆಯೇ; ಈ ಬಗ್ಗೆ ಸಾರ್ವಜನಿಕರು ಪ್ರತಿಭಟನೆ ಮಾಡಿರುತ್ತಾರೆಯೇ ; (ವಿವರಗಳನ್ನು ಒದಗಿಸುವುದು) ಸ್ವತ್ತುಗಳ ಮಾಲೀಕರಿಗೆ ಪರಿಹಾರ ಧನ ನಿಗಧಿಪಡಿಸಿ, ಮಂಜೂರು ಮಾಡಿ, ಬಿಡುಗಡೆ ಮಾಡಲಾಗಿದೆಯೇ ? (ವಿವರ ಒದಗಿಸುವುದು)

## ಮುಜರಾಯಿ ದೇವಸ್ಥಾನಗಳ ಕುರಿತು

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೬೧೦ (೮೧೪) ಮಾನ್ಯ ಜವಳಿ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಧಾರವಾಡ, ಗದಗ ಹಾಗೂ ಹಾವೇರಿ ಜಿಲ್ಲೆಗಳಲ್ಲಿ ಮುಜರಾಯಿ ಇಲಾಖೆ ವ್ಯಾಪ್ತಿಯ ಒಟ್ಟು ಎಷ್ಟು ದೇವಸ್ಥಾನಗಳಿವೆ ; ಅವು ಯಾವುವು ; (ತಾಲ್ಲೂಕುವಾರು, ದೇವಸ್ಥಾನವಾರು ವಿವರ ನೀಡುವುದು)

(ಆ) ಈ ಜಿಲ್ಲೆಗಳ ವ್ಯಾಪ್ತಿಯಲ್ಲಿ ಕಳೆದ ೩ ವರ್ಷಗಳಲ್ಲಿ ಯಾವ ಯಾವ ದೇವಸ್ಥಾನಗಳ ದುರಸ್ಥಿ ಕಾರ್ಯ ಕೈಗೊಳ್ಳಲಾಗಿದೆ ; ಯಾವ ಯಾವ ದೇವಸ್ಥಾನಗಳ ದುರಸ್ಥಿ ಕಾರ್ಯ ಬಾಕಿ ಇವೆ; ಇದಕ್ಕೆ ಕಾರಣಗಳೇನು ; ಇದನ್ನು ಯಾವ ಕಾಲಮಿತಿಯೊಳಗೆ ಪೂರ್ಣಗೊಳಿಸಲಾಗುವುದು ; (ವರ್ಷವಾರು, ದೇವಸ್ಥಾನವಾರು ವಿವರ ನೀಡುವುದು)

(ಇ) ಈ ದುರಸ್ಥಿ ಕಾಮಗಾರಿಗಾಗಿ ಕಳೆದ ೩ ವರ್ಷಗಳಲ್ಲಿ ಬಿಡುಗಡೆಯಾದ, ಖರ್ಚಾಗಿರುವ ಹಣವೆಷ್ಟು ? (ವರ್ಷವಾರು ಸಂಪೂರ್ಣ ವಿವರ ನೀಡುವುದು)

## ಕೇಂದ್ರ ಸರ್ಕಾರದಿಂದ ಬಿಡುಗಡೆಯಾದ ಅನುದಾನದ ಕುರಿತು

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೬೧೧ (೮೧೩) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ವಿವಿಧ ಯೋಜನೆಗಳಡಿ ಕೇಂದ್ರ ಸರ್ಕಾರದಿಂದ ಕರ್ನಾಟಕ ರಾಜ್ಯದ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆಗೆ ಕಳೆದ ೧೦ ವರ್ಷಗಳಿಂದ ಬಿಡುಗಡೆಯಾದ ಅನುದಾನ ಎಷ್ಟು ; (ವರ್ಷವಾರು ವಿವರ ನೀಡುವುದು)

(ಆ) ಈ ಅನುದಾನದಲ್ಲಿ ಎಷ್ಟು ಅನುದಾನವನ್ನು ಯಾವ ಯಾವ ಯೋಜನೆಗಳಿಗೆ ಬಳಕೆ ಮಾಡಿಕೊಳ್ಳಲಾಗಿದೆ ; (ವರ್ಷವಾರು, ಯೋಜನೆವಾರು ಪೂರ್ಣ ವಿವರ ನೀಡುವುದು)

(ಇ) ಮಂಜೂರಾದ ಅನುದಾನದಲ್ಲಿ ಬಳಕೆಯಾಗದೆ ಬಾಕಿ ಉಳಿದಿರುವ ಅನುದಾನವೆಷ್ಟು ; (ವರ್ಷವಾರು ಪೂರ್ಣ ವಿವರ ನೀಡುವುದು)

(ಈ) ಉಳಿಕೆಯಾಗಿದ್ದಲ್ಲಿ, ಇದಕ್ಕೆ ಕಾರಣಗಳೇನು ; ಯೋಜನೆವಾರು, ವರ್ಷವಾರು ಕಾರಣಗಳ ಪೂರ್ಣ ವಿವರ ನೀಡುವುದು ?

## ಇಂಧನ ಇಲಾಖೆಗೆ ಕೇಂದ್ರ ಸರ್ಕಾರದಿಂದ ಬಿಡುಗಡೆಯಾದ ಅನುದಾನದ ಕುರಿತು

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೬೧೨ (೮೧೫) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ವಿವಿಧ ಯೋಜನೆಗಳಡಿ ಕೇಂದ್ರ ಸರ್ಕಾರದಿಂದ ಕರ್ನಾಟಕ ರಾಜ್ಯದ ಇಂಧನ ಇಲಾಖೆಗೆ ಕಳೆದ ೧೦ ವರ್ಷಗಳಿಂದ ಬಿಡುಗಡೆಯಾದ ಅನುದಾನ ಎಷ್ಟು ; (ವರ್ಷವಾರು ವಿವರ ನೀಡುವುದು)

(ಆ) ಈ ಅನುದಾನದಲ್ಲಿ ಎಷ್ಟು ಅನುದಾನವನ್ನು ಯಾವ ಯಾವ ಯೋಜನೆಗಳಿಗೆ ಬಳಕೆ ಮಾಡಿಕೊಳ್ಳಲಾಗಿದೆ ; (ವರ್ಷವಾರು, ಯೋಜನೆವಾರು ಪೂರ್ಣ ವಿವರ ನೀಡುವುದು)

(ಇ) ಮಂಜೂರಾದ ಅನುದಾನದಲ್ಲಿ ಬಳಕೆಯಾಗದೆ ಬಾಕಿ ಉಳಿದಿರುವ ಅನುದಾನವೆಷ್ಟು ; ಉಳಿಕೆಯಾಗಲು ಕಾರಣಗಳೇನು? (ಯೋಜನೆವಾರು, ವರ್ಷವಾರು ಪೂರ್ಣ ವಿವರ ನೀಡುವುದು)

## ರಾಜ್ಯಕ್ಕೆ ಕೇಂದ್ರ ಸರ್ಕಾರದಿಂದ ಬಿಡುಗಡೆಯಾದ ಅನುದಾನದ ಕುರಿತು

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೬೧೩ (೮೧೬) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ವಿವಿಧ ಯೋಜನೆಗಳಡಿ ಕೇಂದ್ರ ಸರ್ಕಾರದಿಂದ ಕರ್ನಾಟಕ ರಾಜ್ಯದ ಕೃಷಿ ಇಲಾಖೆಗೆ ಕಳೆದ ೧೦ ವರ್ಷಗಳಿಂದ ಬಿಡುಗಡೆಯಾದ ಅನುದಾನ ಎಷ್ಟು ; (ವರ್ಷಾವಾರು ವಿವರ ನೀಡುವುದು)

(ಆ) ಈ ಅನುದಾನದಲ್ಲಿ ಎಷ್ಟು ಅನುದಾನವನ್ನು ಯಾವ ಯಾವ ಯೋಜನೆಗಳಿಗೆ ಬಳಕೆ ಮಾಡಿಕೊಳ್ಳಲಾಗಿದೆ ; (ವರ್ಷಾವಾರು, ಯೋಜನೆವಾರು ವಿವರ ನೀಡುವುದು)

(ಇ) ಮಂಜೂರಾದ ಅನುದಾನದಲ್ಲಿ ಬಳಕೆಯಾಗದೆ ಬಾಕಿ ಉಳಿದಿರುವ ಅನುದಾನವೆಷ್ಟು ; ಇದಕ್ಕೆ ಕಾರಣಗಳೇನು? (ಯೋಜನೆವಾರು, ವರ್ಷವಾರು ವಿವರ ನೀಡುವುದು)

# ರಾಜ್ಯದ ಪಶುಸಂಗೋಪನಾ ಇಲಾಖೆಗೆ ಕೇಂದ್ರದಿಂದ ಬಿಡುಗಡೆಯಾದ ಅನುದಾನದ ಕುರಿತು

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೬೧೪ (೮೧೭) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ವಿವಿಧ ಯೋಜನೆಗಳಡಿ ಕೇಂದ್ರ ಸರ್ಕಾರದಿಂದ ಕರ್ನಾಟಕ ರಾಜ್ಯದ ಪಶುಸಂಗೋಪನೆ ಇಲಾಖೆಗೆ ಕಳೆದ ೧೦ ವರ್ಷಗಳಿಂದ ಬಿಡುಗಡೆಯಾದ ಅನುದಾನ ಎಷ್ಟು ; (ವರ್ಷಾವಾರು ವಿವರ ನೀಡುವುದು)

(ಆ) ಈ ಅನುದಾನದಲ್ಲಿ ಎಷ್ಟು ಅನುದಾನವನ್ನು ಯಾವ ಯಾವ ಯೋಜನೆಗಳಿಗೆ ಬಳಕೆ ಮಾಡಿಕೊಳ್ಳಲಾಗಿದೆ ; (ವರ್ಷಾವಾರು, ಯೋಜನೆವಾರು ಪೂರ್ಣ ವಿವರ ನೀಡುವುದು)

(ಇ) ಮಂಜೂರಾದ ಅನುದಾನದಲ್ಲಿ ಬಳಕೆಯಾಗದೆ ಬಾಕಿ ಉಳಿದಿರುವ ಅನುದಾನವೆಷ್ಟು ; (ವರ್ಷಾವಾರು ಪೂರ್ಣ ವಿವರ ನೀಡುವುದು)

(ಈ) ಉಳಿಕೆಯಾಗಿದ್ದಲ್ಲಿ, ಇದಕ್ಕೆ ಕಾರಣಗಳೇನು ? (ಯೋಜನೆವಾರು, ವರ್ಷಾವಾರು ಕಾರಣಗಳ ಪೂರ್ಣ ವಿವರ ನೀಡುವುದು)

**ಕೆ.ಆರ್. ಮಹಾಲಕ್ಷ್ಮಿ**
ಕಾರ್ಯದರ್ಶಿ (ಪ್ರ)
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು–59/ಕಾ.ಸೂ. 0317/1,000 ಪ್ರತಿಗಳು/15–02–2018